VOLUME: 16 | 09 JULY 2026 | ಗುರುವಾರ | RS: 2 | PAGE: 06 ISSUE: 148 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಕನ್ನಡತಿ, ಕಿಸ್ ಖ್ಯಾತಿಯ ನಟಿ ಶ್ರೀಲೀಲಾ ಸಾಲು ಸಾಲಾಗಿ ಸ್ಟಾರ್ ನಟರ ಚಿತ್ರಗಳಲ್ಲಿ ನಟಿಸುತ್ತಿದ್ದಾರೆ. ರಶ್ಮಿಕಾ ಮಂದಣ್ಣ ಒಂದು ಕಡೆ ಸ್ಟಾರ್ ಸಿನಿಮಾಗಳನ್ನು ಒಪ್ಪಿಕೊಳ್ಳುತ್ತಿದ್ದರೆ, ಶ್ರೀಲೀಲಾ ಅವರು ರಶ್ಮಿಕಾ ಮಂದಣ್ಣ ಹಾದಿಯನ್ನೇ ತುಳಿಯುತ್ತಿದ್ದಾರೆ. ಸದ್ಯ ಶ್ರೀಲೀಲಾ ಹೆಸರಾಂತ ನಟ ಅಲ್ಲು ಅರ್ಜುನ್ ಸಿನಿಮಾಗೆ ನಾಯಕಿಯಾಗಿ ಆಯ್ಕೆಯಾಗಿದ್ದಾರೆ ಎಂದು ಹೇಳಲಾಗುತ್ತಿದೆ.



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

prabhavaa.com
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಶಿರಾಡಿಯಲ್ಲಿ ಆತಂಕದ ವಾತಾವರಣ

ಹಾಸನ: ಜಿಲ್ಲೆಯಲ್ಲಿ ಧಾರಾಕಾರ ಮಳೆ ಮುಂದುವರಿದಿರುವ ಹಿನ್ನೆಲೆಯಲ್ಲಿ ಸಕಲೇಶಪುರ ತಾಲೂಕಿನ ಶಿರಾಡಿಘಾಟ್ ವ್ಯಾಪ್ತಿಯಲ್ಲಿ ಗುಡ್ಡ ಕುಸಿತ ಸಂಭವಿಸಿದ್ದು, ಬೆಂಗಳೂರು–ಮಂಗಳೂರು ರಾಷ್ಟ್ರೀಯ ಹೆದ್ದಾರಿ 75ರಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ.

ಶಿರಾಡಿಘಾಟ್‌ನ ಕಪ್ಪಳ್ಳಿ ಬಳಿ ಸಕಲೇಶಪುರದಿಂದ ಮಂಗಳೂರು ಕಡೆ ಸಾಗುವ ಮಾರ್ಗದಲ್ಲಿ ಗುಡ್ಡದ ಮಣ್ಣು ಕುಸಿದು ರಸ್ತೆಗೆ ಬಿದ್ದಿದೆ. ಕೂಡಲೇ ಜೆಸಿಬಿ ಯಂತ್ರಗಳ ಮೂಲಕ ಮಣ್ಣು ತೆರವು ಕಾರ್ಯ ಕೈಗೊಳ್ಳಲಾಗಿದ್ದು, ವಾಹನ ಸಂಚಾರಕ್ಕೆ ಯಾವುದೇ ದೊಡ್ಡ ಮಟ್ಟದ ಅಡಚಣೆ ಉಂಟಾಗದಂತೆ ಕ್ರಮ ವಹಿಸಲಾಗಿದೆ.

ಚತುಷ್ಪಥ ರಸ್ತೆ ನಿರ್ಮಾಣದ ಸಂದರ್ಭದಲ್ಲಿ ರಸ್ತೆಯ ಎರಡೂ ಬದಿಗಳಲ್ಲಿದ್ದ ಎತ್ತರದ ಗುಡ್ಡಗಳನ್ನು ಕಡಿದು ರಸ್ತೆ ನಿರ್ಮಿಸಲಾಗಿತ್ತು. ಇದೀಗ ನಿರಂತರ ಮಳೆಯಿಂದ ಮಣ್ಣು ಸಡಿಲಗೊಂಡು ಗುಡ್ಡದ ಭಾಗಗಳು ಜಾರುತ್ತಿದ್ದು, ಮಣ್ಣು ಹಾಗೂ ಗಿಡಗಳ ಸಮೇತ ಹೆದ್ದಾರಿಗೆ ಬೀಳುತ್ತಿವೆ. ಇದೇ ರೀತಿ ಮಳೆ ಮುಂದುವರಿದರೆ ದೊಡ್ಡ ಪ್ರಮಾಣದಲ್ಲಿ ಗುಡ್ಡ ಕುಸಿತ ಸಂಭವಿಸುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತವಾಗಿದೆ.

ಶಿರಾಡಿಘಾಟ್‌ನಲ್ಲಿ ಗುಡ್ಡ ಕುಸಿತ ಸಂಭವಿಸುವ ಸಾಧ್ಯತೆ ಇರುವ ಪ್ರದೇಶಗಳನ್ನು ಜಿಲ್ಲಾಡಳಿತ ಈಗಾಗಲೇ ಗುರುತಿಸಿದ್ದು, ಅಧಿಕಾರಿಗಳು ಪರಿಸ್ಥಿತಿಯ ಮೇಲೆ ನಿಗಾ ವಹಿಸಿದ್ದಾರೆ. ರಾಷ್ಟ್ರೀಯ ಹೆದ್ದಾರಿ 75ರಲ್ಲಿ ಸಂಚರಿಸುವ ವಾಹನ ಸವಾರರು ಎಚ್ಚರಿಕೆಯಿಂದ ಪ್ರಯಾಣಿಸುವಂತೆ ಸೂಚಿಸಲಾಗಿದೆ.

ಇದೇ ವೇಳೆ ರಸ್ತೆ ನಿರ್ಮಾಣ ಕಾಮಗಾರಿಯಲ್ಲಿನ ಅವೈಜ್ಞಾನಿಕ ಕ್ರಮಗಳು ಹಾಗೂ ಕಳಪೆ ಕಾಮಗಾರಿಗಳೇ ಗುಡ್ಡ ಕುಸಿತಕ್ಕೆ ಕಾರಣವಾಗುತ್ತಿವೆ ಎಂಬ ಆರೋಪಗಳು ಕೇಳಿಬಂದಿವೆ.

ಗುಡ್ಡಗಳನ್ನು ಅವೈಜ್ಞಾನಿಕವಾಗಿ ಕಡಿದು ರಸ್ತೆ ನಿರ್ಮಿಸಿರುವುದು ಹಾಗೂ ಕಾಮಗಾರಿಗಳಲ್ಲಿ ವಿಳಂಬವಾಗಿರುವುದು ಸಮಸ್ಯೆಗೆ ಕಾರಣವಾಗಿದೆ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಕಲೇಶಪುರ ಭಾಗದಲ್ಲಿ ಕಳೆದ ಹಲವು ವರ್ಷಗಳಿಂದ ಮಳೆಗಾಲದಲ್ಲಿ ಗುಡ್ಡ ಕುಸಿತ ಘಟನೆಗಳು ಮರುಕಳಿಸುತ್ತಿದ್ದು, ಶಾಶ್ವತ ಪರಿಹಾರ ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರು ಒತ್ತಾಯಿಸಿದ್ದಾರೆ.

## ರೈತರ ನೆರವಿಗೆ ಬನ್ನಿ: ವಿಜಯೇಂದ್ರ

ಬೆಂಗಳೂರು: ರಾಜ್ಯದ ಹಲವು ಭಾಗಗಳಲ್ಲಿ ಮಳೆಯ ತೀವ್ರ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಅವರ ನೆರವಿಗೆ ರಾಜ್ಯ ಸರ್ಕಾರ ತಕ್ಷಣ ಸ್ಪಂದಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಆಗ್ರಹಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಳೆ ಅಭಾವದಿಂದ ಕೃಷಿ ಚಟುವಟಿಕೆಗಳಿಗೆ ತೀವ್ರ ಹಿನ್ನಡೆಯಾಗಿದ್ದು, ಅನ್ನದಾತರ ಸಂಕಷ್ಟ ನಿವಾರಿಸುವುದು ಸರ್ಕಾರದ ಪ್ರಮುಖ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ರೈತರ ಸಾಲಮನ್ನಾ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೀಡಿರುವ ಹೇಳಿಕೆಯನ್ನು ಗಮನಿಸಿದ್ದೇನೆ. ಸರ್ಕಾರ ರೈತರ ಪರವಾಗಿ ಪ್ರಾಮಾಣಿಕವಾಗಿ ಕ್ರಮ ಕೈಗೊಳ್ಳುತ್ತದೆಯೇ ಅಥವಾ ಕೇವಲ ಘೋಷಣೆಗಳಿಗೆ ಸೀಮಿತವಾಗುತ್ತದೆಯೇ ಎಂಬುದನ್ನು ಕಾದು ನೋಡುತ್ತೇವೆ. ಈ ವಿಷಯವನ್ನು ವಿಧಾನಮಂಡಲದಲ್ಲೂ ಪ್ರಸ್ತಾಪಿಸಿ ಚರ್ಚೆ ನಡೆಸಲಾಗುವುದು ಎಂದು ತಿಳಿಸಿದರು.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೂರು ವರ್ಷಗಳಲ್ಲಿ ರೈತರ ಸಮಸ್ಯೆಗಳಿಗೆ ಸಮರ್ಪಕವಾಗಿ ಸ್ಪಂದಿಸಿಲ್ಲ. ಬರ ಪರಿಸ್ಥಿತಿ ಎದುರಾದಾಗಲೂ ಅಗತ್ಯ ಪರಿಹಾರ ನೀಡದೆ ಎಲ್ಲ ವಿಚಾರಕ್ಕೂ ಕೇಂದ್ರ ಸರ್ಕಾರವನ್ನೇ ದೂರಿದೆ ಎಂದು ಅವರು ಆರೋಪಿಸಿದರು.

ವಿಧಾನ ಪರಿಷತ್ ಚುನಾವಣೆಯಲ್ಲಿ ನಡೆದಿರುವ ಅಡ್ಡ ಮತದಾನದ ಕುರಿತು ಪ್ರತಿಕ್ರಿಯಿಸಿದ ವಿಜಯೇಂದ್ರ, ಈ ವಿಷಯವನ್ನು ಈಗಾಗಲೇ ಪಕ್ಷದ ಕೇಂದ್ರ ವರಿಷ್ಠರ ಗಮನಕ್ಕೆ ತರಲಾಗಿದ್ದು, ಅವರು ಸೂಕ್ತ ಸಂದರ್ಭದಲ್ಲಿ ಅಗತ್ಯ ನಿರ್ಧಾರ ಕೈಗೊಳ್ಳಲಿದ್ದಾರೆ ಎಂದು ಹೇಳಿದರು.

ಚುನಾವಣಾ ಆಯೋಗ ನಡೆಸುತ್ತಿದೆ. ರಾಜ್ಯ ಸರ್ಕಾರವು ಸಾಂವಿಧಾನಿಕ ಸಂಸ್ಥೆಯಾದ ಚುನಾವಣಾ ಆಯೋಗದ ಮೇಲೆ ವಿಶ್ವಾಸ ಇಟ್ಟು ಎಸ್‌ಐಆರ್ ಪ್ರಕ್ರಿಯೆಗೆ ಸಹಕಾರ ನೀಡಬೇಕು. ಆದರೆ ಕಾಂಗ್ರೆಸ್ ಸರ್ಕಾರ ಈ ಪ್ರಕ್ರಿಯೆಗೆ ಅಡ್ಡಿಪಡಿಸುವ ಕೆಲಸ ಮಾಡುತ್ತಿದೆ ಎಂದು ಆರೋಪಿಸಿದರು.




ಮಧ್ಯಪ್ರಾಚ್ಯದಲ್ಲಿ ಮತ್ತೆ ಉದ್ವಿಗ್ನ ಪರಿಸ್ಥಿತಿ ತೀವ್ರಗೊಂಡಿದೆ. ಹಾರ್ಮುಜ್ ಜಲಸಂಧಿಯಲ್ಲಿ ಮೂರು ವಾಣಿಜ್ಯ ಹಡಗುಗಳ ಮೇಲೆ ದಾಳಿ ನಡೆದ ಬೆನ್ನಲ್ಲೇ ಅಮೆರಿಕ ಇರಾನ್‌ನ ಹಲವು ಗುರಿಗಳ ಮೇಲೆ ಭಾರೀ ವೈಮಾನಿಕ ದಾಳಿ ನಡೆಸಿದೆ. ಈ ಬೆಳವಣಿಗೆಯಿಂದ ಅಮೆರಿಕ ಇರಾನ್ ನಡುವಿನ ಬಿಕ್ಕಟ್ಟು ಮತ್ತಷ್ಟು ಉಲ್ಬಣಗೊಂಡಿದ್ದು, ಇತ್ತೀಚೆಗೆ ಎರಡೂ ರಾಷ್ಟ್ರಗಳ ನಡುವೆ ನಡೆದಿದ್ದ ತಿಳುವಳಿಕೆ ಒಪ್ಪಂದದ ಭವಿಷ್ಯದ ಬಗ್ಗೆಯೂ ಅನುಮಾನಗಳು ಮೂಡಿವೆ.

## ವಾಹನ ದುರ್ಬಳಕೆಗೆ ಕಡಿವಾಣ: ಹೊಸ ಮಾರ್ಗಸೂಚಿ

ಬೆಂಗಳೂರು: ಶಾಸಕರ ಭವನದಲ್ಲಿ ಜನಪ್ರತಿನಿಧಿಗಳಿಗಾಗಿ ಮೀಸಲಿಟ್ಟಿರುವ ಸರ್ಕಾರಿ ವಾಹನಗಳ ದುರ್ಬಳಕೆಯನ್ನು ತಡೆಯಲು ಕರ್ನಾಟಕ ವಿಧಾನಸಭೆ ಸಚಿವಾಲಯವು ಕಠಿಣ ಕ್ರಮ ಕೈಗೊಂಡಿದೆ. ಇನ್ನು ಮುಂದೆ ಶಾಸಕರು ತಮ್ಮ ಆಪ್ತ ಸಹಾಯಕರು, ಅತಿಥಿಗಳು ಅಥವಾ ಪರಿಚಯಸ್ಥರಿಗೆ ಈ ವಾಹನಗಳನ್ನು ಶಿಫಾರಸು ಮಾಡುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ವಿಧಾನಸಭೆ ಸಚಿವಾಲಯದ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ಅವರು ಈ ಸಂಬಂಧ ಹೊಸ ಮಾರ್ಗಸೂಚಿಗಳನ್ನು ಪ್ರಕಟಿಸಿದ್ದಾರೆ. ಅದರಂತೆ ಶಾಸಕರ ಭವನದ ವಾಹನಗಳನ್ನು ಕೇವಲ 'ಗ್ರೇಟರ್ ಬೆಂಗಳೂರು ಅಥಾರಿಟಿ' ವ್ಯಾಪ್ತಿಯೊಳಗೆ ಮಾತ್ರ ಬಳಸಲು ಅವಕಾಶ ನೀಡಲಾಗಿದೆ. ಬೆಂಗಳೂರು ನಗರದ ಹೊರಗೆ ವಾಹನಗಳನ್ನು ಕೊಂಡೊಯ್ಯಲು ಅವಕಾಶವಿರುವುದಿಲ್ಲ. ಆದರೆ ವಿಮಾನ ನಿಲ್ದಾಣಕ್ಕೆ ತೆರಳಲು ಮಾತ್ರ ವಿನಾಯಿತಿ ನೀಡಲಾಗಿದೆ.

ತುರ್ತು ಸಂದರ್ಭಗಳಲ್ಲಿ ಬೆಂಗಳೂರಿನಿಂದ ಹೊರಗೆ ವಾಹನ ಬಳಸಬೇಕಾದ ಅನಿವಾರ್ಯತೆ ಎದುರಾದರೆ ವಿಧಾನಸಭೆ ಸ್ಪೀಕರ್ ಅವರ ಪೂರ್ವಾನುಮತಿ ಪಡೆಯುವುದು ಕಡ್ಡಾಯ ಎಂದು ಆದೇಶದಲ್ಲಿ ತಿಳಿಸಲಾಗಿದೆ.



ಈ ಹಿಂದೆ ಶಾಸಕರ ಹೆಸರಿನಲ್ಲಿ ಅವರ ಬೆಂಬಲಿಗರು, ಪಕ್ಷದ ಕಾರ್ಯಕರ್ತರು ಹಾಗೂ ಅತಿಥಿಗಳು ಶಿಫಾರಸು ಪತ್ರಗಳನ್ನು ನೀಡಿ ಹೊರಜಿಲ್ಲೆಗಳಿಗೆ ಪ್ರಯಾಣಿಸಲು ಶಾಸಕರ ಭವನದ ವಾಹನಗಳನ್ನು ಬಳಸುತ್ತಿದ್ದರು ಎಂಬ ದೂರುಗಳು ಬಂದಿದ್ದವು.

ಇದರಿಂದ ಬೆಂಗಳೂರಿಗೆ ಆಗಮಿಸುವ ಶಾಸಕರಿಗೆ ತುರ್ತು ಸಂದರ್ಭಗಳಲ್ಲಿ ವಾಹನಗಳ ಕೊರತೆ ಎದುರಾಗುತ್ತಿತ್ತು.

ಸದ್ಯ ವಿಧಾನಸಭೆ ಸದಸ್ಯರಿಗಾಗಿ, ಸ್ಪೀಕರ್ ಮತ್ತು ಉಪಸಭಾಪತಿ ಸೇರಿದಂತೆ ಸುಮಾರು 80 ವಾಹನಗಳು ಲಭ್ಯವಿವೆ. ಅಲ್ಲದೆ ವಿಧಾನ ಪರಿಷತ್ ಸದಸ್ಯರು ಹಾಗೂ ಮಾಜಿ ಸದಸ್ಯರಿಗಾಗಿ ಸುಮಾರು 40 ವಾಹನಗಳ ವ್ಯವಸ್ಥೆ ಇದೆ. ವಾಹನಗಳು ಮತ್ತು ಚಾಲಕರ ಕೊರತೆಯನ್ನು ಗಮನದಲ್ಲಿಟ್ಟುಕೊಂಡು ಈ ಕಠಿಣ ನಿರ್ಧಾರ ಕೈಗೊಳ್ಳಲಾಗಿದೆ.

ಹೊಸ ನಿಯಮದ ಪ್ರಕಾರ, ಶಾಸಕರ ಭವನದ ವಾಹನ ಬಳಕೆಗೆ ಪ್ರತಿ ಕಿಲೋಮೀಟರ್‌ಗೆ 8 ರೂ. ನಿಂದ 12 ರೂ.ವರೆಗೆ ಶುಲ್ಕ ನಿಗದಿಪಡಿಸಲಾಗಿದೆ. ಈ ವ್ಯವಹಾರವನ್ನು ಸಂಪೂರ್ಣವಾಗಿ ನಗದು ರಹಿತಗೊಳಿಸಲಾಗಿದ್ದು, ಶಾಸಕರ ಮಾಸಿಕ ವೇತನದಿಂದಲೇ ನೇರವಾಗಿ ಹಣ ಕಡಿತಗೊಳಿಸಲಾಗುತ್ತದೆ.

ಮಾಜಿ ಶಾಸಕರಾಗಿದ್ದರೆ ಅವರ ಪಿಂಚಣಿಯಿಂದ ಮೊತ್ತವನ್ನು ಕಡಿತ ಮಾಡಲಾಗುತ್ತದೆ.

ಈ ವ್ಯವಸ್ಥೆಯಿಂದ ತಮ್ಮ ಹೆಸರಿನಲ್ಲಿ ಯಾರು ವಾಹನ ಬಳಸಿದ್ದಾರೆ ಎಂಬ ಮಾಹಿತಿ ಶಾಸಕರಿಗೆ ಸುಲಭವಾಗಿ ಲಭ್ಯವಾಗಲಿದ್ದು, ವಾಹನ ಬಳಕೆಯಲ್ಲಿ ಪಾರದರ್ಶಕತೆ ಹೆಚ್ಚಾಗಲಿದೆ ಎಂದು ವಿಧಾನಸಭೆ ಸಚಿವಾಲಯದ ಮೂಲಗಳು ತಿಳಿಸಿವೆ.

## ಚುನಾವಣಾ ಆಯೋಗಕ್ಕೆ ಹೈಕೋರ್ಟ್ ನೋಟೀಸ್

ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಕೆಲ ವಾರ್ಡ್‌ಗಳಿಗೆ ಪರ್ಯಾಯ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆಗೆ (ಎಸ್‌ಐಆರ್) ಮುಂದಾಗಿರುವ ಕ್ರಮ ಪ್ರಶ್ನಿಸಿ ಸಲ್ಲಿಕೆಯಾಗಿರುವ ಅರ್ಜಿ ಸಂಬಂಧ ರಾಜ್ಯ ಚುನಾವಣಾ ಆಯೋಗಕ್ಕೆ ಕರ್ನಾಟಕ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

ದೇಶದಾದ್ಯಂತ ಕೇಂದ್ರ ಚುನಾವಣಾ ಆಯೋಗ ಹಮ್ಮಿಕೊಂಡಿರುವ ಎಸ್‌ಐಆರ್ ಪ್ರಕ್ರಿಯೆ ಚಾಲ್ತಿಯಲ್ಲಿರುವಾಗಲೇ, ಬೆಂಗಳೂರಿನ ಕೆಲ ವಾರ್ಡ್‌ಗಳಿಗೆ ಪ್ರತ್ಯೇಕ ಹಾಗೂ ಸಮಾನಾಂತರ ಎಸ್‌ಐಆರ್ ನಡೆಸಲು ರಾಜ್ಯ ಚುನಾವಣಾ ಆಯೋಗ ಜೂನ್ 19ರಂದು ಹೊರಡಿಸಿರುವ ಆದೇಶ ರದ್ದು ಕೋರಿ ಬೆಂಗಳೂರಿನ ವಿವೇಕ್ ಸೇರಿ ಐದು ಮಂದಿ ಸಲ್ಲಿಸಿರುವ ಅರ್ಜಿಯನ್ನು ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರ ಏಕಸದಸ್ಯ ಪೀಠ ವಿಚಾರಣೆ ನಡೆಸಿತು.

ಕೆಲ ಕಾಲ ಅರ್ಜಿ ಆಲಿಸಿದ ಪೀಠವು ಪ್ರತಿವಾದಿಗಳಾದ ರಾಜ್ಯ ಚುನಾವಣಾ ಆಯೋಗ, ರಾಜ್ಯ ಸರ್ಕಾರ ಹಾಗೂ ಕೇಂದ್ರ ಚುನಾವಣಾ ಆಯೋಗಕ್ಕೆ ನೋಟಿಸ್ ಜಾರಿಗೊಳಿಸಿತಲ್ಲದೆ, ಅರ್ಜಿಗೆ ಒಂದು ವಾರದೊಳಗೆ ಆಕ್ಷೇಪಣೆ ಸಲ್ಲಿಸುವಂತೆ ಎಲ್ಲ ಪ್ರತಿವಾದಿಗಳಿಗೆ ಸೂಚಿಸಿ ವಿಚಾರಣೆಯನ್ನು ಜುಲೈ 15ಕ್ಕೆ ಮುಂದೂಡಿತು.

ಅಡ್ವೊಕೇಟ್ ಜನರಲ್ ಕೆ ಶಶಿಕಿರಣ್ ಶೆಟ್ಟಿ ಅವರು ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ನೀಡಬೇಕು ಎಂದು ಕೋರಿದರು. ಅರ್ಜಿದಾರರ ಪರವಾಗಿ ವಕೀಲ ವೆಂಕಟೇಶ್ ದಳವಾಯಿ ಹಾಜರಾಗಿದ್ದರು.

ಕೇಂದ್ರ ಸರ್ಕಾರ ಎಸ್‌ಐಆರ್ ನಡೆಸುವುದಾಗಿ 2025ರ ಅಕ್ಟೋಬರ್ 27ರಂದು ಪ್ರಕಟಿಸಿತ್ತು. ಅದರಂತೆ 2026ರ ಜೂನ್ 16ರಂದು ರಾಜ್ಯದಲ್ಲಿ ವಿಧಾನಸಭೆ ಕ್ಷೇತ್ರಗಳ ಮತದಾರರ ಪಟ್ಟಿಯನ್ನು ಜಪ್ತಿ ಮಾಡಿತ್ತು. ಇದಾದ ಮೂರೇ ದಿನಗಳಲ್ಲಿ ಅಂದರೆ ಜೂನ್ 19ರಂದು ರಾಜ್ಯ ಚುನಾವಣಾ ಆಯೋಗ ಸಹ ಜಿಬಿಎಯ ಕೆಲವು ವಾರ್ಡ್‌ಗಳ ಮತಪಟ್ಟಿ ಪರಿಷ್ಕರಣೆ ನಡೆಸಲು ಆದೇಶಿಸಿದೆ ಎಂದು ಅರ್ಜಿದಾರರು ಅರ್ಜಿಯಲ್ಲಿ ಆಕ್ಷೇಪಿಸಿದ್ದಾರೆ.

## ಶೇ.80ರಷ್ಟು ಎಸ್‌ಐಆರ್ ಪೂರ್ಣ...?

ಬೆಂಗಳೂರು: ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ವೇಗ ಪಡೆದುಕೊಂಡಿದ್ದು, ಕೇವಲ ಎಂಟು ದಿನಗಳಲ್ಲಿ ರಾಜ್ಯದ ಒಟ್ಟು 5.54 ಕೋಟಿ ಮತದಾರರ ಪೈಕಿ 4.48 ಕೋಟಿಗೂ ಅಧಿಕ ಮತದಾರರಿಗೆ ಎನ್ಯುಮರೇಷನ್ ಅರ್ಜಿಗಳನ್ನು ವಿತರಿಸಲಾಗಿದೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜುಲೈ 1ರಿಂದ 29ರವರೆಗೆ ನಡೆಯಲಿರುವ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆಮನೆಗೆ ತೆರಳಿ ಅರ್ಜಿಗಳನ್ನು ವಿತರಿಸುತ್ತಿದ್ದು, ಇದುವರೆಗೆ ಶೇ.80.85ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದರು.

ರಾಜ್ಯದ 112 ವಿಧಾನಸಭಾ ಕ್ಷೇತ್ರಗಳಲ್ಲಿ ಶೇ.90ರಷ್ಟು ಹಾಗೂ ಉಳಿದ ಕ್ಷೇತ್ರಗಳಲ್ಲಿ ಶೇ.80ರಷ್ಟು ಮತದಾರರಿಗೆ ಅರ್ಜಿಗಳನ್ನು ವಿತರಿಸಲಾಗಿದೆ. ಆದರೆ ಬೆಂಗಳೂರು ಸೇರಿದಂತೆ ನಗರ ಪ್ರದೇಶಗಳಲ್ಲಿ ಪ್ರಗತಿ ನಿಧಾನವಾಗಿದ್ದು, ಇದುವರೆಗೆ ಸುಮಾರು ಶೇ.40ರಷ್ಟು ಅರ್ಜಿಗಳಷ್ಟೇ ವಿತರಿಸಲಾಗಿದೆ ಎಂದು ಹೇಳಿದರು.

ಬಿಎಲ್‌ಒಗಳು ಮನೆಗಳಿಗೆ ತೆರಳಿದ ವೇಳೆ ಮತದಾರರು ಮನೆಯಲ್ಲಿ ಇಲ್ಲದಿರುವುದು, ಮತದಾರರ ಮರಣ, ಶಾಶ್ವತವಾಗಿ ಸ್ಥಳಾಂತರಗೊಂಡಿರುವುದು, ಗೈರುಹಾಜರಾತಿ ಹಾಗೂ ಅರ್ಜಿಗೆ ಸಹಿ ಪಡೆಯಲು ಸಾಧ್ಯವಾಗದಿರುವುದು ಸೇರಿದಂತೆ ವಿವಿಧ ಕಾರಣಗಳಿಂದ 1,30,975 ಅರ್ಜಿಗಳನ್ನು ವಿತರಿಸಲು ಸಾಧ್ಯವಾಗಿಲ್ಲ ಎಂದು ಅವರು ಮಾಹಿತಿ ನೀಡಿದರು.

ರಾಜ್ಯದ 59,050 ಮತಗಟ್ಟೆಗಳಲ್ಲಿ 1.24 ಲಕ್ಷಕ್ಕೂ ಹೆಚ್ಚು ಬಿಎಲ್‌ಒಗಳನ್ನು ನಿಯೋಜಿಸಲಾಗಿದ್ದು, ಮನೆಮನೆಗೆ ತೆರಳಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಮಾಯಕೊಂಡ, ಹಿರೇಕೆರೂರು, ಕುಮಟ ಹಾಗೂ ದೇವದುರ್ಗ ಕ್ಷೇತ್ರಗಳಲ್ಲಿ ಶೇ.100ರಷ್ಟು ಅರ್ಜಿ ವಿತರಣೆ ಪೂರ್ಣಗೊಂಡಿದೆ. ಬೆಂಗಳೂರಿನ ಬೊಮ್ಮನಹಳ್ಳಿ ಕ್ಷೇತ್ರದಲ್ಲಿ ಶೇ.36.59ರಷ್ಟು ಅರ್ಜಿಗಳು ವಿತರಿಸಲಾಗಿದೆ ಎಂದು ತಿಳಿಸಿದರು.

ಮತದಾರರಿಂದ ಭರ್ತಿ ಮಾಡಿದ ಅರ್ಜಿಗಳ ಸಂಗ್ರಹ ಮತ್ತು ಡಿಜಿಟಲೀಕರಣ ಪ್ರಕ್ರಿಯೆಯೂ ಆರಂಭವಾಗಿದ್ದು, ಇದುವರೆಗೆ ಶೇ.9.48ರಷ್ಟು ಪ್ರಗತಿ ಸಾಧಿಸಲಾಗಿದೆ. ಇದೇ ವೇಳೆ 1.63 ಲಕ್ಷಕ್ಕೂ ಹೆಚ್ಚು ಮತದಾರರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದಾರೆ ಎಂದು ಅನ್ಬುಕುಮಾರ್ ಹೇಳಿದರು.

ಮತದಾರರು ಅರ್ಜಿಯಲ್ಲಿ ನೀಡುವ ಮಾಹಿತಿಯನ್ನು ಯಾವುದೇ ಕಾರಣಕ್ಕೂ ಬದಲಾಯಿಸದಂತೆ ಬಿಎಲ್‌ಒಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಈಗಾಗಲೇ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಸ್ವೀಕೃತಿ ಪಡೆದಿರುವವರು ಕಡ್ಡಾಯವಾಗಿ ಮತ್ತೆ ಭೌತಿಕ ಅರ್ಜಿ ಭರ್ತಿ ಮಾಡುವ ಅಗತ್ಯವಿಲ್ಲ. ಆದರೆ ಇಚ್ಛೆಯಿದ್ದರೆ ಮತ್ತೊಮ್ಮೆ ಅರ್ಜಿ ಸಲ್ಲಿಸಬಹುದು. ಅಂತಹ ಅರ್ಜಿಗಳನ್ನು ಬಿಎಲ್‌ಒಗಳು ತಿರಸ್ಕರಿಸುವಂತಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

## ದಕ್ಷಿಣಕ್ಕೆ 2ನೇ ಏರ್‌ಪೋರ್ಟ್..?

ಬೆಂಗಳೂರು: ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣದ ಯೋಜನೆಗೆ ರಾಜ್ಯ ಸರ್ಕಾರ ವೇಗ ನೀಡಿದ್ದು, ಈ ಸಂಬಂಧ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಅಧಿಕಾರಿಗಳೊಂದಿಗೆ ಮಹತ್ವದ ಪರಿಶೀಲನಾ ಸಭೆ ನಡೆಸಿದರು.

ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರು ನಗರದ ದಕ್ಷಿಣ ಭಾಗದಲ್ಲಿ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸುವ ಕುರಿತು ಸರ್ಕಾರ ಗಂಭೀರವಾಗಿ ಪರಿಶೀಲನೆ ನಡೆಸುತ್ತಿದೆ ಎಂದು ತಿಳಿಸಿದರು.

ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಭವಿಷ್ಯದ ಅಗತ್ಯಗಳನ್ನು ಮನಗಂಡು ಹೊಸ ವಿಮಾನ ನಿಲ್ದಾಣ ನಿರ್ಮಿಸಲು ಯೋಜನೆ ರೂಪಿಸಲಾಗಿದೆ ಎಂದು ಹೇಳಿದರು.

ಈ ಹಿಂದೆ ನಡೆದಿರುವ ಅಧ್ಯಯನಗಳು ಹಾಗೂ ಸ್ಥಳಗಳ ಪರಿಶೀಲನೆ ಕುರಿತ ವರದಿಯನ್ನು ಅಧಿಕಾರಿಗಳು ಸಭೆಯಲ್ಲಿ ಸಲ್ಲಿಸಿದ್ದಾರೆ. ಸ್ಥಳ ಆಯ್ಕೆ ಮಾಡುವಾಗ ಸಾಧ್ಯವಾದಷ್ಟು ಗ್ರಾಮಗಳ ಸ್ಥಳಾಂತರ ತಪ್ಪಿಸುವುದು, ಗುಡ್ಡಗಾಡು ಪ್ರದೇಶಗಳನ್ನು ಹಾಗೂ ತಾಂತ್ರಿಕವಾಗಿ ಸೂಕ್ತ ಸ್ಥಳವನ್ನು ಗುರುತಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

## 'ಬರ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರಿದರೆ ಕಠಿಣ ಕ್ರಮ'

ಕಲಬುರಗಿ: ರಾಜ್ಯದಲ್ಲಿ ಬರ ಪರಿಸ್ಥಿತಿ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಎಚ್ಚರಿಕೆ ನೀಡಿದ್ದಾರೆ.

ಕಲಬುರಗಿಯಲ್ಲಿ ನಡೆದ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಜನಪರ ಕೆಲಸ ಮಾಡದ ಅಧಿಕಾರಿಗಳನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಆಡಳಿತದ ಪ್ರತಿಯೊಂದು ಹಂತದಲ್ಲಿ ಏನು ನಡೆಯುತ್ತದೆ ಎಂಬ ಅರಿವು ತಮಗಿದೆ. ಅಭಿವೃದ್ಧಿ ವಿಚಾರದಲ್ಲಿ ಯಾವುದೇ ನೆಪಗಳನ್ನು ಕೇಳಲು ಸಿದ್ಧನಿಲ್ಲ, ಫಲಿತಾಂಶವೇ ಮುಖ್ಯ ಎಂದು ಅಧಿಕಾರಿಗಳಿಗೆ ಸ್ಪಷ್ಟ ಸಂದೇಶ ನೀಡಿದರು.

ಉತ್ತರ ಕರ್ನಾಟಕದ ಮೊದಲ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯನ್ನು ಕಲಬುರಗಿಯಲ್ಲಿ ನಡೆಸಲಾಗಿದ್ದು, ಸರ್ವರನ್ನೂ ಒಳಗೊಂಡ ಪರಿಶುದ್ಧ ಆಡಳಿತ, ಅಭಿವೃದ್ಧಿ ಹಾಗೂ ಕಟ್ಟಕಡೆಯ ವ್ಯಕ್ತಿಗೂ ನಾಗರಿಕ ಹಕ್ಕುಗಳನ್ನು ತಲುಪಿಸುವುದು ಸರ್ಕಾರದ ಪ್ರಮುಖ ಗುರಿಯಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ಅಧಿಕಾರಿ ವರ್ಗವು ಅತ್ಯಂತ ಕ್ರಿಯಾಶೀಲ, ಜನಪರ ಹಾಗೂ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು. ಜನರ ಸಮಸ್ಯೆಗಳಿಗೆ ಸ್ಪಂದಿಸಿ ಕೆಲಸ ಮಾಡುವ ಮೂಲಕ ಸರ್ಕಾರದ ಆಶಯಗಳನ್ನು ಈಡೇರಿಸಬೇಕು ಎಂದು ಅವರು ಸೂಚಿಸಿದರು.

ಬಸವಾದಿ ಶರಣರ ಸಮಾನತೆಯ ತತ್ವದಲ್ಲಿ ನಂಬಿಕೆ ಹೊಂದಿರುವುದಾಗಿ ಹೇಳಿದ ಮುಖ್ಯಮಂತ್ರಿ, ಇದೇ ಕಾರಣದಿಂದ ತಮ್ಮ ಮೊದಲ ಉತ್ತರ ಕರ್ನಾಟಕ ಪ್ರವಾಸವನ್ನು ಬಸವಕಲ್ಯಾಣದಿಂದ ಆರಂಭಿಸಿದ್ದೇನೆ. ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಅಭಿವೃದ್ಧಿ ಒಂದೇ ವೇಗದಲ್ಲಿ ಸಾಗಬೇಕು ಎಂದರು.

ಬೀದರ್ ಮತ್ತು ಕಲಬುರಗಿ ಜಿಲ್ಲೆಯ ಜನತೆ ನೀಡಿರುವ ಪ್ರೀತಿ, ಬೆಂಬಲ ಹಾಗೂ ವಿಶ್ವಾಸಕ್ಕೆ ಕೃತಜ್ಞತೆ ಸಲ್ಲಿಸಿದ ಅವರು, ಜನರು ಇಟ್ಟಿರುವ ನಂಬಿಕೆಗೆ ತಕ್ಕಂತೆ ಕೆಲಸ ಮಾಡುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಹೇಳಿದರು.

ತಮ್ಮ ಆಡಳಿತ ಅನುಭವವನ್ನು ಉಲ್ಲೇಖಿಸಿದ ಸಿಎಂ, ತಾಲೂಕು ಪಂಚಾಯಿತಿ ಅಧ್ಯಕ್ಷ ಸ್ಥಾನದಿಂದ ಮುಖ್ಯಮಂತ್ರಿ ಹುದ್ದೆಯವರೆಗೆ ವಿವಿಧ ಹಂತಗಳಲ್ಲಿ ಕಾರ್ಯನಿರ್ವಹಿಸಿದ್ದೇನೆ. ಹೀಗಾಗಿ ಆಡಳಿತದ ಪ್ರತಿಯೊಂದು ಹಂತದ ವಾಸ್ತವಾಂಶಗಳು ನನಗೆ ತಿಳಿದಿವೆ. ಅಧಿಕಾರಿಗಳ ಕಾರ್ಯಕ್ಷಮತೆಯೇ ಮುಖ್ಯವಾಗಿದ್ದು, ಉತ್ತಮವಾಗಿ ಕೆಲಸ ಮಾಡಿದರೆ ಜನರ ಋಣ ತೀರಿಸಿದಂತಾಗುತ್ತದೆ. ಆದರೆ ಜನಪರವಾಗಿ ಕೆಲಸ ಮಾಡದಿದ್ದರೆ ಕ್ರಮ ಅನಿವಾರ್ಯವಾಗುತ್ತದೆ ಎಂದು ಎಚ್ಚರಿಸಿದರು.

ಮತದಾರರ ಪಟ್ಟಿಯ ಪರಿಷ್ಕರಣೆ ಕುರಿತು ಮಾತನಾಡಿದ ಮುಖ್ಯಮಂತ್ರಿ, ಒಬ್ಬನೇ ಒಬ್ಬ ಅರ್ಹ ಮತದಾರ ತನ್ನ ಮತದಾನದ ಹಕ್ಕು ಕಳೆದುಕೊಳ್ಳಬಾರದು. ಇದು ರಾಜಕೀಯ ವಿಚಾರವಲ್ಲ, ಪ್ರತಿಯೊಬ್ಬ ನಾಗರಿಕನ ಹಕ್ಕಿನ ರಕ್ಷಣೆಯಾಗಿದೆ ಎಂದು ಹೇಳಿದರು.

ಬಿಎಲ್‌ಒಗಳು ಪ್ರತಿಯೊಂದು ಮನೆಗೆ ಕನಿಷ್ಠ ಮೂರು ಬಾರಿ ಭೇಟಿ ನೀಡಿ ಅರ್ಹ ಮತದಾರರ ಹೆಸರು ಉಳಿದಿದೆಯೇ ಎಂಬುದನ್ನು ಪರಿಶೀಲಿಸಬೇಕು. ಈ ವಿಚಾರದಲ್ಲಿ ಯಾವುದೇ ರಾಜಿ ಮಾಡಿಕೊಳ್ಳಬಾರದು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ರಾಜ್ಯದ ಅಭಿವೃದ್ಧಿ ಹಾಗೂ ನೀರಿನ ನಿರ್ವಹಣೆ ಕುರಿತು ಮಾತನಾಡಿದ ಮುಖ್ಯಮಂತ್ರಿ, ದೇಶಾದ್ಯಂತ ಮಳೆಯ ಕೊರತೆ ಬಗ್ಗೆ ಆತಂಕವಿದ್ದರೂ ರಾಜ್ಯದ ಪರಿಸ್ಥಿತಿ ಸದ್ಯ ಸಮಾಧಾನಕರವಾಗಿದೆ ಎಂದರು.

BS ಭಾರತ ಸಾರಥಿ
09/07/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಡೇಕೇರ್ ಪ್ರಕರಣ: ಕ್ಯಾಪ್‌ಜೆಮಿನಿಗೆ ನೇರ ಹೊಣೆಗಾರಿಕೆ ಇಲ್ಲ

ಬೆಂಗಳೂರು: ಡೇಕೇರ್ ಕೇಂದ್ರದಲ್ಲಿ ನಡೆದಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಡೇಕೇರ್ ಸೌಲಭ್ಯವನ್ನು ಹೊರಗುತ್ತಿಗೆ ಆಧಾರದಲ್ಲಿ ನಡೆಸಲಾಗಿದ್ದರಿಂದ ಕ್ಯಾಪ್‌ಜೆಮಿನಿ ಸಂಸ್ಥೆಯ ಮೇಲೆ ನೇರ ಹೊಣೆಗಾರಿಕೆ ಇಲ್ಲ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ (ಕೆಎಸ್‌ಸಿಪಿಸಿಆರ್) ತಿಳಿಸಿದೆ.

ನಗರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಆಯೋಗದ ಅಧಿಕಾರಿಗಳು, ಡೇಕೇರ್ ಕೇಂದ್ರವನ್ನು 'ಲಿಟಲ್ ಸ್ಕಾಲರ್ಸ್' ಸಂಸ್ಥೆ ನಿರ್ವಹಿಸುತ್ತಿದ್ದು, ಪ್ರಕರಣದ ಕುರಿತು ಪೊಲೀಸ್ ತನಿಖೆ ಮುಂದುವರಿದಿದೆ. ತನಿಖೆ ಪೂರ್ಣಗೊಳ್ಳುವವರೆಗೆ ಯಾವುದೇ ಅಂತಿಮ ತೀರ್ಮಾನಕ್ಕೆ ಬರಲಾಗುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಪ್ರಕರಣಕ್ಕೆ ಸಂಬಂಧಿಸಿದಂತೆ ಸುಜಾತಾ ಹಾಗೂ ವಿಜಯಲಕ್ಷ್ಮಿ ಎಂಬ ಇಬ್ಬರನ್ನು ಬಂಧಿಸಲಾಗಿದ್ದು, ಇತರರ ಪಾತ್ರದ ಕುರಿತು ತನಿಖೆ ನಡೆಯುತ್ತಿದೆ. ಡೇಕೇರ್ ಕೇಂದ್ರದಲ್ಲಿ ಅನುಸರಿಸಲಾಗುತ್ತಿರುವ ನೀತಿಗಳು, ಕಾರ್ಯವಿಧಾನಗಳು (ಎಸ್‌ಒಪಿ) ಹಾಗೂ ನಿರ್ವಹಣಾ ಕ್ರಮಗಳ ಅನುಸರಣೆಯನ್ನು ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ ಎಂದು ತಿಳಿಸಿದರು.

ಈ ನಡುವೆ ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ (ಎನ್‌ಸಿಪಿಸಿಆರ್) ತಂಡವು ಎರಡು ದಿನಗಳ ಹಿಂದೆ ಡೇಕೇರ್ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ತನ್ನ ವರದಿ ಹಾಗೂ ಶಿಫಾರಸುಗಳನ್ನು ಶೀಘ್ರದಲ್ಲೇ ಸರ್ಕಾರಕ್ಕೆ ಸಲ್ಲಿಸುವ ನಿರೀಕ್ಷೆಯಿದೆ.

ಮಕ್ಕಳ ಸುರಕ್ಷತೆಯನ್ನು ಇನ್ನಷ್ಟು ಬಲಪಡಿಸುವ ಉದ್ದೇಶದಿಂದ ಕೆಎಸ್‌ಸಿಪಿಸಿಆರ್ ಹಲವು ಶಿಫಾರಸುಗಳನ್ನು ಸರ್ಕಾರಕ್ಕೆ ಸಲ್ಲಿಸಲು ನಿರ್ಧರಿಸಿದೆ.

ಡೇಕೇರ್ ಸಿಬ್ಬಂದಿಗೆ ನೇಮಕಕ್ಕೂ ಮುನ್ನ ಕಡ್ಡಾಯ ತರಬೇತಿ ನೀಡುವುದು, ಪರಿಷ್ಕೃತ ಪ್ರಮಾಣಿತ ಕಾರ್ಯಾಚರಣಾ ವಿಧಾನಗಳನ್ನು (ಎಸ್‌ಒಪಿ) ಜಾರಿಗೆ ತರುವುದು ಹಾಗೂ ಪೋಷಕರಿಗೆ ಸಿಸಿಟಿವಿ ದೃಶ್ಯಾವಳಿಗಳನ್ನು ವೀಕ್ಷಿಸುವ ಅವಕಾಶ ಕಲ್ಪಿಸುವಂತಹ ಪಾರದರ್ಶಕ ವ್ಯವಸ್ಥೆಗಳನ್ನು ಜಾರಿಗೆ ತರಲು ಶಿಫಾರಸು ಮಾಡಲಾಗುತ್ತಿದೆ.

# ಕ್ರಿಕೆಟ್ ಕ್ಷೇತ್ರದ ಪ್ರಭಾವಿ 50 ಮಹಿಳೆಯರ ಪಟ್ಟಿ ಬಿಡುಗಡೆ

ಬೆಂಗಳೂರು

ಜಾಗತಿಕ ಕ್ರಿಕೆಟ್ ಉದ್ಯಮಕ್ಕೆ ಸಮರ್ಪಿತ ವಾಣಿಜ್ಯ ಪ್ರಕಟಣೆಯಾದ ಕ್ರಿಕ್‌ಎಕ್ಸಿಕ್ ಮೊದಲ ಬಾರಿಗೆ ಕ್ರಿಕೆಟ್ ಕ್ಷೇತ್ರದ ಆಡಳಿತ, ವ್ಯವಹಾರ ಮತ್ತು ವಾಣಿಜ್ಯ ಚಟುವಟಿಕೆಗಳಲ್ಲಿ ಮಹತ್ವದ ಪ್ರಭಾವ ಬೀರಿರುವ ಮಹಿಳೆಯರನ್ನು ಗುರುತಿಸಿ 'ವಿಮೆನ್ಸ್ ಪವರ್ 50' ಪಟ್ಟಿಯನ್ನು ಬಿಡುಗಡೆ ಮಾಡಿದೆ.



ಕ್ರಿಕೆಟ್ ಮೈದಾನದ ಹೊರಗಿನ ಆಡಳಿತ, ಹೂಡಿಕೆ, ಪ್ರಸಾರ, ಫ್ರಾಂಚೈಸಿ ಮಾಲೀಕತ್ವ ಹಾಗೂ ವಾಣಿಜ್ಯ ಸಹಭಾಗಿತ್ವ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಕೊಡುಗೆ ನೀಡಿರುವ 50 ಮಹಿಳೆಯರನ್ನು ಈ ಪಟ್ಟಿಯಲ್ಲಿ ಸೇರಿಸಲಾಗಿದೆ.

ಪಟ್ಟಿಯಲ್ಲಿ ನೀತಾ ಅಂಬಾನಿ ಮೊದಲ ಸ್ಥಾನ ಪಡೆದಿದ್ದು, ಜೂಹಿ ಚಾವ್ಲಾ ಎರಡನೇ ಹಾಗೂ ಪ್ರೀತಿ ಜಿಂಟಾ ಮೂರನೇ ಸ್ಥಾನದಲ್ಲಿದ್ದಾರೆ. ಅಗ್ರ ಐದು ಸ್ಥಾನಗಳಲ್ಲಿ ನಾಲ್ವರು ಭಾರತೀಯ ಮಹಿಳೆಯರು ಸ್ಥಾನ ಪಡೆದಿರುವುದು ವಿಶೇಷ. ಜೊತೆಗೆ, ಈ ಪಟ್ಟಿಯಲ್ಲಿ ವಿಶ್ವದ ಯಾವುದೇ ದೇಶಕ್ಕಿಂತ ಹೆಚ್ಚು ಪ್ರತಿನಿಧಿತ್ವವನ್ನು ಭಾರತ ದಾಖಲಿಸಿದೆ.

ಮಾಜಿ ಭಾರತೀಯ ಕ್ರಿಕೆಟಿಗ ಮಿಥಾಲಿ ರಾಜ್, ಕ್ರೀಡಾ ನಿರೂಪಕಿಯರಾದ ಸಂಜನಾ ಗಣೇಶನ್ ಹಾಗೂ ಮಯಾಂತಿ ಲ್ಯಾಂಗರ್ ಸೇರಿದಂತೆ ಹಲವು ಗಣ್ಯ ಮಹಿಳೆಯರು ಕೂಡ ಈ ಪ್ರತಿಷ್ಠಿತ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ.

# ಜುಲೈ 11ರಂದು ಪತ್ರಿಕಾ ದಿನಾಚರಣೆ ಹಾಗೂ ಹಿರಿಯ ಪತ್ರಕರ್ತರಿಗೆ ಸನ್ಮಾನ ಸಮಾರಂಭ

ಬೆಂಗಳೂರು: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಂಗಸಂಸ್ಥೆಯಾದ ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಜುಲೈ 11ರಂದು ಪತ್ರಿಕಾ ದಿನಾಚರಣೆ ಹಾಗೂ ಹಿರಿಯ ಪತ್ರಕರ್ತರಿಗೆ ಸನ್ಮಾನ ಸಮಾರಂಭವನ್ನು ಆಯೋಜಿಸಿದೆ.




ವಿಜಯನಗರದ ಮೆಟ್ರೋ ನಿಲ್ದಾಣದ ಸಮೀಪವಿರುವ ಶ್ರೀ ಆದಿಚುಂಚನಗಿರಿ ಕಲ್ಯಾಣ ಮಂಟಪದಲ್ಲಿ ಶನಿವಾರ ಬೆಳಿಗ್ಗೆ 11 ಗಂಟೆಗೆ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ಮಾಧ್ಯಮ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಹಿರಿಯ ಪತ್ರಕರ್ತರನ್ನು ಸನ್ಮಾನಿಸಲಾಗುವುದು.

ಶ್ರೀ ಆದಿಚುಂಚನಗಿರಿ ಶಾಖಾಮಠದ ಶ್ರೀಶ್ರೀಶ್ರೀ ಸೌಮ್ಯನಾಥ ಸ್ವಾಮೀಜಿ ಅವರ ದಿವ್ಯ ಸಾನ್ನಿಧ್ಯದಲ್ಲಿ ನಡೆಯಲಿರುವ ಕಾರ್ಯಕ್ರಮವನ್ನು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಸಚಿವರಾದ ವಿ. ಸೋಮಣ್ಣ ಉದ್ಘಾಟಿಸಲಿದ್ದಾರೆ. ಕರ್ನಾಟಕ ಸರ್ಕಾರದ ಜಲಸಂಪನ್ಮೂಲ ಸಚಿವರಾದ ರಾಮಲಿಂಗಾರೆಡ್ಡಿ ಅವರು ನೂತನ ಸದಸ್ಯರಿಗೆ ಸದಸ್ಯತ್ವ ಗುರುತಿನ ಚೀಟಿಗಳನ್ನು ವಿತರಿಸಲಿದ್ದು, ಮಾಜಿ ಸಚಿವರು ಹಾಗೂ ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ. ಗೋಪಾಲಯ್ಯ ಅವರು ಕಲಾತಂಡಗಳಿಗೆ ಚಾಲನೆ ನೀಡಲಿದ್ದಾರೆ.

ವಿಧಾನಪರಿಷತ್ ಸದಸ್ಯರಾದ ಜವರಾಯಿಗೌಡ ಅವರು ಹಿರಿಯ ಪತ್ರಕರ್ತರಿಗೆ ಸನ್ಮಾನ ನೆರವೇರಿಸಲಿದ್ದು, ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್. ಸೋಮಶೇಖರ ಗಾಂಧಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ವಿಜಯವಾಣಿ ದಿನಪತ್ರಿಕೆಯ ಸಂಪಾದಕರಾದ ಕೆ.ಎನ್. ಚನ್ನೇಗೌಡ ಅವರು ದಿಕ್ಸೂಚಿ ನುಡಿ ನೀಡಲಿದ್ದು, ನಿಕಟಪೂರ್ವ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್ ಹಿತನುಡಿ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಆಶಯ ನುಡಿಗಳನ್ನು ನೀಡಲಿದ್ದಾರೆ.

ಈ ಸಂದರ್ಭದಲ್ಲಿ ಚಲನಚಿತ್ರ ಛಾಯಾಗ್ರಾಹಕರಾದ ಕೆ.ಎನ್. ನಾಗೇಶ್ ಕುಮಾರ್, ವಿಜಯವಾಣಿ ಸಹಾಯಕ ಸಂಪಾದಕರಾದ ಪ್ರಭುದೇವ ಶಾಸ್ತ್ರಿಮಠ, ಟಿವಿ9 ಕನ್ನಡದ ಮುಖ್ಯ ನಿರ್ಮಾಪಕರಾದ ರಂಗನಾಥ ಭಾರದ್ವಾಜ್, ವಿಜಯ ಕರ್ನಾಟಕದ ವಿಶೇಷ ಪ್ರತಿನಿಧಿ ಕೀರ್ತಿ ಪ್ರಸಾದ್, ನ್ಯೂಸ್18 ಕನ್ನಡದ ಔಟ್‌ಪುಟ್ ಎಡಿಟರ್ ಮಧು ಎಂ. ಉತ್ತುವಳ್ಳಿ, ಹಿರಿಯ ಪತ್ರಕರ್ತ ಐ.ಎಚ್. ಸಂಗಮದೇವ್, ಸ್ತ್ರೀ ಜಾಗೃತಿ ಪತ್ರಿಕೆಯ ಸಂಪಾದಕಿ ಹೆಚ್.ಸಿ. ಶೋಭ, ಸಂಜೆ ಸಮಾಚಾರದ ಸಂಪಾದಕರಾದ ಬಿ.ಎ. ಮಹೇಂದ್ರ, ಪೊಲೀಸ್ ನ್ಯೂಸ್ ಉಪ ಸಂಪಾದಕರಾದ ವೀರನಗೌಡ ಹಾಗೂ ಅಮೂಲ್ಯವಾಣಿ ಪ್ರಧಾನ ಸಂಪಾದಕರಾದ ಜಿ.ವಿ. ರಾಮರಾವ್ ಅವರನ್ನು ಸನ್ಮಾನಿಸಲಾಗುವುದು.

ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಬೆಂಗಳೂರು ಘಟಕದ ನಿಕಟಪೂರ್ವ ಅಧ್ಯಕ್ಷ ಮಾಯಣ್ಣ, ಭಾರತೀಯ ಕಾರ್ಯನಿರತ ಪತ್ರಕರ್ತರ ಸಂಘದ ರಾಷ್ಟ್ರೀಯ ಅಧ್ಯಕ್ಷ ಬಿ.ವಿ. ಮಲ್ಲಿಕಾರ್ಜುನಯ್ಯ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ್, ಖಜಾಂಚಿ ವಾಸುದೇವ ಹೊಳ್ಳ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕ ಡಾ. ಬಿ.ಎಸ್. ಮಂಜುನಾಥ ಸ್ವಾಮಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಜಂಟಿ ನಿರ್ದೇಶಕಿ ಪಲ್ಲವಿ ಹೊನ್ನಾಪುರ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

ಪತ್ರಿಕಾ ದಿನಾಚರಣೆ ಹಾಗೂ ಹಿರಿಯ ಪತ್ರಕರ್ತರ ಸನ್ಮಾನ ಕಾರ್ಯಕ್ರಮಕ್ಕೆ ಮಾಧ್ಯಮ ಕ್ಷೇತ್ರದ ಬಂಧುಗಳು, ಪತ್ರಕರ್ತರು ಹಾಗೂ ಛಾಯಾಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್. ಸೋಮಶೇಖರ ಗಾಂಧಿ, ಪ್ರಧಾನ ಕಾರ್ಯದರ್ಶಿ ಜಯಕುಮಾರ್ ಗೌಡ್ರು, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಎಚ್.ಆರ್. ರವೀಶ್ ಹಾಗೂ ಕಾರ್ಯಕಾರಿ ಸಮಿತಿಯ ಸರ್ವ ಸದಸ್ಯರು ಮನವಿ ಮಾಡಿದ್ದಾರೆ.

## ಎಸ್‌ಐಆರ್ ಪ್ರಕ್ರಿಯೆ ಕುರಿತು ಅಸಮಾಧಾನ, ಕಾಂಗ್ರೆಸ್ ನಾಯಕರಿಂದ

# ಬಿಜೆಪಿ-ಜೆಡಿಎಸ್ ವಿರುದ್ಧ ವಾಗ್ದಾಳಿ

ಬೆಂಗಳೂರು

ಕೆಪಿಸಿಸಿ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಮೊದಲ ಬಾರಿಗೆ ಬಿ.ಕೆ. ಹರಿಪ್ರಸಾದ್ ನೇತೃತ್ವದಲ್ಲಿ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸದಸ್ಯರ ಸಮಾವೇಶ ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಿತು. ಸಭೆಯಲ್ಲಿ ರಾಜ್ಯದಲ್ಲಿ ನಡೆಯುತ್ತಿರುವ ವಿಶೇಷ ಮತದಾರರ ಪಟ್ಟಿಯ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಕುರಿತು ಕಾಂಗ್ರೆಸ್ ನಾಯಕರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.




ಸಭೆಯಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯ್ಲಿ, ಎಐಸಿಸಿ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ, ಸಚಿವರಾದ ಸತೀಶ್ ಜಾರಕಿಹೊಳಿ, ಕೃಷ್ಣ ಬೈರೇಗೌಡ, ಮಾಜಿ ಸಚಿವರಾದ ಎಚ್. ಕೆ. ಪಾಟೀಲ್, ಆರ್.ವಿ. ದೇಶಪಾಂಡೆ, ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ.ಸಿ. ಚಂದ್ರಶೇಖರ್ ಸೇರಿದಂತೆ ಹಲವು ಮುಖಂಡರು ಭಾಗವಹಿಸಿದ್ದರು.

ಸಭೆಯಲ್ಲಿ ಮಾತನಾಡಿದ ನಾಯಕರು, ಕಾಂಗ್ರೆಸ್ ಪಕ್ಷವು ರಾಜ್ಯದ 54 ಸಾವಿರ ಮತಗಟ್ಟೆಗಳಿಗೆ ಬಿಎಲ್‌ಎ-2ಗಳನ್ನು ನೇಮಿಸಿ ಮತದಾರರ ಹಕ್ಕು ರಕ್ಷಿಸಲು ಕ್ರಮ ಕೈಗೊಂಡಿದೆ. ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಬಿಎಲ್‌ಎಗಳ ನೇಮಕದಲ್ಲಿ ನಿರ್ಲಕ್ಷ್ಯ ವಹಿಸಿದ್ದರಿಂದ ಈಗ ಎಸ್‌ಐಆರ್ ಪ್ರಕ್ರಿಯೆಯನ್ನು ರದ್ದುಪಡಿಸುವಂತೆ ಒತ್ತಾಯಿಸುತ್ತಿವೆ ಎಂದು ಆರೋಪಿಸಿದರು.

ಬಿಹಾರ, ಪಶ್ಚಿಮ ಬಂಗಾಳ ಸೇರಿದಂತೆ ಕೆಲವು ರಾಜ್ಯಗಳಲ್ಲಿ ಬಿಜೆಪಿ ಪರವಾಗಿ ಎಸ್‌ಐಆರ್ ಪ್ರಕ್ರಿಯೆ ನಡೆದಿತ್ತು. ಆದರೆ ಕರ್ನಾಟಕದಲ್ಲಿ ಕಾಂಗ್ರೆಸ್ ಜನಜಾಗೃತಿ ಮೂಡಿಸಿ ಬಿಎಲ್‌ಎಗಳನ್ನು ನಿಯೋಜಿಸಿದ್ದರಿಂದ ಅಲ್ಪಸಂಖ್ಯಾತರು, ದಲಿತರು, ಹಿಂದುಳಿದ ವರ್ಗಗಳು ಹಾಗೂ ಬಡವರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಕೈಬಿಡುವ ಪ್ರಯತ್ನ ವಿಫಲವಾಗಿದೆ ಎಂದು ನಾಯಕರು ಅಭಿಪ್ರಾಯಪಟ್ಟರು.

ಇದರಿಂದ ಬಿಜೆಪಿ ಹತಾಶಗೊಂಡು ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅವ್ಯವಹಾರ ನಡೆದಿದೆ ಎಂಬ ಆರೋಪಗಳನ್ನು ಮಾಡುತ್ತಿದೆ.

ಕೇಂದ್ರ ಸರ್ಕಾರದ ಅಧಿಕಾರಿಗಳನ್ನು ಬಳಸಿಕೊಂಡು ಚುನಾವಣಾ ಪ್ರಕ್ರಿಯೆಯಲ್ಲಿ ಹಸ್ತಕ್ಷೇಪ ಮಾಡುವ ಪ್ರಯತ್ನ ನಡೆಯುತ್ತಿದ್ದು, ಇಂತಹ ಸಂಚುಗಳನ್ನು ಕಾಂಗ್ರೆಸ್ ಸಂಘಟಿತವಾಗಿ ಎದುರಿಸಬೇಕು ಎಂದು ಸಭೆಯಲ್ಲಿ ಕರೆ ನೀಡಲಾಯಿತು.

ಕೋಮುವಾದಿ ಶಕ್ತಿಗಳು ರಾಜ್ಯದಲ್ಲಿ ಅಶಾಂತಿಯ ವಾತಾವರಣ ನಿರ್ಮಿಸಿ ರಾಜಕೀಯ ಲಾಭ ಪಡೆಯಲು ಯತ್ನಿಸುತ್ತಿವೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಎಚ್ಚರಿಕೆಯಿಂದ ಕೆಲಸ ಮಾಡಬೇಕು ಎಂದು ನಾಯಕರು ಸೂಚಿಸಿದರು. ಸಭೆಯಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಆಡಳಿತಾವಧಿಯಲ್ಲಿ ಜಾರಿಗೆ ತಂದ ಜನಪರ ಯೋಜನೆಗಳ ಕುರಿತು ವಿವರಿಸಿದರು. ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಪಕ್ಷದಲ್ಲಿ ಒಗ್ಗಟ್ಟು ಕಾಪಾಡುವ ಅಗತ್ಯವನ್ನು ಒತ್ತಿಹೇಳಿದರು.

ಇದೇ ವೇಳೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಸಚಿವರು ಮತ್ತು ಶಾಸಕರು ಕಲಬುರಗಿ ಪ್ರವಾಸದಲ್ಲಿದ್ದ ಕಾರಣ ಸಮಾವೇಶದಲ್ಲಿ ಅವರ ಗೈರುಹಾಜರಿ ಗಮನ ಸೆಳೆಯಿತು.

# 'ಗೋ ಹೆಲ್ತಿ ವಿತ್ ತೈವಾನ್ 2026' ಜಾಗತಿಕ ಅಭಿಯಾನಕ್ಕೆ ಚಾಲನೆ

ಬೆಂಗಳೂರು

ಆರೋಗ್ಯ ಮತ್ತು ಯೋಗಕ್ಷೇಮ ಕ್ಷೇತ್ರದ ಸವಾಲುಗಳಿಗೆ ತಾಂತ್ರಿಕ ಪರಿಹಾರಗಳನ್ನು ರೂಪಿಸುವ ಉದ್ದೇಶದಿಂದ ತೈವಾನ್ ಸರ್ಕಾರ 'ಗೋ ಹೆಲ್ತಿ ವಿತ್ ತೈವಾನ್ 2026' ಜಾಗತಿಕ ಅಭಿಯಾನಕ್ಕೆ ಚಾಲನೆ ನೀಡಿದೆ. ಭಾರತ ಸೇರಿದಂತೆ ವಿಶ್ವದಾದ್ಯಂತದ ಆವಿಷ್ಕಾರಕರು, ಸ್ಟಾರ್ಟ್‌ಅಪ್‌ಗಳು, ಸಂಶೋಧಕರು ಹಾಗೂ ಆರೋಗ್ಯ ಸಂಸ್ಥೆಗಳಿಂದ ನವೀನ ಯೋಜನೆಗಳ ಪ್ರಸ್ತಾವನೆಗಳನ್ನು ಆಹ್ವಾನಿಸಲಾಗಿದೆ.




ಆರೋಗ್ಯ ಕ್ಷೇತ್ರದಲ್ಲಿ ಕ್ರಾಂತಿಕಾರಿ ಬದಲಾವಣೆ ತರಬಲ್ಲ ವಿನೂತನ ಆಲೋಚನೆಗಳನ್ನು ಜಾಗತಿಕ ಮಟ್ಟದ ತಾಂತ್ರಿಕ ಪರಿಹಾರಗಳಾಗಿ ರೂಪಿಸುವ ಉದ್ದೇಶದಿಂದ ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಸ್ಪರ್ಧೆಗೆ ಪ್ರಸ್ತಾವನೆ ಸಲ್ಲಿಸಲು ಆಗಸ್ಟ್ 5 ಕೊನೆಯ ದಿನಾಂಕವಾಗಿದ್ದು, ಆಯ್ಕೆಯಾಗುವ ವಿಜೇತರಿಗೆ ಆಕರ್ಷಕ ನಗದು ಬಹುಮಾನ ಹಾಗೂ ಜಾಗತಿಕ ಮಟ್ಟದ ಅವಕಾಶಗಳು ಲಭ್ಯವಾಗಲಿವೆ.

ಮೊದಲ ಆವೃತ್ತಿಯಲ್ಲಿ 55 ದೇಶಗಳಿಂದ ದಾಖಲೆಯ 638 ಪ್ರಸ್ತಾವನೆಗಳು ಬಂದಿದ್ದು, ಅಭಿಯಾನಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿತ್ತು.

ಈ ವರ್ಷದ ವಿಶೇಷವೆಂದರೆ ಟಾಪ್ 20 ಮೆಂಟರ್‌ಶಿಪ್ ಕಾರ್ಯಕ್ರಮ. ಅಂತಿಮ ಹಂತಕ್ಕೆ ಆಯ್ಕೆಯಾಗುವ 20 ಸ್ಪರ್ಧಿಗಳಿಗೆ ಜಾಗತಿಕ ಉದ್ಯಮದ ಪರಿಣಿತರಿಂದ ನೇರ ಮಾರ್ಗದರ್ಶನ ದೊರೆಯಲಿದ್ದು, ಅವರ ಆವಿಷ್ಕಾರಗಳನ್ನು ಮಾರುಕಟ್ಟೆಗೆ ತಲುಪಿಸಲು ಅಗತ್ಯ ನೆರವು ಒದಗಿಸಲಾಗುತ್ತದೆ.

ತೈವಾನ್ ಸರ್ಕಾರದ ಆರ್ಥಿಕ ವ್ಯವಹಾರಗಳ ಸಚಿವಾಲಯದ ಅಧೀನದಲ್ಲಿರುವ ಇಂಟರ್‌ನ್ಯಾಷನಲ್ ಟ್ರೇಡ್ ಅಡ್ಮಿನಿಸ್ಟ್ರೇಷನ್ (ಟಿಟಾ) ಈ ಅಭಿಯಾನವನ್ನು ಆಯೋಜಿಸಿದ್ದು, ತೈವಾನ್ ಎಕ್ಸ್‌ಟರ್ನಲ್ ಟ್ರೇಡ್ ಡೆವಲಪ್ಮೆಂಟ್ ಕೌನ್ಸಿಲ್ (ಟೈಟ್ರಾ) ಅನುಷ್ಠಾನಗೊಳಿಸುತ್ತಿದೆ.

'ಒಟ್ಟಾಗಿ ಆರೋಗ್ಯಕರ ಭವಿಷ್ಯವನ್ನು ರೂಪಿಸೋಣ' ಎಂಬ ಧ್ಯೇಯವಾಕ್ಯದೊಂದಿಗೆ ನಡೆಯುತ್ತಿರುವ ಈ ಅಭಿಯಾನವು ಸ್ಮಾರ್ಟ್ ಆರೋಗ್ಯ ಸೇವೆ, ವೈದ್ಯಕೀಯ ಉಪಕರಣಗಳು, ಕ್ರೀಡೆ ಮತ್ತು ಫಿಟ್‌ನೆಸ್ ತಂತ್ರಜ್ಞಾನ, ವಯೋವೃದ್ಧರ ಆರೋಗ್ಯ ರಕ್ಷಣೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ತೈವಾನ್‌ನ ಅತ್ಯಾಧುನಿಕ ತಂತ್ರಜ್ಞಾನವನ್ನು ಜಾಗತಿಕ ಮಟ್ಟದಲ್ಲಿ ಬಳಕೆಗೆ ತರುವ ಉದ್ದೇಶ ಹೊಂದಿದೆ.

# ಎಂಬಸಿ ಟೆಕ್‌ವಿಲೇಜ್‌ನಲ್ಲಿ 'ಹಿಲ್ಟನ್ ಗಾರ್ಡನ್ ಇನ್' ಆರಂಭ

ಬೆಂಗಳೂರು

ಎಂಬಸಿ ಆಫೀಸ್ ಪಾರ್ಕ್ಸ್ ರೀಟ್ (ಎಂಬಸಿ ರೀಟ್) ಮತ್ತು ಜಾಗತಿಕ ಆತಿಥ್ಯ ಸಂಸ್ಥೆ ಹಿಲ್ಟನ್, ಬೆಂಗಳೂರಿನ ಔಟರ್ ರಿಂಗ್ ರೋಡ್‌ನಲ್ಲಿರುವ ಎಂಬಸಿ ಟೆಕ್‌ವಿಲೇಜ್‌ನಲ್ಲಿ 211 ಕೊಠಡಿಗಳ ಹಿಲ್ಟನ್ ಗಾರ್ಡನ್ ಇನ್ ಹೋಟೆಲ್ ಉದ್ಘಾಟನೆಯನ್ನು ಘೋಷಿಸಿವೆ.

ಈ ಹೋಟೆಲ್ 529 ಕೊಠಡಿಗಳ ಡ್ಯುಯಲ್-ಬ್ರಾಂಡೆಡ್ ಹಿಲ್ಟನ್ ಅಭಿವೃದ್ಧಿ ಯೋಜನೆಯ ಮೊದಲ ಹಂತವಾಗಿದ್ದು, ಮುಂದಿನ ಹಂತದಲ್ಲಿ ಪೂರ್ಣ ಪ್ರಮಾಣದ ಹಿಲ್ಟನ್ ಹೋಟೆಲ್ಸ್ ಅಂಡ್ ರೆಸಾರ್ಟ್ಸ್ ಹೋಟೆಲ್ ಕೂಡ ಇದೇ ವರ್ಷದೊಳಗೆ ಆರಂಭವಾಗಲಿದೆ. ಇದರೊಂದಿಗೆ ಎಂಬಸಿ




ರೀಟ್ ಸಹಭಾಗಿತ್ವದಲ್ಲಿ ಕಾರ್ಯಾರಂಭಗೊಳ್ಳುತ್ತಿರುವ ಹಿಲ್ಟನ್‌ನ ನಾಲ್ಕನೇ ಹೋಟೆಲ್ ಇದಾಗಿದೆ. ಬೆಂಗಳೂರಿನಲ್ಲಿ ಎರಡನೇ ಡ್ಯುಯಲ್-ಬ್ರಾಂಡೆಡ್ ಹೋಟೆಲ್ ಸಮುಚ್ಚಯವೂ ಇದಾಗಿದೆ.

ನಗರದ ಪ್ರಮುಖ ಮಾಹಿತಿ ತಂತ್ರಜ್ಞಾನ ಮತ್ತು ಕಾರ್ಪೊರೇಟ್ ಕೇಂದ್ರವಾಗಿರುವ ಔಟರ್ ರಿಂಗ್ ರೋಡ್ ಕಾರಿಡಾರ್‌ನಲ್ಲಿರುವ ಈ ಹೋಟೆಲ್, ವ್ಯವಹಾರ ಪ್ರವಾಸಿಗರು ಹಾಗೂ ಕಾರ್ಪೊರೇಟ್ ವಲಯದ ಅತಿಥಿಗಳಿಗೆ ಗುಣಮಟ್ಟದ ಮತ್ತು ಕೈಗೆಟುಕುವ ವಸತಿ ಸೌಲಭ್ಯಗಳನ್ನು ಒದಗಿಸಲಿದೆ. ಪ್ರಮುಖ ಕಚೇರಿ ಸಂಕೀರ್ಣಗಳಿಗೆ ಸುಲಭ ಸಂಪರ್ಕ ಹಾಗೂ ಶೀಘ್ರದಲ್ಲೇ ಆರಂಭವಾಗಲಿರುವ ಕಾಡುಬೀಸನಹಳ್ಳಿ ಮೆಟ್ರೋ ನಿಲ್ದಾಣಕ್ಕೆ ನೇರ ಸಂಪರ್ಕವೂ ಇದರ ಪ್ರಮುಖ ವಿಶೇಷತೆಯಾಗಿದೆ.



ಕೋಲಾರ ತಾಲ್ಲೂಕಿನ ತಂಬಿಹಳ್ಳಿಯಲ್ಲಿರುವ ಶ್ರೀಮನ್ಮಾಧವತೀರ್ಥ ಮಠದ ಪ್ರಸ್ತುತ ಪೀಠಾಧಿಪತಿಗಳಾದ ಶ್ರೀಶ್ರೀ108 ಶ್ರೀವಿದ್ಯಾವಲ್ಲಭ ಮಾಧವ ತೀರ್ಥ ಶ್ರೀಪಾದಂಗಳವರ ಪಂಚಮ ವೇದಾಂತ ಸಾಮ್ರಾಜ್ಯ ಪಟ್ಟಾಭಿಷೇಕ ಮಹೋತ್ಸವ ಅಂಗವಾಗಿ ಶ್ರೀಪರಾಭವನಾಮ ಸಂವತ್ಸರ ಜ್ಯೇಷ್ಠ ಕೃಷ್ಣ ಸಪ್ತಮಿ ಮಂಗಳವಾರದಂದು ಶ್ರೀಮಠದಲ್ಲಿ ಶ್ರೀವ್ಯಾಸರಾಜ ಪ್ರತಿಷ್ಠಿತ ದ್ವಿತೀಯ ಶ್ರೀ ಮುಖ್ಯಪ್ರಾಣ ದೇವರಿಗೆ ಪಂಚಾಮೃತ ಅಭಿಷೇಕ, ಶ್ರೀನೃಸಿಂಹ ಸ್ತುತಿ ಹೋಮ, ಶ್ರೀವೀರರಾಮದೇವರ ಸಂಸ್ಥಾನ ಪೂಜೆ, ಶ್ರೀಗಳವರಿಗೆ ಮಂತ್ರಪೂತ ಕಲಶಾಭಿಷೇಕ, ಶ್ರೀವೀರರಾಮದೇವರಿಗೆ ಹಾಗೂ ಶ್ರೀಪಾದಂಗಳವರಿಗೆ ತುಲಾಭಾರ, ಪುಷ್ಪವೃಷ್ಟಿ ವಿಜೃಂಭಣೆಯಿಂದ ನಡೆಸಲಾಯಿತು.

## ಬದಲಾಗುವ ಹಣಕಾಸು ಅಗತ್ಯಗಳಿಗೆ ಎಡೆಲ್‌ವೈಸ್ ಲೈಫ್‌ನ

# 'ಫ್ಲೆಕ್ಸಿಡ್ರೀಮ್ ಪ್ಲ್ಯಾನ್' ಪರಿಚಯ

ಬೆಂಗಳೂರು

ಮನೆ ಖರೀದಿ, ಮಕ್ಕಳ ಶಿಕ್ಷಣ, ನಿವೃತ್ತಿ ಯೋಜನೆ ಹಾಗೂ ಕುಟುಂಬದ ಆರ್ಥಿಕ ಭದ್ರತೆ ಸೇರಿದಂತೆ ಜೀವನದ ವಿವಿಧ ಹಣಕಾಸು ಗುರಿಗಳನ್ನು ಸಮರ್ಥವಾಗಿ ಸಾಧಿಸಲು ನೆರವಾಗುವ ಉದ್ದೇಶದಿಂದ ಎಡೆಲ್‌ವೈಸ್ ಲೈಫ್ ತನ್ನ ಹೊಸ 'ಫ್ಲೆಕ್ಸಿಡ್ರೀಮ್ ಪ್ಲ್ಯಾನ್' ಅನ್ನು ಪರಿಚಯಿಸಿದೆ.

ಇದು ಭಾಗವಹಿಸುವ ಉಳಿತಾಯ ಆಧಾರಿತ ಜೀವ ವಿಮಾ ಯೋಜನೆಯಾಗಿದ್ದು, ದೀರ್ಘಾವಧಿಯ ಸಂಪತ್ತಿನ ನಿರ್ಮಾಣದ ಜೊತೆಗೆ ಜೀವ ವಿಮಾ ರಕ್ಷಣೆ ಮತ್ತು ಆದಾಯದ ವಿವಿಧ ಆಯ್ಕೆಗಳನ್ನು ಗ್ರಾಹಕರಿಗೆ ಒದಗಿಸುತ್ತದೆ. ಗ್ರಾಹಕರು ತಮ್ಮ ಹಣಕಾಸು ಗುರಿಗಳಿಗೆ ಅನುಗುಣವಾಗಿ 'ಮೈಲ್‌ಸ್ಟೋನ್' ಅಥವಾ 'ಲೈವ್‌ಲಾಂಗ್' ಆಯ್ಕೆಗಳನ್ನು ಆರಿಸಿಕೊಳ್ಳಬಹುದು. ಮೈಲ್‌ಸ್ಟೋನ್ ಆಯ್ಕೆಯು ಭವಿಷ್ಯದ ನಿರ್ದಿಷ್ಟ ಗುರಿಗಳಿಗಾಗಿ ಉಳಿತಾಯಕ್ಕೆ ನೆರವಾದರೆ, ಲೈವ್‌ಲಾಂಗ್ ಆಯ್ಕೆಯು ನಿವೃತ್ತಿಯ ನಂತರ ನಿಯಮಿತ ಆದಾಯ ಪಡೆಯಲು ಅನುಕೂಲವಾಗುತ್ತದೆ.

ಯೋಜನೆಯ ಪ್ರಮುಖ ವೈಶಿಷ್ಟ್ಯವೆಂದರೆ ಅದರ ಲವಚಿಕತೆ. ಗ್ರಾಹಕರು ತಮ್ಮ ಅಗತ್ಯಕ್ಕೆ ತಕ್ಕಂತೆ ಆದಾಯ ಸ್ವೀಕರಿಸುವ ಅವಧಿಯನ್ನು ಮುಂದೂಡಲು ಅಥವಾ ನಿಗದಿತ ಸಮಯದಲ್ಲಿ ಪಡೆಯಲು ಅವಕಾಶವಿದೆ. ಭಾಗವಹಿಸುವ ಯೋಜನೆಯಾಗಿರುವುದರಿಂದ ಸಂಸ್ಥೆ ಘೋಷಿಸುವ ಬೋನಸ್‌ಗಳ ಲಾಭವನ್ನೂ ಪಡೆಯಬಹುದಾಗಿದೆ.

ಇದರೊಂದಿಗೆ 'ಟುಗೆದರ್ ಬೆನಿಫಿಟ್' ಸೌಲಭ್ಯದ ಮೂಲಕ ಕುಟುಂಬದ ಮತ್ತೊಬ್ಬ ಸದಸ್ಯರಿಗೂ ಜೀವ ವಿಮಾ ರಕ್ಷಣೆಯನ್ನು ವಿಸ್ತರಿಸಬಹುದಾಗಿದೆ. ಮುಖ್ಯ ಪಾಲಿಸಿದಾರರ ಅಕಾಲಿಕ ನಿಧನದ ಸಂದರ್ಭದಲ್ಲಿಯೂ ಯೋಜನೆಯ ಪ್ರಯೋಜನಗಳು ಮುಂದುವರಿಯುವ ವ್ಯವಸ್ಥೆ ಇರುವುದರಿಂದ ಕುಟುಂಬದ ದೀರ್ಘಾವಧಿಯ ಹಣಕಾಸು ಗುರಿಗಳಿಗೆ ಭದ್ರತೆ ಒದಗಿಸುತ್ತದೆ.

ಬದಲಾಗುತ್ತಿರುವ ಜೀವನಶೈಲಿ ಮತ್ತು ಹಣಕಾಸು ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ರೂಪಿಸಲಾದ ಈ ಯೋಜನೆಯು ಉಳಿತಾಯ, ಜೀವ ವಿಮಾ ರಕ್ಷಣೆ ಹಾಗೂ ದೀರ್ಘಾವಧಿಯ ಆರ್ಥಿಕ ಸ್ಥಿರತೆಯನ್ನು ಒಂದೇ ವೇದಿಕೆಯಲ್ಲಿ ಒದಗಿಸುವ ಸಮಗ್ರ ಹಣಕಾಸು ಪರಿಹಾರವಾಗಿ ರೂಪುಗೊಂಡಿದೆ.

# ಅನಧಿಕೃತ ಗೈರು: ಸೇವೆಯಿಂದ ವಜಾಗೊಳಿಸಲು ಕ್ರಮ

ಬೆಂಗಳೂರು

ಜಿಲ್ಲೆಯ ತುಮಕೂರು ತಾಲ್ಲೂಕು ಅರಕೆರೆ ಅಂಚೆ ಅಂತರಸನಹಳ್ಳಿಯ ಮದನಕುಮಾರ್ ಟಿ.ಹೆಚ್. ಅವರು ಶಿರಾ ತಾಲ್ಲೂಕು ಕಚೇರಿಯಲ್ಲಿ ಗ್ರಾಮ ಆಡಳಿತಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ದಿನಾಂಕ 01–01–2017ರಿಂದ ಯಾವುದೇ ಪೂರ್ವಾನುಮತಿ ಪಡೆಯದೆ ಅನಧಿಕೃತವಾಗಿ ಕರ್ತವ್ಯಕ್ಕೆ ಗೈರು ಹಾಜರಾಗಿರುತ್ತಾರೆ ಎಂದು ಶಿರಾ ತಾಲ್ಲೂಕು ತಹಶೀಲ್ದಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೌಕರರನ್ನು ಕರ್ತವ್ಯಕ್ಕೆ ಹಾಜರಾಗುವಂತೆ ಇಲಾಖೆಯಿಂದ ಹಲವಾರು ಬಾರಿ ನೋಟಿಸ್‌ಗಳನ್ನು ಜಾರಿಗೊಳಿಸಲಾಗಿದ್ದರೂ, ಇದುವರೆಗೆ ಯಾವುದೇ ಸ್ಪಂದನೆ ನೀಡದೇ, ಕರ್ತವ್ಯಕ್ಕೆ ಹಾಜರಾಗಿರುವುದಿಲ್ಲ. ನೌಕರರು ಸೇವೆಗೆ ಅನಧಿಕೃತ ಗೈರು ಹಾಜರಿಯಾಗುವ ಮೂಲಕ ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳನ್ನು ಉಲ್ಲಂಘಿಸಿದ್ದಾರೆ. ಸೇವಾ ನಿಯಮಗಳನ್ನು ಉಲ್ಲಂಘಿಸಿರುವ ನೌಕರರ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲಾಗಿದ್ದು, ಮುಂದಿನ ದಿನಗಳಲ್ಲಿ ಇವರನ್ನು ಸೇವೆಯಿಂದ ವಜಾಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ನೌಕರರ ಗೈರು ಹಾಜರಿಯು ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಧಕ್ಕೆಯಾಗುತ್ತಿದೆ. ಸದರಿ ನೌಕರರೊಂದಿಗೆ ಸಾರ್ವಜನಿಕರು ಇಲಾಖೆಗೆ ಸಂಬಂಧಿಸಿದ ಯಾವುದೇ ವ್ಯವಹಾರಗಳನ್ನು ನಡೆಸಬಾರದು ಎಂದು ಅವರು ತಿಳಿಸಿದ್ದಾರೆ.

# ಮಕ್ಕಳಿಗೆ ತಾತ್ಕಾಲಿಕ ಕುಟುಂಬ ಕಲ್ಪಿಸಲು ಪೋಷಕರಿಂದ ಅರ್ಜಿ ಆಹ್ವಾನ

ಬೆಂಗಳೂರು

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ಬಾಲನ್ಯಾಯ(ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ–2015 ಸೆಕ್ಷನ್ 44ರಡಿ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ದಾಖಲಾಗಿರುವ 6 ರಿಂದ 18 ವರ್ಷದೊಳಗಿನ ಮಕ್ಕಳಿಗೆ ತಾತ್ಕಾಲಿಕವಾಗಿ ಕುಟುಂಬದ ವಾತಾವರಣ ಕಲ್ಪಿಸಲು ಅರ್ಹ ಪೋಷಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಪ್ರತಿಯೊಂದು ಮಗುವು ಪ್ರೀತಿ, ವಾತ್ಸಲ್ಯದೊಂದಿಗೆ ಕುಟುಂಬದಲ್ಲಿ ಬೆಳೆಯುವ ಹಕ್ಕನ್ನು ಹೊಂದಿದ್ದು, ಕುಟುಂಬವು "ಮಕ್ಕಳ ಬದುಕಿಗೆ ಜೀವನಾಡಿ"ಯಾಗಿ ಮಹತ್ತರವಾದ ಪಾತ್ರ ವಹಿಸುತ್ತದೆ. ಪೋಷಕರು ಕುಟುಂಬದ ಕೇಂದ್ರ ಬಿಂದುವಾಗಿ ಮಕ್ಕಳ ಸುರಕ್ಷತೆಯನ್ನು ಕಾಪಾಡುವುದು ಮತ್ತು ಅವರಿಗೆ ಮಮತೆಯ ಸಾನಿಧ್ಯಗಳನ್ನು ಎಲ್ಲಾ ಸಂದರ್ಭಗಳಲ್ಲೂ ಒದಗಿಸುವುದಾಗಿದೆ. ಆದರೆ ಕಾರಣಾಂತರಗಳಿಂದ ಕೆಲವು ಮಕ್ಕಳು ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ದಾಖಲು ಮಾಡುವ ಅನಿವಾರ್ಯತೆ ಉಂಟಾಗುತ್ತದೆ. ಇಂತಹ ಸಂದರ್ಭಗಳಲ್ಲಿ ಮಗುವನ್ನು ಸ್ವಂತ ಕುಟುಂಬದಲ್ಲಿ ಇರಿಸಲು ಸಾಧ್ಯವಾಗದಿದ್ದಾಗ, ಅಂತಹ ಮಕ್ಕಳಿಗೆ ತಾತ್ಕಾಲಿಕವಾಗಿ ಕುಟುಂಬದ ಆರೈಕೆಯನ್ನು ಒದಗಿಸುವ ಹಿತದೃಷ್ಟಿಯಿಂದ "ಪೋಷಕತ್ವ" ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗಿದೆ.

ಈ ಕಾರ್ಯಕ್ರಮವು ಕುಟುಂಬದ ಆರೈಕೆಯ ಅಗತ್ಯವಿರುವ ಮಕ್ಕಳನ್ನು ಅವರ ಜೈವಿಕ ಪೋಷಕರನ್ನು ಹೊರತುಪಡಿಸಿ, ಬೇರೆ ಕುಟುಂಬವು ತಾತ್ಕಾಲಿಕವಾಗಿ ತಮ್ಮ ಮನೆಯಲ್ಲಿ ಆಶ್ರಯ ನೀಡಿ, ಮಗುವಿನ ದೈಹಿಕ, ಮಾನಸಿಕ ಮತ್ತು ಶೈಕ್ಷಣಿಕ ಅಗತ್ಯಗಳನ್ನು ಪೂರೈಸುವ ವ್ಯವಸ್ಥೆಯಾಗಿದೆ. ಇದು ದತ್ತು ಸ್ವೀಕಾರವಲ್ಲ, ಬದಲಾಗಿ ಮಗುವಿಗೆ ಕುಟುಂಬದ ಪರಿಸರವನ್ನು ಒದಗಿಸುವ ಪ್ರೀತಿಯ ಸೇವೆಯಾಗಿದೆ. ಮಕ್ಕಳ ಹಿತಾಸಕ್ತಿಯೇ ಇಲ್ಲಿ ಸರ್ವೋಚ್ಛವಾಗಿದ್ದು, ಮಕ್ಕಳ ಕಲ್ಯಾಣ ಸಮಿತಿ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕವು ಈ ಪ್ರಕ್ರಿಯೆಯನ್ನು ಮೇಲ್ವಿಚಾರಣೆ ಮಾಡುತ್ತದೆ.

# ಇಂದು ವಿದ್ಯುತ್ ವ್ಯತ್ಯಯ

ಬೆಂಗಳೂರು

ಬೆಸ್ಕಾಂ ನಗರ ಉಪವಿಭಾಗ–1ರ ವ್ಯಾಪ್ತಿಯಲ್ಲಿ ರಸ್ತೆ ದುರಸ್ತಿ ಕಾಮಗಾರಿ ನಡೆಯುತ್ತಿರುವುದರಿಂದ ಜುಲೈ 5ರಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ಗೋವಿಂದನಗರ, ಹೌಸಿಂಗ್ ಬೋರ್ಡ್, ಗುಬ್ಬಿಗೇಟ್, ಕುಂಟಮ್ಮನ ತೋಟ, ದಿಬ್ಬೂರು, ಬಿ.ಹೆಚ್. ಪಾಳ್ಯ, ಹೊನ್ನೇನಹಳ್ಳಿ ರಸ್ತೆ, ಹಾರೋನಹಳ್ಳಿ ರಸ್ತೆ ಪ್ರದೇಶದಲ್ಲಿ ಮಧ್ಯಂತರ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ನಾಗರಾಜು ಹೆಚ್.ಪಿ. ಮನವಿ ಮಾಡಿದ್ದಾರೆ.

# ಉಸ್ತುವಾರಿಯನ್ನಾಗಿ ನೇಮಿಸಿ'

ಬೆಂಗಳೂರು

ಇನ್ನೂ ಈ ರಾಜ್ಯದ ಗೃಹ ಸಚಿವರು ಕೂಡ ನಿತ್ಯವೂ ಎಲ್ಲಾ ವಿಷಯದ ಬಗ್ಗೆಯೂ ಹೇಳಿಕೆ ನೀಡ್ತಾರೆ. ಎಸ್ ಐಆರ್ ಅಕ್ರಮಗಳ ಬಗ್ಗೆ ಅವರು ಮಾತಾಡಬೇಕಲ್ಲವೇ? ಬಹಳ ಶಿಸ್ತು ಸಂಯಮ ಎಂದು ಊರಿಗೆಲ್ಲ ಬೋಧನೆ ಮಾಡುವವರು ಇದರ ಬಗ್ಗೆಯೂ ಚರ್ಚೆ ಮಾಡಬೇಕಲ್ಲವೇ? ಎಂದು ಕೆಲಸ ಸಚಿವರು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಹಾಗೂ ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಕಿಡಿಕಾರಿದರು. ಬುದ್ಧಿ ಹೇಳುವವರು ಇವರು. ಎಸ್ ಐಆರ್ ಬಗ್ಗೆ ರಾಜ್ಯದ ಹಾದಿಬೀದಿಯಲ್ಲಿ ಚರ್ಚೆ ನಡೆಯುತ್ತಿದೆ.

ಈ ಸರ್ಕಾರಕ್ಕೆ ಮಾನ ಮರ್ಯಾದೆ ಎನ್ನುವುದು ಇದ್ದರೆ ಇಂತಹ ತಪ್ಪುಗಳನ್ನು ಮಾಡುವುದು ನಿಲ್ಲಿಸಬೇಕು. ತನ್ನ ಅದೀನದಲ್ಲಿ ಕೆಲಸ ಮಾಡುವ ಅಧಿಕಾರಿಗಳ ದುರ್ಬಳಕೆ ಮಾಡಿಕೊಳ್ಳುವುದನ್ನು ನಿಲ್ಲಿಸಬೇಕು.

ತಮ್ಮ ಪಕ್ಷದ ಸರ್ಕಾರ ಇಷ್ಟೆಲ್ಲ ಅನರ್ಥಗಳನ್ನು ಮಾಡುತ್ತಿದ್ದರು ಕೆಪಿಸಿಸಿ ಅಧ್ಯಕ್ಷರು ಪ್ರಶ್ನೆ ಮಾಡಬೇಕಿತ್ತು ಎಂದು ಸಚಿವ ಕುಮಾರಸ್ವಾಮಿ ಅವರು ಆಕ್ರೋಶ ವ್ಯಕ್ತಪಡಿಸಿದರು.

# ಬಿಎಲ್‌ಒಗಳಿಗೆ ಭಯ ಹುಟ್ಟಿಸುವ ಯತ್ನ ಕೈಬಿಡಲಿ: ಜೆಡಿಎಸ್ ವಿರುದ್ಧ ಕಾಂಗ್ರೆಸ್ ವಾಗ್ದಾಳಿ

ಬೆಂಗಳೂರು

ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕಾರ್ಯದಲ್ಲಿ ತೊಡಗಿರುವ ಬಿಎಲ್‌ಒಗಳ ಕರ್ತವ್ಯಕ್ಕೆ ಅಡ್ಡಿಪಡಿಸುವ ಉದ್ದೇಶದಿಂದ ತಾಲೂಕಿನಲ್ಲಿ ಗೊಂದಲ ಸೃಷ್ಟಿಸಿ ಶಾಸಕರ ವಿರುದ್ಧ ಸುಳ್ಳು ಆರೋಪ ಮಾಡುತ್ತಿರುವುದನ್ನು ಜೆಡಿಎಸ್ ತಕ್ಷಣವೇ ನಿಲ್ಲಿಸಬೇಕು ಎಂದು ಕುಣಿಗಲ್ ತಾಲೂಕು ಕಾಂಗ್ರೆಸ್ ಪಕ್ಷದ ವಕ್ತಾರ ಎಚ್.ಎಸ್. ದೀಪಕ್ ಗೌಡ ಆಗ್ರಹಿಸಿದರು.



ಪಟ್ಟಣದ ಮಾಜಿ ಸಂಸದರ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೆಡಿಎಸ್ ತಾಲೂಕು ಅಧ್ಯಕ್ಷ ಬಿ.ಎನ್. ಜಗದೀಶ್ ಅವರು ಯಾವುದೇ ಆಧಾರವಿಲ್ಲದೆ ಶಾಸಕರ ಕುಮ್ಮಕ್ಕಿನಿಂದ ಶೇ.70ರಷ್ಟು ಬಿಎಲ್‌ಒಗಳು ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಆರೋಪಿಸುತ್ತಿರುವುದು ಸಂಪೂರ್ಣ ಸುಳ್ಳು ಎಂದರು.

ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ಅಧಿಕಾರಿಗಳು ನಿಷ್ಪಕ್ಷಪಾತವಾಗಿ ಕೆಲಸ ಮಾಡುತ್ತಿದ್ದು, ಶಾಸಕರು ಕೂಡ ಅವರಿಗೆ ಸಂಪೂರ್ಣ ಬೆಂಬಲ ನೀಡುತ್ತಿದ್ದಾರೆ. ಆದರೆ ಜೆಡಿಎಸ್ ಪಕ್ಷ ಬಿಎಲ್‌ಒಗಳಲ್ಲಿ ಭಯದ ವಾತಾವರಣ ನಿರ್ಮಿಸಿ ಅವರ ಕರ್ತವ್ಯಕ್ಕೆ ಅಡ್ಡಿಪಡಿಸಲು ಯತ್ನಿಸುತ್ತಿದೆ ಎಂದು ಆರೋಪಿಸಿದರು.

ಕುಣಿಗಲ್ ಪಟ್ಟಣದ 19ನೇ ವಾರ್ಡ್‌ನ ಬಿಎಲ್‌ಒ ಹಿಂದೂಮತಿ ಅವರು ಅಂಗನವಾಡಿ ಕೇಂದ್ರದಲ್ಲಿ ಮತದಾರರ ಪಟ್ಟಿ ಸಂಬಂಧಿತ ದಾಖಲೆಗಳನ್ನು ಮನೆಮನೆಗೆ ವಿತರಿಸಲು ಸಿದ್ಧಪಡಿಸುತ್ತಿದ್ದ ಸಂದರ್ಭವನ್ನು ವಿಡಿಯೊ ಮಾಡಿ ತಪ್ಪು ರೀತಿಯಲ್ಲಿ ಪ್ರಚಾರ ಮಾಡಲಾಗಿದೆ. ಈ ಸಂಬಂಧ ತಹಶೀಲ್ದಾರ್ ಹಾಗೂ ಜಿಲ್ಲಾಧಿಕಾರಿಗಳು ಈಗಾಗಲೇ ನೋಟಿಸ್ ನೀಡಿದ್ದು, ಬಿಎಲ್‌ಒ ಸಮರ್ಪಕ ಉತ್ತರ ಸಲ್ಲಿಸಿದ್ದಾರೆ. ಈ ಪ್ರಕರಣದಲ್ಲಿ ಶಾಸಕರ ಅಥವಾ ಅವರ ಬೆಂಬಲಿಗರ ಯಾವುದೇ ಪಾತ್ರ ಇಲ್ಲ ಎಂದು ಸ್ಪಷ್ಟಪಡಿಸಿದರು.

ತಾಲೂಕಿನಲ್ಲಿ 5,000 ಅಕ್ರಮ ಬಾಂಗ್ಲಾದೇಶಿ ವಲಸಿಗರಿದ್ದಾರೆ ಎಂಬ ಜೆಡಿಎಸ್ ಆರೋಪವನ್ನು ಉಲ್ಲೇಖಿಸಿದ ಅವರು, ಅಂತಹವರ ಬಗ್ಗೆ ಮಾಹಿತಿ ಇದ್ದರೆ ಪತ್ತೆಹಚ್ಚುವ ಕಾರ್ಯಕ್ಕೆ ಕಾಂಗ್ರೆಸ್ ಸಹಕಾರ ನೀಡಲಿದೆ. ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಅಕ್ರಮವಾಗಿ ಯಾರಿಗೂ ಅವಕಾಶ ನೀಡುವುದಿಲ್ಲ ಎಂದರು.

ಮತದಾರರ ವಿಶೇಷ ಪರಿಷ್ಕರಣೆ ಕಾರ್ಯಕ್ಕೆ ಚುನಾವಣಾ ಆಯೋಗ 30 ದಿನಗಳ ಬದಲು 90 ದಿನಗಳ ಕಾಲಾವಕಾಶ ನೀಡಬೇಕಿತ್ತು. ಈ ಕುರಿತು ಶಾಸಕರು ಚುನಾವಣಾ ಆಯೋಗಕ್ಕೆ ಮನವಿ ಸಲ್ಲಿಸಲಿದ್ದು, ಜೆಡಿಎಸ್ ನಾಯಕರು ಸಹ ತಮ್ಮ ಪಕ್ಷದ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮೂಲಕ ಹೆಚ್ಚಿನ ಕಾಲಾವಕಾಶ ಕಲ್ಪಿಸಲು ಪ್ರಯತ್ನಿಸಲಿ

# ಈಜುಕೊಳ ನಿರ್ಮಾಣಕ್ಕೆ ಒತ್ತಾಯ; ವಿಳಂಬವಾದರೆ ಪ್ರತಿಭಟನೆ ಎಚ್ಚರಿಕೆ

ಬೆಂಗಳೂರು

ಪಟ್ಟಣದ ಕ್ರೀಡಾಂಗಣದಲ್ಲಿ ಸುಸಜ್ಜಿತ ಈಜುಕೊಳ ನಿರ್ಮಾಣ ಕಾಮಗಾರಿ ತಕ್ಷಣ ಆರಂಭಿಸಬೇಕು ಹಾಗೂ ರಸ್ತೆ ನಿರ್ಮಾಣ ಕಾಮಗಾರಿಗಳನ್ನು ಗುಣಮಟ್ಟದೊಂದಿಗೆ ಕೈಗೊಳ್ಳಬೇಕು ಎಂದು ಒತ್ತಾಯಿಸಿ ತಾಲ್ಲೂಕು ಕಾಂಗ್ರೆಸ್ ಮುಖಂಡರು ತಹಶೀಲ್ದಾರ್ ಜಿ.ಎನ್. ಸುಧೀಂದ್ರ ಅವರಿಗೆ ಮನವಿ ಸಲ್ಲಿಸಿದರು.



ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ಪುರಸಭೆಯ ಮಾಜಿ ಅಧ್ಯಕ್ಷ ಬಿ.ಎಂ. ಪ್ರಕಾಶ್, ಮುಖ್ಯಮಂತ್ರಿಗಳ ವಿವೇಚನಾ ನಿಧಿಯಿಂದ ರೂ.5 ಕೋಟಿ ಮಂಜೂರಾಗಿದ್ದು, ಅದರಲ್ಲಿ ರೂ.3 ಕೋಟಿ ವೆಚ್ಚದಲ್ಲಿ ಪಟ್ಟಣದ ಕ್ರೀಡಾಂಗಣದಲ್ಲಿ ಆಧುನಿಕ ಈಜುಕೊಳ ನಿರ್ಮಿಸಲು ಪುರಸಭೆ ಅನುಮೋದನೆ ನೀಡಿತ್ತು. ಆದರೆ ಇದುವರೆಗೆ ಕಾಮಗಾರಿ ಆರಂಭವಾಗದಿರುವುದು ಬೇಸರದ ಸಂಗತಿ ಎಂದು ಹೇಳಿದರು.

ಪಟ್ಟಣದಲ್ಲಿ ಉತ್ತಮ ಸ್ಥಿತಿಯಲ್ಲಿದ್ದ ಕೆಲವು ರಸ್ತೆಗಳನ್ನು ಕಿತ್ತು ಮರುನಿರ್ಮಾಣ ಮಾಡಲಾಗುತ್ತಿದ್ದು, ಕಾಮಗಾರಿ ನಡೆಸುತ್ತಿರುವ ಗುತ್ತಿಗೆದಾರರ ಬಳಿ ಅಗತ್ಯ ತಾಂತ್ರಿಕ ಸಿಬ್ಬಂದಿ ಹಾಗೂ ಮೂಲಸೌಕರ್ಯಗಳ ಕೊರತೆಯಿದೆ ಎಂದು ಆರೋಪಿಸಿದರು.

ಪುರಸಭೆಯ ಮಾಜಿ ಅಧ್ಯಕ್ಷ ಬಿ.ಆರ್. ಭಾಸ್ಕರ್ ಮಾತನಾಡಿ, ಎಸ್‌ಎಸ್‌ಸಿ ವಿಶೇಷ ಅನುದಾನದಡಿ ಅಭಿವೃದ್ಧಿ ಕಾಮಗಾರಿಗಳಿಗೆ ಸರ್ಕಾರ ಅನುದಾನ ನೀಡಿದ್ದರೂ ಪೂರ್ವನಿಗದಿಯಂತೆ ಕಾಮಗಾರಿ ನಡೆಯುತ್ತಿಲ್ಲ. ಅದರಲ್ಲೂ ಈಜುಕೊಳ ನಿರ್ಮಾಣವನ್ನು ನಿರ್ಲಕ್ಷಿಸಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಈಜು ಕಲಿಕೆ ಮಕ್ಕಳ ದೈಹಿಕ ಆರೋಗ್ಯ, ಕ್ರೀಡಾ ಕೌಶಲ್ಯ ಹಾಗೂ ಜೀವ ರಕ್ಷಣೆಯ ದೃಷ್ಟಿಯಿಂದ ಅತ್ಯಂತ ಅಗತ್ಯವಾಗಿದೆ. ಪಟ್ಟಣದಲ್ಲಿ ಈಜುಕೊಳ ಇಲ್ಲದ ಕಾರಣ ಪೋಷಕರು ತಮ್ಮ ಮಕ್ಕಳಿಗೆ ತರಬೇತಿ ನೀಡಲು ಬೇರೆ ತಾಲ್ಲೂಕುಗಳಿಗೆ ಕರೆದೊಯ್ಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಇದರಿಂದ ಹೆಚ್ಚುವರಿ ವೆಚ್ಚವೂ ಆಗುತ್ತಿದೆ. ಆದ್ದರಿಂದ ಸಾರ್ವಜನಿಕರ ಅನುಕೂಲಕ್ಕಾಗಿ ಶೀಘ್ರದಲ್ಲೇ ಈಜುಕೊಳ ನಿರ್ಮಾಣ ಕಾಮಗಾರಿ ಆರಂಭಿಸಬೇಕು ಎಂದು ಒತ್ತಾಯಿಸಿದರು.

ಕೋಮುಲ್ ನಿರ್ದೇಶಕ ಕೆ.ಕೆ. ಮಂಜುನಾಥರೆಡ್ಡಿ ಮಾತನಾಡಿ, ಈಜುಕೊಳ ನಿರ್ಮಾಣದ ಅಗತ್ಯವನ್ನು ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದಿದ್ದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ.

ನಿಗದಿತ ಅವಧಿಯೊಳಗೆ ಕಾಮಗಾರಿ ಆರಂಭಿಸದಿದ್ದರೆ ಸಾರ್ವಜನಿಕರೊಂದಿಗೆ ಪ್ರತಿಭಟನೆ ನಡೆಸುವುದರ ಜೊತೆಗೆ ತಾಲ್ಲೂಕು ಬಂದ್‌ಗೆ ಕರೆ ನೀಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ವಿ. ನಾಗರಾಜ್, ಕೆಪಿಸಿಸಿ ಸದಸ್ಯ ಸಂಜಯ್‌ರೆಡ್ಡಿ, ಆರ್‌ಎಂಸಿ ವೇಣುಗೋಪಾಲ್, ಪುರಸಭೆ ಮಾಜಿ ಸದಸ್ಯರಾದ ಮುನಿರಾಜು, ಎನ್.ಎನ್. ಕೆ. ನಾಗರಾಜು, ಹೇಮಂತ್ ಕುಮಾರ್, ಶಿವರಾಜ್, ನರಸಿಂಹಮೂರ್ತಿ, ಗಂಗಾಧರ್ ಹಾಗೂ ಕಾಂಗ್ರೆಸ್ ಮುಖಂಡರಾದ ಹರೀಶ್ ಯಾದವ್, ಸೋಮನಾಥ್, ಅಪ್ಪೂರು ವೆಂಕಟೇಶ್, ಮಂಜು, ವೆಂಕಟಾದ್ರಿ, ಡಾ. ಸುಧಾಕರ್, ತಾಲ್ಲೂಕು ಭೂ ಮಂಜೂರಾತಿ ಸಮಿತಿ ಸದಸ್ಯ ಸೀತಾರಾಮರೆಡ್ಡಿ, ಮಂಜುನಾಥರೆಡ್ಡಿ ಸೇರಿದಂತೆ ಹಲವರು

# ಅನಗತ್ಯ ವಿವಾದ ಬೇಡ: ಗ್ರಾಮಸ್ಥರ ಮೇಲೆ ಗರಂ ಆದ ಶಾಸಕಿ ರೂಪಾ ಶಶಿಧರ್

ಬೆಂಗಳೂರು

ಗ್ರಾಮಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಎಲ್ಲರೂ ಸಹಕರಿಸಬೇಕು. ರಸ್ತೆ ನಿರ್ಮಾಣಕ್ಕೆ ಸರ್ಕಾರ ಅನುದಾನ ಬಿಡುಗಡೆ ಮಾಡಿ ಗುತ್ತಿಗೆದಾರರು ಸ್ಥಳಕ್ಕೆ ಬಂದಿರುವಾಗ ಅನಗತ್ಯ ವಿಚಾರಗಳನ್ನು ಮುಂದಿಟ್ಟು ಕಾಮಗಾರಿಗೆ ಅಡ್ಡಿಪಡಿಸುವುದು ಸರಿಯಲ್ಲ ಎಂದು ಕೆಜಿಎಫ್ ಕ್ಷೇತ್ರದ ಶಾಸಕಿ ರೂಪಾ ಶಶಿಧರ್ ಗ್ರಾಮಸ್ಥರಿಗೆ ಖಡಕ್ ಎಚ್ಚರಿಕೆ ನೀಡಿದರು.



ಪಿಆರ್‌ಡಿ ಇಲಾಖೆಯಿಂದ ಬಿಡುಗಡೆಯಾದ ರೂ.7 ಕೋಟಿ ಅನುದಾನದಡಿ ಕ್ಯಾಸಂಬಳ್ಳಿ, ಜಕ್ಕರಸಕುಪ್ಪ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಏತೂರು ಹಾಗೂ ಶ್ರೀನಿವಾಸಸಂದ್ರ ಪಂಚಾಯಿತಿ ವ್ಯಾಪ್ತಿಯ ಚಿಂಚಾಂಡಹಳ್ಳಿ ಮತ್ತು ಕರಡುಗೂರು ಗ್ರಾಮಗಳಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಏತೂರು ಗ್ರಾಮದಲ್ಲಿ ಗ್ರಾಮಸ್ಥರನ್ನು ಉದ್ದೇಶಿಸಿ ಮಾತನಾಡಿದ ಶಾಸಕಿ, "ನಿಮ್ಮ ಊರಿಗೆ ರಸ್ತೆ ಕಾಮಗಾರಿ ಮಂಜೂರಾಗಿದೆ. ಗುತ್ತಿಗೆದಾರರೂ ಬಂದಿದ್ದಾರೆ. ಅಭಿವೃದ್ಧಿ ಕೆಲಸದ ಬಗ್ಗೆ ಮಾತನಾಡುವ ಬದಲು ಬೇರೆ ವಿಷಯಗಳನ್ನು ಮುಂದಿಟ್ಟುಕೊಂಡು ಗೊಂದಲ ಸೃಷ್ಟಿಸಿದರೆ ಹೇಗೆ? ಗ್ರಾಮದ ಸಮಸ್ಯೆಗಳನ್ನು ಮೊದಲು ಊರಿನ ಹಿರಿಯರು ಕುಳಿತು ಬಗೆಹರಿಸಿಕೊಳ್ಳಬೇಕು. ಸಾಧ್ಯವಾಗದಿದ್ದರೆ ನನ್ನ ಬಳಿ ಬನ್ನಿ, ನಾನು ಪರಿಹಾರಕ್ಕೆ ಪ್ರಯತ್ನಿಸುತ್ತೇನೆ" ಎಂದು ಹೇಳಿದರು.

ಗ್ರಾಮಗಳಿಗೆ ಭೇಟಿ ನೀಡಿದಾಗ ಸಾರ್ವಜನಿಕರು ತಮ್ಮ ಊರಿನ ಅಗತ್ಯಗಳನ್ನು ತಿಳಿಸುತ್ತಾರೆ. ಆದರೆ ಕಾಮಗಾರಿ ಆರಂಭಿಸಲು ಬಂದಾಗ ಮೂಲ ಸಮಸ್ಯೆಯನ್ನು ಬಿಟ್ಟು ಬೇರೆ ವಿಷಯಗಳ ಬಗ್ಗೆ ಚರ್ಚೆ ನಡೆಸುತ್ತಾರೆ. ಕೆಲವೆಡೆ ರಸ್ತೆ ಅಪೂರ್ಣವಾಗಿದ್ದರೂ ಅದರ ಬಗ್ಗೆ ಗಮನ ಸೆಳೆಯುವುದಿಲ್ಲ. ಗ್ರಾಮಗಳ ಅಭಿವೃದ್ಧಿಯ ದೃಷ್ಟಿಯಿಂದ ಎಲ್ಲರೂ ದೂರದೃಷ್ಟಿಯಿಂದ ಯೋಚಿಸಬೇಕು ಎಂದು ಸಲಹೆ ನೀಡಿದರು.

ತಾವು ರೈತರನ್ನು ಅತ್ಯಂತ ಗೌರವದಿಂದ ಕಾಣುತ್ತಿದ್ದು, ಗ್ರಾಮಗಳಿಗೆ ಮೂಲಸೌಕರ್ಯ ಕಲ್ಪಿಸುವ ಉದ್ದೇಶದಿಂದಲೇ ಕಾರ್ಯನಿರ್ವಹಿಸುತ್ತಿದ್ದೇನೆ. ಕಾಮಗಾರಿ ಪೂರ್ಣಗೊಂಡ ಬಳಿಕ ಒಂದು ವಾರದ ನಂತರವೂ ಪರಿಶೀಲನೆಗಾಗಿ ಮತ್ತೆ ಗ್ರಾಮಕ್ಕೆ ಬಂದು ಉಳಿದಿರುವ ಕೆಲಸಗಳನ್ನು ಗುರುತಿಸಿ ಪೂರ್ಣಗೊಳಿಸುತ್ತೇನೆ ಎಂದು ಭರವಸೆ ನೀಡಿದರು.

ಅಕಾಲಿಕ ಮಳೆಯಿಂದ ಜಕ್ಕರಸಕುಪ್ಪ ಪಂಚಾಯಿತಿ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಮಾವು ಮತ್ತು ಬಾಳೆ ಬೆಳೆಗಳಿಗೆ ಹಾನಿಯಾಗಿರುವ ಕುರಿತು ತೋಟಗಾರಿಕೆ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ನಡೆಸಲಾಗಿದೆ. ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿಯಡಿ ಬೆಳೆ ನಷ್ಟ ಪರಿಹಾರ ನೀಡಲು ಅಗತ್ಯ ಕ್ರಮ ಕೈಗೊಳ್ಳಲಾಗಿದ್ದು, ಶೀಘ್ರದಲ್ಲೇ ರೈತರಿಗೆ ಪರಿಹಾರ ವಿತರಿಸಲಾಗುವುದು ಎಂದು ಶಾಸಕಿ ತಿಳಿಸಿದರು.

ಪ್ರತಿಯೊಂದು ಕುಟುಂಬದಲ್ಲಿ ಸಮಸ್ಯೆಗಳಿರುವಂತೆ ಪ್ರತಿಯೊಂದು ಗ್ರಾಮದಲ್ಲಿಯೂ ಸಮಸ್ಯೆಗಳಿರುತ್ತವೆ. ಅವುಗಳನ್ನು ಪರಸ್ಪರ ಚರ್ಚಿಸಿ ಬಗೆಹರಿಸಿಕೊಳ್ಳಬೇಕು. "ನಾನು ನಿಮ್ಮ ಮನೆಯ ಹೆಣ್ಣುಮಗಳು, ನನ್ನ ಕೈಯಿಂದ ಸಾಧ್ಯವಾದಷ್ಟು ಅಭಿವೃದ್ಧಿ ಕೆಲಸ ಮಾಡಿಸಿಕೊಳ್ಳಿ" ಎಂದು ಗ್ರಾಮಸ್ಥರಿಗೆ ಮನವಿ ಮಾಡಿದರು.

ಗ್ರಾಮೀಣ ಭಾಗದಲ್ಲಿ ಮುಖ್ಯ ರಸ್ತೆಗೆ ಸಂಪರ್ಕ ಕಲ್ಪಿಸುವ ರಸ್ತೆಗಳು ಹದಗೆಟ್ಟಿರುವ ಬಗ್ಗೆ ನಿರಂತರ ದೂರುಗಳು ಬರುತ್ತಿವೆ. ವಿದ್ಯಾರ್ಥಿಗಳು ಹಾಗೂ ರೈತರಿಗೆ ಅನುಕೂಲವಾಗುವಂತೆ ಹಂತ ಹಂತವಾಗಿ ಸಂಪರ್ಕ ರಸ್ತೆಗಳನ್ನು ಅಭಿವೃದ್ಧಿಪಡಿಸಿ ಗುಣಮಟ್ಟದ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದು ಹೇಳಿದರು.

ಕ್ಯಾಸಂಬಳ್ಳಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಮಾಜಿ ಶಾಸಕ ಎಂ. ನಾರಾಯಣಸ್ವಾಮಿ, ರೂಪಾ ಶಶಿಧರ್ ಶಾಸಕರಾದ ಬಳಿಕ ಕೆಜಿಎಫ್ ಕ್ಷೇತ್ರದಲ್ಲಿ ಅಭಿವೃದ್ಧಿ ವೇಗ ಪಡೆದುಕೊಂಡಿದೆ. ನಗರ ಹಾಗೂ ಗ್ರಾಮೀಣ ಭಾಗಗಳಲ್ಲಿ ರಸ್ತೆ, ಬೀದಿ ದೀಪ, ಕೆಎಸ್‌ಆರ್‌ಪಿ ತರಬೇತಿ ಕೇಂದ್ರ, ಅಂಬೇಡ್ಕರ್ ಭವನ, ತಾಲೂಕು ಆಡಳಿತ ಮತ್ತು ತಾಲೂಕು ಪಂಚಾಯಿತಿ ಕಚೇರಿ ಸೇರಿದಂತೆ ಹಲವು ಅಭಿವೃದ್ಧಿ ಯೋಜನೆಗಳು ಅನುಷ್ಠಾನಗೊಳ್ಳುತ್ತಿವೆ ಎಂದು ಶ್ಲಾಘಿಸಿದರು.

ಗುತ್ತಿಗೆದಾರ ಆರವಿಂದ್ ತಾಲೂಕಿನ ಹಲವು ಗ್ರಾಮ ಹಾಗೂ ನಗರ ಪ್ರದೇಶಗಳಲ್ಲಿ ಗುಣಮಟ್ಟದ ಕಾಮಗಾರಿಗಳನ್ನು ನಿರ್ವಹಿಸಿದ್ದು, ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಜನರು ಮೆಚ್ಚುವ ರೀತಿಯಲ್ಲಿ ಕೆಲಸ ಮಾಡುವುದು ಪ್ರತಿಯೊಬ್ಬ ಗುತ್ತಿಗೆದಾರನ ಗುರಿಯಾಗಬೇಕು ಎಂದು ಶಾಸಕಿ ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಎಂ. ನಾರಾಯಣಸ್ವಾಮಿ, ಎಪಿಎಂಸಿ ಅಧ್ಯಕ್ಷ ವಿಜಯರಾಘವರೆಡ್ಡಿ, ಉಪಾಧ್ಯಕ್ಷ ಆನಂದಮೂರ್ತಿ, ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಗೀತಾ ವೆಂಕಟೇಶ್, ಜಯರಾಮರೆಡ್ಡಿ, ವಕೀಲ ಪ್ರಸನ್ನ, ಲಕ್ಷ್ಮೀ ವೆಂಕಟರಮಣಸ್ವಾಮಿ ದೇವಾಲಯ ಅಭಿವೃದ್ಧಿ ಸಮಿತಿ ಅಧ್ಯಕ್ಷ ಪದ್ಮನಾಭರೆಡ್ಡಿ, ಶಂಕರ್ ಹಾಗೂ ಇತರರು

# ಮದ್ಯದ ಅಮಲಿನಲ್ಲಿ ಸ್ವಿಮಿಂಗ್ ಪೂಲ್‌ಗೆ ಇಳಿದ ಯುವಕ ನೀರಿನಲ್ಲಿ ಮುಳುಗಿ ಸಾವು

ಬೆಂಗಳೂರು

ಮದ್ಯದ ಅಮಲಿನಲ್ಲಿದ್ದ 28 ವರ್ಷದ ಯುವಕನೊಬ್ಬ ಸ್ವಿಮಿಂಗ್ ಪೂಲ್‌ನಲ್ಲಿ ಈಜಲು ತೆರಳಿ ನೀರಿನಲ್ಲಿ ಮುಳುಗಿ ಮೃತಪಟ್ಟ ದುರ್ಘಟನೆ ಕೋಲಾರ ಜಿಲ್ಲೆಯ ಬಂಗಾರಪೇಟೆ ಪೊಲೀಸ್ ಠಾಣಾ ವ್ಯಾಪ್ತಿಯ ಸೂಲಿಕುಂಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜಿಯಾನ್ ಹಿಲ್ಸ್ ರೆಸಾರ್ಟ್‌ನಲ್ಲಿ ನಡೆದಿದೆ.

ಮೃತರನ್ನು ಮಧ್ಯಪ್ರದೇಶದ ಗ್ವಾಲಿಯರ್ ಮೂಲದ ಕುಶಾಲ್ ಚಂದ್ ಜೈನ್ ಅವರ ಪುತ್ರ ಕಮಲ್ ಜೈನ್ (28) ಎಂದು ಗುರುತಿಸಲಾಗಿದೆ. ಅವರು ಬೆಂಗಳೂರಿನ ಕ್ಯೂಐ ಕ್ಯಾಪ್ ಸಂಸ್ಥೆಯಲ್ಲಿ ಉದ್ಯೋಗಿಯಾಗಿದ್ದು, ಸಂಸ್ಥೆಯ ಸಿಬ್ಬಂದಿಗಳೊಂದಿಗೆ ಪ್ರವಾಸದ ನಿಮಿತ್ತ ಜಿಯಾನ್ ಹಿಲ್ಸ್‌ಗೆ ಆಗಮಿಸಿದ್ದರು.

ಪೊಲೀಸರ ಮಾಹಿತಿ ಪ್ರಕಾರ, ಜುಲೈ 3ರಂದು ಸಂಜೆ ಸುಮಾರು 6 ಗಂಟೆಗೆ ಸಂಸ್ಥೆಯ ಸುಮಾರು 50ಕ್ಕೂ ಹೆಚ್ಚು ಸಿಬ್ಬಂದಿ ರೆಸಾರ್ಟ್‌ಗೆ ಆಗಮಿಸಿ ರಾತ್ರಿ ನಡೆದ ಪಾರ್ಟಿಯಲ್ಲಿ ಭಾಗವಹಿಸಿದ್ದರು. ಈ ವೇಳೆ ಕಮಲ್ ಜೈನ್ ಮದ್ಯಪಾನ ಮಾಡಿದ್ದರು ಎನ್ನಲಾಗಿದೆ.

ಶನಿವಾರ ಮುಂಜಾನೆ ಸುಮಾರು 3ರಿಂದ 3.30 ಗಂಟೆಯ ನಡುವೆ ಅವರು ಒಬ್ಬರೇ ಸಮೀಪದ ಸ್ವಿಮಿಂಗ್ ಪೂಲ್‌ಗೆ ಈಜಲು ಇಳಿದಿದ್ದಾರೆ. ಈಜುತ್ತಿದ್ದ ವೇಳೆ ಆಯಾಸಗೊಂಡು ಮೇಲಕ್ಕೆ ಬರಲು ಸಾಧ್ಯವಾಗದೆ ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದಾರೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

ಘಟನೆಯ ಸಂದರ್ಭದಲ್ಲಿ ಕಮಲ್ ಜೈನ್ ಅವರ ಸಹೋದ್ಯೋಗಿಗಳಾದ ಕಮಲ್, ಆಯುಷ್, ವಿನಯ್ ಹಾಗೂ ಆಕಾಶ್ ರೆಸಾರ್ಟ್‌ನಲ್ಲೇ ಇದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಮೃತರ ಸಹೋದರಿ ಪ್ರಿಯಾ ಜೈನ್ ನೀಡಿದ ದೂರಿನ ಮೇರೆಗೆ ಬಂಗಾರಪೇಟೆ ಪೊಲೀಸ್ ಠಾಣೆಯಲ್ಲಿ ಅಸ್ವಾಭಾವಿಕ ಸಾವು (ಯುಡಿಆರ್) ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

ಮರಣೋತ್ತರ ಪರೀಕ್ಷೆಯ ಬಳಿಕ ಮೃತದೇಹವನ್ನು ಕುಟುಂಬಸ್ಥರ ವಶಕ್ಕೆ ಒಪ್ಪಿಸಲಾಗಿದೆ. ಘಟನಾ ಸ್ಥಳಕ್ಕೆ ಡಿವೈಎಸ್ಪಿ ಲಕ್ಷ್ಮಯ್ಯ ಹಾಗೂ ಪೊಲೀಸ್ ಇನ್‌ಸ್ಪೆಕ್ಟರ್ ರವಿಕುಮಾರ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ

ಬೆಂಗಳೂರು

ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ರಾಯಲ್ಪಾಡ್ ಗ್ರಾಮದಲ್ಲಿ ಶುಕ್ರವಾರ ಜಾಗೃತಿ ಜಾಥಾ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಡಾ. ಕೆ. ಸರ್ವೇಶ್, ತಾಲ್ಲೂಕಿನಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ನಡೆಯುತ್ತಿದ್ದು, ಎಲ್ಲ ಅರ್ಹ ಮತದಾರರು ಈ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸಿ ಸಹಕರಿಸಬೇಕು ಎಂದು ಮನವಿ ಮಾಡಿದರು.

ಮತದಾರರು ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಇರುವುದನ್ನು ಪರಿಶೀಲಿಸಿಕೊಳ್ಳಬೇಕು. ಹೆಸರು ಸೇರ್ಪಡೆ, ತಿದ್ದುಪಡಿ ಅಥವಾ ಇತರೆ ಅಗತ್ಯ ಬದಲಾವಣೆಗಳನ್ನು ಈ ಅವಧಿಯಲ್ಲಿ ಮಾಡಿಸಿಕೊಳ್ಳಲು ಅವಕಾಶವಿದೆ. ಮತದಾನ ಹಕ್ಕು ಚಲಾಯಿಸಲು ಹಾಗೂ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಮತದಾರರ ಗುರುತಿನ ಚೀಟಿ ಅಗತ್ಯವಾಗಿದ್ದು, ಯಾವುದೇ ಅರ್ಹ ಮತದಾರರು ಮತದಾನದ ಹಕ್ಕಿನಿಂದ ವಂಚಿತರಾಗಬಾರದು ಎಂದು ತಿಳಿಸಿದರು.

ರಾಯಲ್ಪಾಡ್ ಹೋಬಳಿಯ ವಿವಿಧ ಗ್ರಾಮಗಳಲ್ಲಿ ಜಾಗೃತಿ ಜಾಥಾ ನಡೆಸಲಾಗಿದ್ದು, ವಿದ್ಯಾರ್ಥಿಗಳ ಸಕ್ರಿಯ ಭಾಗವಹಿಸುವಿಕೆ ವಿಶೇಷ ಗಮನ ಸೆಳೆಯಿತು.

ಕಂದಾಯ ನಿರೀಕ್ಷಕ ಶಂಕರರೆಡ್ಡಿ, ಪಿಡಿಒ ನರೇಂದ್ರಬಾಬು, ಗಣಕ ತಜ್ಞ ಕೆ.ಎಂ. ಶ್ರೀನಾಥ್, ನರೇಗಾ ಇಂಜಿನಿಯರ್ ಚೇತನ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ತಾಲ್ಲೂಕು ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿ, ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಗ್ರಾಮಗಳ ಪ್ರಮುಖ ಬೀದಿಗಳಲ್ಲಿ ಜಾಥಾ ನಡೆಸಿ ಮತದಾರರ ಪಟ್ಟಿಗಳ ಪರಿಷ್ಕರಣೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

# ಕಾಳಹಸ್ತಿಪುರ ಕೆರೆಯಲ್ಲಿ ಅಕ್ರಮ ಮಣ್ಣು ದಂಧೆ ಆರೋಪ

ಕೋಲಾರ

ತಾಲೂಕಿನ ಕಾಳಹಸ್ತಿಪುರ ಗ್ರಾಮದ ಕೆರೆಯಲ್ಲಿ ನಡೆಯುತ್ತಿದೆ ಎನ್ನಲಾದ ಅಕ್ರಮ ಮಣ್ಣು ಗಣಿಗಾರಿಕೆ ಮತ್ತು ಸಾಗಾಟಕ್ಕೆ ಸಂಬಂಧಿಸಿದಂತೆ ಸಣ್ಣ ನೀರಾವರಿ ಇಲಾಖೆಯ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹರಿಕೃಷ್ಣ, ಅವರ ಸಿಬ್ಬಂದಿ ಆಚಾರಿ ಹಾಗೂ ಹೊನ್ನೇನಹಳ್ಳಿ ವಡಗೂರು ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿ ಹರೀಶ್ ಅವರನ್ನು ಅಮಾನತುಗೊಳಿಸಿ, ಅಕ್ರಮ ಮಣ್ಣು ಸಾಗಾಟ ನಡೆಸುತ್ತಿದ್ದಾರೆ ಎಂದು ಆರೋಪಿಸಿರುವ ಟಮಕ ಗ್ರಾಮದ ನಾಗಭೂಷಣ್ ವಿರುದ್ಧ ಪ್ರಕರಣ ದಾಖಲಿಸುವಂತೆ ಕರ್ನಾಟಕ ದಲಿತ ರಕ್ಷಣಾ ಸಮಿತಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದೆ.

ಸಮಿತಿಯ ಆರೋಪದಂತೆ, ಕಳೆದ ಸುಮಾರು ಎರಡು ತಿಂಗಳಿಂದ ಯಾವುದೇ ಅನುಮತಿ ಪಡೆಯದೇ ಕಾಳಹಸ್ತಿಪುರ ಕೆರೆಯಿಂದ ಹಿಟಾಚಿ ಯಂತ್ರಗಳು ಮತ್ತು ಟಿಪ್ಪರ್ ಲಾರಿಗಳ ಮೂಲಕ ಲಕ್ಷಾಂತರ ರೂಪಾಯಿ ಮೌಲ್ಯದ ಮಣ್ಣನ್ನು ಅಕ್ರಮವಾಗಿ ತೆಗೆದು ಖಾಸಗಿ ಬಡಾವಣೆಗಳು ಹಾಗೂ ಇಟ್ಟಿಗೆ ಕಾರ್ಖಾನೆಗಳಿಗೆ ಸಾಗಿಸಲಾಗುತ್ತಿದೆ. ಇದರಿಂದ ಕೆರೆಯ ಸ್ವರೂಪ ಹಾಳಾಗುತ್ತಿದ್ದು, ಸರ್ಕಾರದ ಖನಿಜ ಸಂಪತ್ತಿಗೂ ನಷ್ಟ ಉಂಟಾಗುತ್ತಿದೆ ಎಂದು ದೂರಲಾಗಿದೆ.

ಅಕ್ರಮ ಮಣ್ಣು ದಂಧೆ ನಡೆಯುತ್ತಿರುವ ಕುರಿತು ಮಾಹಿತಿ ಪಡೆದ ಬಳಿಕ ಸಣ್ಣ ನೀರಾವರಿ ಇಲಾಖೆಯ ಸಹಾಯಕ ಇಂಜಿನಿಯರ್ ಹರಿಕೃಷ್ಣ ಅವರನ್ನು ಸಂಪರ್ಕಿಸಿ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದರೂ, ತಾವು ಸ್ಥಳಕ್ಕೆ ಬರುವುದಿಲ್ಲ ಎಂದು ತಿಳಿಸಿ ಇಲಾಖೆಯ ಸಿಬ್ಬಂದಿ ಆಚಾರಿ ಅವರನ್ನು ಕಳುಹಿಸಿದ್ದರು ಎಂದು ಸಂಘಟನೆ ಆರೋಪಿಸಿದೆ. ಆಚಾರಿ ಸ್ಥಳಕ್ಕೆ ಬಂದು ಕೆಲಕಾಲ ಮಣ್ಣು ತೆಗೆಯುವುದನ್ನು ತಡೆದರೂ, ನಂತರ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಳ್ಳಲಿಲ್ಲ ಎಂದು ಹೇಳಿದೆ.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹರೀಶ್ ಕೂಡ ಸ್ಥಳಕ್ಕೆ ಭೇಟಿ ನೀಡದೇ, ತಮಗೆ ಈ ಪ್ರಕರಣಕ್ಕೂ ಸಂಬಂಧವಿಲ್ಲ ಎಂದು ತಿಳಿಸಿದ್ದರು ಎಂದು ಸಂಘಟನೆ ದೂರಿದೆ.

# ಯಾವುದೇ ಒತ್ತುವರಿಯನ್ನು ಸಹಿಸುವುದಿಲ್ಲ: ಜಗದೀಶ್.ಜಿ

ಬೆಂಗಳೂರು

ಪಾದಚಾರಿಗಳಿಗೆ ಸುರಕ್ಷಿತ ಹಾಗೂ ಅಡೆತಡೆರಹಿತ ಸಂಚಾರ ಕಲ್ಪಿಸುವ ಉದ್ದೇಶದಿಂದ ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗಗಳ ಮೇಲಿನ ಒತ್ತುವರಿ ತೆರವು ಕಾರ್ಯಾಚರಣೆ ನಾಲ್ಕನೇ ದಿನವೂ ಯಶಸ್ವಿಯಾಗಿ ಮುಂದುವರಿದಿದೆ.

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರ ನಿರ್ದೇಶನ ಹಾಗೂ ಕೇಂದ್ರ ನಗರ ಪಾಲಿಕೆ ಆಯುಕ್ತ ಜಗದೀಶ್ ಜಿ ಅವರ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ ನಡೆಸಲಾಗಿದೆ.

ಈ ಕುರಿತು ಮಾತನಾಡಿದ ಆಯುಕ್ತ ಜಗದೀಶ್ ಜಿ, "ಪಾದಚಾರಿ ಮಾರ್ಗಗಳು ಸಾರ್ವಜನಿಕರ ಹಕ್ಕು. ಯಾವುದೇ ರೀತಿಯ ಒತ್ತುವರಿಯನ್ನು ಸಹಿಸುವುದಿಲ್ಲ. ಸಾರ್ವಜನಿಕರ ಸುರಕ್ಷಿತ ಹಾಗೂ ಸುಗಮ ಸಂಚಾರಕ್ಕಾಗಿ ಒತ್ತುವರಿ ತೆರವು ಅಭಿಯಾನವನ್ನು ಇನ್ನಷ್ಟು ತೀವ್ರಗೊಳಿಸಲಾಗುತ್ತಿದೆ" ಎಂದು ಹೇಳಿದರು.

ಇಂದಿನ ಕಾರ್ಯಾಚರಣೆಯಲ್ಲಿ 8 ರಸ್ತೆಗಳಲ್ಲಿನ ಒಟ್ಟು 13 ಕಿಲೋಮೀಟರ್ ಉದ್ದದ ಪಾದಚಾರಿ ಮಾರ್ಗಗಳನ್ನು ಒತ್ತುವರಿಯಿಂದ ಮುಕ್ತಗೊಳಿಸಲಾಗಿದೆ.

ಕಾರ್ಯಾಚರಣೆಯಲ್ಲಿ 43 ಪೆಟ್ಟಿ ಅಂಗಡಿಗಳು, 38 ತಳ್ಳುವ ಗಾಡಿಗಳು, 92 ಶೀಟ್‌ಗಳು ಮತ್ತು ಮೇಲ್ಛಾವಣಿಗಳು, 67 ರ್‍ಯಾಂಪ್‌ಗಳು ಹಾಗೂ ಮೆಟ್ಟಿಲುಗಳು, 4 ಶೆಡ್‌ಗಳು, 41 ಜಾಹೀರಾತು ಫಲಕಗಳು ಮತ್ತು 63 ಟನ್ ಕಟ್ಟಡ ಹಾಗೂ ಇತರೆ ತ್ಯಾಜ್ಯಗಳನ್ನು ತೆರವುಗೊಳಿಸಲಾಗಿದೆ.

ಕಾರ್ಯಾಚರಣೆಗೆ 100 ಕಾರ್ಮಿಕರು, 8 ಜೆಸಿಬಿಗಳು, 23 ಟ್ರ್ಯಾಕ್ಟರ್‌ಗಳು ಹಾಗೂ 5 ಟಿಪ್ಪರ್‌ಗಳನ್ನು ಬಳಸಿಕೊಳ್ಳಲಾಗಿದ್ದು, ಸಂಚಾರ ಮತ್ತು ಕಾನೂನು ಸುವ್ಯವಸ್ಥೆ ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ತೆರವು ಕಾರ್ಯಾಚರಣೆ ಯಶಸ್ವಿಯಾಗಿ ನಡೆಯಿತು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
09/07/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಬೃಹತ್ ಧರಣಿಗೆ ಕರೆ

ಶಿಡ್ಲಘಟ್ಟ

ತಾಲೂಕು ಆಡಳಿತದ ದಲಿತ ವಿರೋಧಿ ಧೋರಣೆ, ಭ್ರಷ್ಟಾಚಾರ ಹಾಗೂ ಆಡಳಿತ ವೈಫಲ್ಯಗಳನ್ನು ಖಂಡಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ದಸಂಸ) ಶಿಡ್ಲಘಟ್ಟ ತಾಲೂಕು ಘಟಕ ಜುಲೈ 6ರಂದು ತಾಲೂಕು ಕಚೇರಿ ಮುಂಭಾಗ ಬೃಹತ್ ಧರಣಿ ನಡೆಸಲು ತೀರ್ಮಾನಿಸಿದೆ.

ನಗರದ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ದಸಂಸ ಚಿಕ್ಕಬಳ್ಳಾಪುರ ಜಿಲ್ಲಾ ಸಂಚಾಲಕ ಮೇಲೂರು ಮಂಜುನಾಥ್, ದೇಶಕ್ಕೆ ಸ್ವಾತಂತ್ರ್ಯ ಲಭಿಸಿ 80 ವರ್ಷಗಳು ಕಳೆದರೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರ ಸಾಮಾಜಿಕ ಹಾಗೂ ಆರ್ಥಿಕ ಸ್ಥಿತಿಯಲ್ಲಿ ನಿರೀಕ್ಷಿತ ಮಟ್ಟದ ಬದಲಾವಣೆ ಆಗಿಲ್ಲ ಎಂದು ಆರೋಪಿಸಿದರು.

ತಾಲೂಕಿನಲ್ಲಿ ಶೇ.36ರಷ್ಟು ಎಸ್‌ಸಿ–ಎಸ್‌ಟಿ ಜನಸಂಖ್ಯೆ ಇದ್ದರೂ ಅವರನ್ನು ಕೇವಲ ಮತ ಬ್ಯಾಂಕ್ ಆಗಿ ಬಳಸಿಕೊಳ್ಳಲಾಗುತ್ತಿದೆ. ಸಂವಿಧಾನ ನೀಡಿರುವ ಹಕ್ಕುಗಳು ಹಾಗೂ ಮೀಸಲಾತಿ ಸೌಲಭ್ಯಗಳು ಸಮರ್ಪಕವಾಗಿ ಜಾರಿಯಾಗುತ್ತಿಲ್ಲ ಎಂದು ಅವರು ದೂರಿದರು.

ಎಸ್‌ಸಿಪಿ ಹಾಗೂ ಟಿಎಸ್‌ಪಿ ಯೋಜನೆಗಳ ಅನುದಾನವನ್ನು ದಲಿತರ ಅಭಿವೃದ್ಧಿಗೆ ಬಳಸುವ ಬದಲು ಗ್ಯಾರಂಟಿ ಯೋಜನೆಗಳಿಗೆ ವರ್ಗಾವಣೆ ಮಾಡಲಾಗುತ್ತಿದೆ. ನಿವೇಶನ, ಮನೆ, ಕೃಷಿ ಭೂಮಿ ಹಾಗೂ ಸ್ಮಶಾನದಂತಹ ಮೂಲಭೂತ ಸೌಲಭ್ಯಗಳಿಗಾಗಿ ಇಂದಿಗೂ ದಲಿತರು ಹೋರಾಟ ನಡೆಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

ಫಾರಂ 50, 53 ಹಾಗೂ 57ರಡಿ ಸಲ್ಲಿಸಿರುವ ಸಾವಿರಾರು ಬಗರ್‌ಹುಕುಂ ಅರ್ಜಿಗಳು ಹಲವು ವರ್ಷಗಳಿಂದ ಬಾಕಿ ಉಳಿದಿದ್ದು, ದರಖಾಸ್ತು ಸಮಿತಿ ರಚನೆಯಾಗದ ಕಾರಣ ಭೂ ಮಂಜೂರಾತಿ ಪ್ರಕ್ರಿಯೆ ಸ್ಥಗಿತಗೊಂಡಿದೆ ಎಂದು ಆರೋಪಿಸಿದರು.

ತಾಲೂಕು ಆಡಳಿತ ದಲಿತ ವಿರೋಧಿ ಧೋರಣೆ ಅನುಸರಿಸುತ್ತಿದ್ದು, ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ಸಮರ್ಪಕ ನ್ಯಾಯ ದೊರೆಯುತ್ತಿಲ್ಲ. ತಾಲೂಕು ಕಚೇರಿಯಲ್ಲಿ ಭ್ರಷ್ಟಾಚಾರ ವ್ಯಾಪಕವಾಗಿದ್ದು, ಸಾರ್ವಜನಿಕರು ತಮ್ಮ ಕೆಲಸಗಳಿಗಾಗಿ ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಬಶೆಟ್ಟಿಹಳ್ಳಿ ಹೋಬಳಿಯ ತೋಕಲಹಳ್ಳಿ ಗ್ರಾಮದ ರೈತರಿಗೆ ಸಾಗುವಳಿ ಚೀಟಿ ವಿತರಣೆ, ದರಖಾಸ್ತು ಸಮಿತಿ ರಚನೆ, ಬಗರ್‌ಹುಕುಂ ಸಾಗುವಳಿದಾರರಿಗೆ ಭೂ ಮಂಜೂರು, ದಲಿತರಿಗೆ ನಿವೇಶನ ಹಾಗೂ ಸ್ಮಶಾನ ಭೂಮಿ ಒದಗಿಸುವುದು ಮತ್ತು ಎಸ್‌ಸಿಪಿ–ಟಿಎಸ್‌ಪಿ ಅನುದಾನವನ್ನು ದಲಿತರ ಅಭಿವೃದ್ಧಿಗೆ ಮಾತ್ರ ಬಳಸುವಂತೆ ಸೇರಿದಂತೆ ಹಲವು ಬೇಡಿಕೆಗಳನ್ನು ಸರ್ಕಾರ ತಕ್ಷಣ ಈಡೇರಿಸಬೇಕು ಎಂದು ಆಗ್ರಹಿಸಿದರು.

ಬೇಡಿಕೆಗಳನ್ನು ಸರ್ಕಾರ ಕೂಡಲೇ ಈಡೇರಿಸದಿದ್ದರೆ ಜಿಲ್ಲಾಮಟ್ಟದಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಸಂಘಟನಾ ಸಂಚಾಲಕ ಧಡಂಘಟ್ಟ ತಿರುಮಲೇಶ್, ತಾಲೂಕು ಸಂಚಾಲಕ ಎ.ಎಲ್. ನಾರಾಯಣಸ್ವಾಮಿ, ತಾಲೂಕು ಸಂಘಟನಾ ಸಂಚಾಲಕ ಹೆಣ್ಣಂಗೂರು ಸುಬ್ರಮಣಿ, ದಿಬ್ಬೂರಹಳ್ಳಿ ಚಿಕ್ಕನರಸಿಂಹಯ್ಯ, ದಬರಗಾನಹಳ್ಳಿ ರಾಜಪ್ಪ, ಕೆಮುತ್ತುಕದಹಳ್ಳಿ ಕೆ.ಎಂ. ನಾರಾಯಣಸ್ವಾಮಿ, ತಾಲೂಕು ಮುಖಂಡರಾದ ಹೇಮಾರ್ಲಹಳ್ಳಿ ಮುನಿಯಪ್ಪ, ಜಿ. ಕುರುಬರಹಳ್ಳಿ ವೆಂಕಟಸ್ವಾಮಿ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

# ರೈಲು ನಿಲುಗಡೆ ಅವಧಿ ವಿಸ್ತರಣೆ

ಬೆಂಗಳೂರು

ಪ್ರಯಾಣಿಕರ ಅನುಕೂಲವನ್ನು ಗಮನದಲ್ಲಿಟ್ಟುಕೊಂಡು, ನೈರುತ್ಯ ರೈಲ್ವೆ ರೈಲು ಸಂಖ್ಯೆ 16595/16596 ಕೆಎಸ್‌ಆರ್ ಬೆಂಗಳೂರು–ಕಾರವಾರ–ಕೆಎಸ್‌ಆರ್ ಬೆಂಗಳೂರು ಪಂಚಗಂಗಾ ಎಕ್ಸ್‌ಪ್ರೆಸ್ ರೈಲಿನ ಕುಣಿಗಲ್ (ಏಖಉಐ) ರೈಲು ನಿಲ್ದಾಣದ ತಾತ್ಕಾಲಿಕ ನಿಲುಗಡೆ ಅವಧಿಯನ್ನು ವಿಸ್ತರಿಸಿದೆ.

ಈ ಹಿಂದೆ ಜಾರಿಯಲ್ಲಿದ್ದ ತಾತ್ಕಾಲಿಕ ನಿಲುಗಡೆಯನ್ನು 2026ರ ಜುಲೈ 3ರಿಂದ ಸೆಪ್ಟೆಂಬರ್ 30ರವರೆಗೆ ಮುಂದುವರಿಸಲು ನೈರುತ್ಯ ರೈಲ್ವೆ ನಿರ್ಧರಿಸಿದೆ.

ಕುಣಿಗಲ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಪ್ರಯಾಣಿಕರಿಂದ ವ್ಯಕ್ತವಾಗಿದ್ದ ಬೇಡಿಕೆಯನ್ನು ಪರಿಗಣಿಸಿ ಈ ಕ್ರಮ ಕೈಗೊಳ್ಳಲಾಗಿದ್ದು, ಕಾರವಾರ ಮತ್ತು ಬೆಂಗಳೂರು ನಡುವೆ ಸಂಚರಿಸುವ ಪ್ರಯಾಣಿಕರಿಗೆ ಇದರಿಂದ ಹೆಚ್ಚಿನ ಅನುಕೂಲವಾಗಲಿದೆ.

ನೈರುತ್ಯ ರೈಲ್ವೆಯ ಈ ನಿರ್ಧಾರದಿಂದ ಕುಣಿಗಲ್ ಭಾಗದ ಸಾರ್ವಜನಿಕರು, ವಿದ್ಯಾರ್ಥಿಗಳು, ಉದ್ಯೋಗಿಗಳು ಹಾಗೂ ವ್ಯಾಪಾರಸ್ಥರಿಗೆ ಸಂಚಾರದಲ್ಲಿ ಮತ್ತಷ್ಟು ಅನುಕೂಲ ದೊರೆಯುವ ನಿರೀಕ್ಷೆಯಿದೆ.



ತಿಪಟೂರು ನಗರದ ಹೋಟೆಲ್ ಶಿವಂ ಕೆಫೆ ಸಭಾಂಗಣದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ತಾಲೂಕು ಘಟಕದ ವತಿಯಿಂದ ಮೊನ್ನೆ ನಿಧನರಾದ ತುಮಕೂರಿನ ಹಿರಿಯ ಪತ್ರಕರ್ತ ದಿ.ಎಂ.ಈಶ್ವರ್‌ರವರಿಗೆ ಶ್ರದ್ಧಾಂಜಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

# ಬಿಜೆಪಿ ಸಾಧನೆಗಳು ತಿಳಿಯಲು 'ಸರಳ' ಆಪ್ ಬಳಸಿ: ಕೊಮ್ಮನಹಳ್ಳಿ ಆನಂದ್

ಕೋಲಾರ

ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ಸಾಧನೆಗಳು ಹಾಗೂ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ 12 ವರ್ಷಗಳ ಆಡಳಿತದ ಜನಪರ ಯೋಜನೆಗಳ ಮಾಹಿತಿಯನ್ನು ಸಾರ್ವಜನಿಕರಿಗೆ ತಲುಪಿಸುವ ಉದ್ದೇಶದಿಂದ ಪಕ್ಷ ರೂಪಿಸಿರುವ 'ಸರಳ' ಆಪ್ ಅನ್ನು ಕಾರ್ಯಕರ್ತರು ವ್ಯಾಪಕವಾಗಿ ಬಳಸಬೇಕು ಎಂದು ಬಿಜೆಪಿ ರೈತ ಮೋರ್ಚಾ ಜಿಲ್ಲಾ ಅಧ್ಯಕ್ಷ ಕೊಮ್ಮನಹಳ್ಳಿ ಆನಂದ್ ಕರೆ ನೀಡಿದರು.

ನಗರದ ಹೊರವಲಯದಲ್ಲಿರುವ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಶನಿವಾರ ನಡೆದ ಬಿಜೆಪಿ ರೈತ ಮೋರ್ಚಾ ಜಿಲ್ಲಾ ಪದಾಧಿಕಾರಿಗಳು ಹಾಗೂ ಮಂಡಲ ಅಧ್ಯಕ್ಷರ ಸಭೆಯಲ್ಲಿ ಮಾತನಾಡಿದ ಅವರು, ರಾಷ್ಟ್ರೀಯ ಅಧ್ಯಕ್ಷರಿಂದ ಹಿಡಿದು ಬೂತ್ ಮಟ್ಟದ ಸಾಮಾನ್ಯ ಕಾರ್ಯಕರ್ತರವರೆಗೂ ಮಾಹಿತಿ ತಲುಪಿಸುವ ಉದ್ದೇಶದಿಂದ ಈ ಆಪ್ ಅಭಿವೃದ್ಧಿಪಡಿಸಲಾಗಿದೆ.

ಕಾರ್ಯಕರ್ತರು ಇದರ ಸದುಪಯೋಗ ಪಡೆದು ಸರ್ಕಾರದ ಯೋಜನೆಗಳು ಹಾಗೂ ಪಕ್ಷದ ಚಟುವಟಿಕೆಗಳ ಮಾಹಿತಿಯನ್ನು ಸಾರ್ವಜನಿಕರಿಗೆ ತಲುಪಿಸುವ ಜವಾಬ್ದಾರಿ ವಹಿಸಬೇಕು ಎಂದು ಹೇಳಿದರು.



ದೇಶಾದ್ಯಂತ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಆರಂಭವಾಗಿದ್ದು, ಪಕ್ಷದಿಂದ ನೇಮಕಗೊಂಡಿರುವ ಬಿಎಲ್‌ಒ–2 ಕಾರ್ಯಕರ್ತರು ಎಸ್‌ಐಆರ್ ಅರ್ಜಿಗಳನ್ನು ಪಡೆದು ಮತದಾರರಿಂದ ಗಣತಿ ನಮೂನೆಗಳನ್ನು ಭರ್ತಿ ಮಾಡಿಸಿ, ಸಹಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸುವಂತೆ ನೋಡಿಕೊಳ್ಳಬೇಕು.

ಯಾವುದೇ ಅರ್ಹ ಮತದಾರರು ಮತದಾನದ ಹಕ್ಕಿನಿಂದ ವಂಚಿತರಾಗದಂತೆ ರೈತ ಮೋರ್ಚಾ ಪದಾಧಿಕಾರಿಗಳು ಜಾಗೃತಿ ಮೂಡಿಸಿ ಅಗತ್ಯ ಸಹಕಾರ ನೀಡಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಬಿಜೆಪಿ ರೈತ ಮೋರ್ಚಾ ರಾಜ್ಯ ಕಾರ್ಯಕಾರಿಣಿ ಸದಸ್ಯ ಲಕ್ಷ್ಮಣಗೌಡ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಣ್ಣ, ಜಿಲ್ಲಾ ಉಪಾಧ್ಯಕ್ಷ ವಿಜಯ ಭಾಸ್ಕರ್ ನಾಯ್ಡು, ವಿವಿಧ ಮಂಡಲ ಅಧ್ಯಕ್ಷರು ಹಾಗೂ ಪದಾಧಿಕಾರಿಗಳಾದ ಲಕ್ಷ್ಮಣರೆಡ್ಡಿ, ಲಕ್ಷ್ಮೀನಾರಾಯಣ ಶೆಟ್ಟಿ, ಚಂದ್ರಶೇಖರ್, ಓಹಿಲೇಶ್, ಅಂಬರೀಶ್, ಚಂದ್ರಶೇಖರ್ ಗೌಡ, ವೇಣು, ಸತೀಶ್, ರಂಗೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಜಮೀನು ದಾಖಲೆ ವಿತರಣೆಯಲ್ಲಿ ವಿಳಂಬ ಖಂಡಿಸಿ ರೈತ ಸಂಘ ಪ್ರತಿಭಟನೆ



ಮಾಲೂರು

ರೈತರ ಜಮೀನುಗಳಿಗೆ ಸಂಬಂಧಿಸಿದ ದಾಖಲೆಗಳನ್ನು ನಿಗದಿತ ಅವಧಿಯಲ್ಲಿ ನೀಡದೆ ವಿಳಂಬ ಮಾಡುತ್ತಿರುವ ಕಂದಾಯ ಹಾಗೂ ಸರ್ವೆ ಇಲಾಖೆ ಅಧಿಕಾರಿಗಳ ವಿರುದ್ಧ ಕರ್ನಾಟಕ ರಾಜ್ಯ ರೈತ ಸಂಘದ ನೇತೃತ್ವದಲ್ಲಿ ತಾಲೂಕು ಕಚೇರಿ ಎದುರು ಪ್ರತಿಭಟನೆ ನಡೆಸಿ ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಅಧ್ಯಕ್ಷ ಅಬಣಿ ಶಿವಪ್ಪ, ರೈತರ ಜಮೀನುಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಕಂದಾಯ ಮತ್ತು ಸರ್ವೆ ಇಲಾಖೆ ಅಧಿಕಾರಿಗಳು ಸಮಯಕ್ಕೆ ಸರಿಯಾಗಿ ನೀಡದೇ ವಿಳಂಬ ಧೋರಣೆ ಅನುಸರಿಸುತ್ತಿರುವುದರಿಂದ ರೈತರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಆರೋಪಿಸಿದರು.

ತಾಲೂಕಿನ ಚಿಕ್ಕಕಡತೂರು ಗ್ರಾಮದ ಸರ್ವೆ ನಂ.75ಕ್ಕೆ ಸಂಬಂಧಿಸಿದ ಸಾಗುವಳಿ ಚೀಟಿ, ಸರ್ಕಾರಕ್ಕೆ ಪಾವತಿಸಿರುವ ಚಾಲನ್, ಮಹಜರು, ಹೇಳಿಕೆ ನಕ್ಷೆ, 1965ರಿಂದ 2002ರವರೆಗಿನ ಕೈಬರಹ ಪಹಣಿಗಳು ಸೇರಿದಂತೆ ಎಲ್ಲಾ ದಾಖಲೆಗಳ ದೃಢೀಕೃತ ಪ್ರತಿಗಳಿಗಾಗಿ ರೈತರಾದ ಮುನಿಸ್ವಾಮಿ ನಾಯಕ, ತಿಮ್ಮರಾಯ ನಾಯಕ ಹಾಗೂ ಮುನಿ ನಾಯಕ ಅರ್ಜಿ ಸಲ್ಲಿಸಿ, ಪೌತಿ ವಾರಸುದಾರಿಕೆ ಆಧಾರದ ಮೇಲೆ ಖಾತೆ ಬದಲಾವಣೆಗೆ ಮನವಿ ಮಾಡಿದ್ದರು. ಆದರೆ ಇದುವರೆಗೆ ದಾಖಲೆಗಳನ್ನು ನೀಡಿಲ್ಲ ಎಂದು ದೂರಿದರು.

ಸಂಬಂಧಿತ ಸರ್ವೆ ಸಂಖ್ಯೆಯ ಎಲ್ಲಾ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಆನ್‌ಲೈನ್‌ಗೆ ಅಪ್‌ಲೋಡ್ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದರೂ, ಯಾವುದೇ ದಾಖಲೆಗಳ ಮುದ್ರಿತ ಪ್ರತಿಗಳನ್ನು ನೀಡುತ್ತಿಲ್ಲ. ಉಪ ವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಪ್ರಕರಣ ಇರುವ ಹಿನ್ನೆಲೆಯಲ್ಲಿ ದಾಖಲೆಗಳ ಅಗತ್ಯವಿದ್ದರೂ ತಾಲೂಕು ಕಚೇರಿ ಹಾಗೂ ಸರ್ವೆ ಇಲಾಖೆ ಅಧಿಕಾರಿಗಳು ವಿಳಂಬ ಮಾಡುತ್ತಿರುವುದರಿಂದ ರೈತರಿಗೆ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿದರು.

ತಹಶೀಲ್ದಾರ್ ಈ ವಿಷಯದಲ್ಲಿ ತಕ್ಷಣ ಮಧ್ಯಪ್ರವೇಶಿಸಿ ರೈತರಿಗೆ ಅಗತ್ಯ ದಾಖಲೆಗಳನ್ನು ಶೀಘ್ರವಾಗಿ ಒದಗಿಸುವ ಮೂಲಕ ನ್ಯಾಯ ಕಲ್ಪಿಸಬೇಕು ಎಂದು ಅವರು ಒತ್ತಾಯಿಸಿದರು.

ಕರ್ನಾಟಕ ರಾಜ್ಯ ರೈತ ಸಂಘದ ಮುಖಂಡ ಕೋಟಿಗಾನಹಳ್ಳಿ ರಾಮಯ್ಯ ಮಾತನಾಡಿ, ಮಾಲೂರು ತಾಲೂಕಿನ ಕಂದಾಯ ಹಾಗೂ ಸರ್ವೆ ಇಲಾಖೆ ಅಧಿಕಾರಿಗಳು ರೈತರ ಜಮೀನು ದಾಖಲೆಗಳನ್ನು ನಿಗದಿತ ಅವಧಿಯಲ್ಲಿ ನೀಡುವಲ್ಲಿ ವಿಫಲರಾಗಿದ್ದಾರೆ. ಈ ಧೋರಣೆಯನ್ನು ಖಂಡಿಸುವುದಾಗಿ ತಿಳಿಸಿದ ಅವರು, ತಾಲೂಕಿನ ಶಾಸಕ ಕೆ.ವೈ. ನಂಜೇಗೌಡ ಅವರು ಅಧಿಕಾರಿಗಳ ಕಾರ್ಯವೈಖರಿಯ ಮೇಲೆ ಹೆಚ್ಚಿನ ನಿಗಾ ವಹಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ತಾಲೂಕು ಅಧ್ಯಕ್ಷ ಹರೀಶ್, ಹುಂಗೇನಹಳ್ಳಿ ವೆಂಕಟೇಶ್, ಕಡತೂರು ಸಿ.ಕೆ. ಶ್ರೀನಿವಾಸ್, ಅಶ್ವತ್ ನಾರಾಯಣ, ನಂಜುಂಡಪ್ಪ, ಶಂಕರ್, ಚಿರಂಜೀವಿ, ವಾಲ್ಮೀಕಿ ನಾಯಕ ಸಂಘದ ಜಿಲ್ಲಾಧ್ಯಕ್ಷ ನಾಗರಾಜ್, ರೈತ ಮುಖಂಡ ನಾಗರಾಜ್ ಸೇರಿದಂತೆ ಹಲವರು ಭಾಗವಹಿಸಿದ್ದರು.



ಮಾಲೂರು ತಾಲ್ಲೂಕಿನ ಲಕ್ಕೂರು ಹೋಬಳಿಯ ತಾಳಕುಂಟೆ ಗ್ರಾಮದಲ್ಲಿ ಶ್ರೀಮಾತೆ ಕ್ಕುಕ್ಕೆಮ್ಮ ದೇವಿಯ ನೂತನ ಚರ,ಸ್ಥಿರ ಪ್ರತಿಷ್ಠಾಪನ ಮಹೋತ್ಸವ ನಡೆಯಿತು.

# ಎಸ್‌ಐಆರ್ ಕಾರ್ಯವನ್ನು ವ್ಯವಸ್ಥಿತವಾಗಿ ನಿರ್ವಹಿಸುವಂತೆ ಸೂಚನೆ

ರಾಮನಗರ

ಚುನಾವಣಾ ಆಯೋಗದ ನಿರ್ದೇಶನದಂತೆ ರಾಜ್ಯಾದ್ಯಂತ ಹಾಗೂ ಜಿಲ್ಲೆಯಲ್ಲಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ–2026 (ಎಸ್‌ಐಆರ್) ಕಾರ್ಯವು ಜೂ. 30 ರಿಂದ ಆರಂಭಗೊಂಡಿದ್ದು, ಈ ಕಾರ್ಯಕ್ಕೆ ನಿಯೋಜನೆಗೊಂಡ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ವ್ಯವಸ್ಥಿತವಾಗಿ ನಿಗಧಿತ ಅವಧಿಯೊಳಗೆ ಎಚ್ಚರಿಕೆಯಿಂದ ನಿರ್ವಹಿಸಬೇಕು ಎಂದು ಬೆಂಗಳೂರು ದಕ್ಷಿಣ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಮಂಜುನಾಥ್.ಜೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅವರು ಜು.30ರ ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮತದಾರರ ಪಟ್ಟಿಯ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕುರಿತಂತೆ ಆಯೋಜಿಸಲಾಗಿದ್ದ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಪರಿಶೀಲಿಸಿ ಮಾತನಾಡಿದರು.

ಜಿಲ್ಲೆಯಲ್ಲಿ 1154 ಮತಗಟ್ಟೆಗಳಿದ್ದು, 9,38,586 ಮತದಾರರಿದ್ದಾರೆ. 182–ಮಾಗಡಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 301 ಮತಗಟ್ಟೆಗಳು, 2,42,328 ಮತದಾರರು, 183–ರಾಮನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 280 ಮತಗಟ್ಟೆಗಳು, 2,25,464 ಮತದಾರರು, 184–ಕನಕಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 297 ಮತಗಟ್ಟೆಗಳು, 2,36,194 ಮತದಾರರು ಹಾಗೂ 185–ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 276 ಮತಗಟ್ಟೆಗಳು, 2,34,600 ಮತದಾರರಿದ್ದಾರೆ. ಜಿಲ್ಲೆಯಲ್ಲಿ ಇದುವರೆಗೂ 259968 ಮತದಾರರಿಗೆ ಎನ್ಯೂಮರೇಷನ್ ಫಾರ್ಮ್ಗಳನ್ನು ನೀಡಲಾಗಿದ್ದು, ಶೇ. 27.70 ರಷ್ಟು ಪ್ರಗತಿ ಸಾಧಿಸಲಾಗಿದೆ. ರಾಜ್ಯದ ಇತರೆ ಜಿಲ್ಲೆಗಳಿಗೆ ಹೋಲಿಸಿದರೆ ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ಮತದಾರರ ವಿಶೇಷ ಪರಿಷ್ಕರಣೆ ಕಾರ್ಯವು ಶೇಕಡವಾರು ಹೆಚ್ಚಬೇಕು, ಈ ಕಾರ್ಯವನ್ನು ಚುರುಕುಗೊಳಿಸಬೇಕೆಂದು ತಿಳಿಸಿದ ಅವರು, ಎಸ್‌ಐಆರ್ ಕಾರ್ಯಕ್ಕೆ ನಿಯೋಜನೆಗೊಂಡ ನೋಡಲ್ ಅಧಿಕಾರಿಗಳು, ಸೂಪರ್‌ವೈಸರ್‌ಗಳು, ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎಲ್‌ಓ) ಉತ್ತಮವಾಗಿ ಕಾರ್ಯನಿರ್ವಹಿಸಲು ಸೂಚಿಸಿದರು.

ಜಿಲ್ಲೆಯ 1,154 ಬಿಎಲ್‌ಒಗಳು 2026ರ ಜೂನ್ 30 ರಿಂದ ಮತದಾರರ ವಿಶೇಷ ಸಮಗ್ರ ಪರಿಷ್ಕರಣ ಕಾರ್ಯದಲ್ಲಿ ನಿರತರಾಗಿದ್ದು, ಜು. 29ರ ವರೆಗೆ ಮನೆ ಮನೆಗೆ ಭೇಟಿ ನೀಡಿ ಎನ್ಯುಮರೇಶನ್ ಫಾರ್ಮ್ಗಳನ್ನು ನೀಡಲಿದ್ದಾರೆ. ಬಿಎಲ್‌ಒಗಳ ಮೇಲ್ವಿಚಾರಣೆಗಾಗಿ ಸೂಪರ್‌ವೈಸರ್‌ಗಳು ಹಾಗೂ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ. ಈ ಅಧಿಕಾರಿಗಳು ಕಡ್ಡಾಯವಾಗಿ ಬಿಎಲ್‌ಒಗಳು ಮನೆ ಮನೆಗೆ ಭೇಟಿ ನೀಡಿ ಎನ್ಯುಮರೇಶನ್ ಫಾರ್ಮ್ಗಳನ್ನು ನೀಡುತ್ತಿದ್ದಾರೆಯೇ ಎಂಬುದರ ಕುರಿತು ಪರಿಶೀಲಸಿ ವರದಿ ನೀಡಬೇಕೆಂದರು.

ಪ್ರಜಾಪ್ರಭುತ್ವದ ಅಡಿಪಾಯವಾಗಿರುವ ಮತದಾನದ ಹಕ್ಕನ್ನು ಪರಿಶೀಲಿಸುವ ಕಾರ್ಯವನ್ನು ಅಚ್ಚುಕಟ್ಟಾಗಿ ಯಾವುದೇ ಲೋಪವಿಲ್ಲದೇ ನಿಭಾಯಿಸುವ ಮೂಲಕ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ಸಮರ್ಥವಾಗಿ ನಿರ್ವಹಿಸುವಂತೆ ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ, ಎಲ್ಲಾ ತಾಲ್ಲೂಕಿನ ತಹಶೀಲ್ದಾರರು, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಬ್ರಾಹ್ಮಣ ಮಹಾಸಭಾ ಸಂಸ್ಥಾಪನಾ ದಿನಾಚರಣೆ

ಬೆಂಗಳೂರು

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಸಂಸ್ಥಾಪನಾ ದಿನಾಚರಣೆಯನ್ನು ಜುಲೈ 11ರಂದು ಬೆಂಗಳೂರಿನಲ್ಲಿ ಆಚರಿಸಲಾಗುತ್ತಿದ್ದು, ಸಮುದಾಯದ ಎಲ್ಲ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಮಹಾಸಭಾದ ಅಧ್ಯಕ್ಷ ಎಸ್. ರಘುನಾಥ್ ಮನವಿ ಮಾಡಿದ್ದಾರೆ.



ಈ ಕುರಿತು ಮಹಾಸಭಾದ ಪದಾಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಸಮಾಲೋಚನೆ ನಡೆಸಿ ಸಂಸ್ಥಾಪನಾ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ತೀರ್ಮಾನಿಸಲಾಗಿದೆ. ಬ್ರಾಹ್ಮಣ ಸಮುದಾಯದ ಐಕ್ಯತೆ, ಒಗ್ಗಟ್ಟು ಹಾಗೂ ಸಂಘಟನೆಯನ್ನು ಬಲಪಡಿಸುವ ಉದ್ದೇಶದಿಂದ ಮಹಾಸಭಾ ಹಲವು ಸಾಮಾಜಿಕ ಮತ್ತು ಜನೋಪಯೋಗಿ ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಂಡು ಬರುತ್ತಿದೆ ಎಂದು ಅವರು ತಿಳಿಸಿದ್ದಾರೆ. ಕಾರ್ಯಕ್ರಮವು ಬೆಂಗಳೂರಿನ ಶೇಷಾದ್ರಿ ರಸ್ತೆಯ ಬಬ್ಬೂರುಕಮ್ಮೆ ಸೇವಾ ಸಮಿತಿ ಸಭಾಂಗಣದಲ್ಲಿ ನಡೆಯಲಿದೆ. ಬೆಳಿಗ್ಗೆ 9 ಗಂಟೆಗೆ ಉಪಹಾರ ವ್ಯವಸ್ಥೆ ಇದ್ದು, ನಂತರ 10.30 ಗಂಟೆಗೆ ಸಭಾ ಕಾರ್ಯಕ್ರಮ ಆರಂಭವಾಗಲಿದೆ. ಮಧ್ಯಾಹ್ನ 1.30ಕ್ಕೆ ಭೋಜನ ವ್ಯವಸ್ಥೆ ಕಲ್ಪಿಸಲಾಗಿದೆ.

ಸಮುದಾಯದ ಹಿರಿಯರು, ಯುವಕರು, ಮಹಿಳೆಯರು ಹಾಗೂ ಎಲ್ಲಾ ವಿಪ್ರ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಂಸ್ಥಾಪನಾ ದಿನಾಚರಣೆಯನ್ನು ಯಶಸ್ವಿಗೊಳಿಸುವಂತೆ ಎಸ್. ರಘುನಾಥ್ ಮನವಿ

# 'ಕುಡಿಯುವ ನೀರಿನ ಸಮಸ್ಯೆಯಾಗದಂತೆ ಮುಂಜಾಗ್ರತೆವಹಿಸಿ'

ರಾಮನಗರ

ಜಿಲ್ಲೆಯ ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣವಾಗದಂತೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು, ಬರ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸಬೇಕು ಎಂದು ಬೆಂಗಳೂರು ದಕ್ಷಿಣ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮಂಜುನಾಥ್ ಜೆ. ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಜಿಲ್ಲಾ ಮಟ್ಟದ ಬರ ಪರಿಸ್ಥಿತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ 126 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ 1,520 ಗ್ರಾಮಗಳ ಪೈಕಿ ಪ್ರಸ್ತುತ 31 ಗ್ರಾಮ ಪಂಚಾಯಿತಿಗಳ 46 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ. ಈ ಗ್ರಾಮಗಳಿಗೆ ಖಾಸಗಿ ಟ್ಯಾಂಕರ್ ಹಾಗೂ ಬೋರ್‌ವೆಲ್‌ಗಳ ಮೂಲಕ ನೀರು ಪೂರೈಸಲಾಗುತ್ತಿದ್ದು, ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವಂತೆ ಸಂಬಂಧಿತ ಇಲಾಖೆಗೆ ಸೂಚಿಸಿದರು.



ಚನ್ನಪಟ್ಟಣ ತಾಲ್ಲೂಕಿನ 4 ಗ್ರಾಮಗಳು, ಹಾರೋಹಳ್ಳಿ ತಾಲ್ಲೂಕಿನ 7, ಕನಕಪುರ ತಾಲ್ಲೂಕಿನ 19, ಮಾಗಡಿ ತಾಲ್ಲೂಕಿನ 13 ಹಾಗೂ ರಾಮನಗರ ತಾಲ್ಲೂಕಿನ 3 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಕಂಡುಬಂದಿದೆ. 8 ಗ್ರಾಮಗಳಿಗೆ ಟ್ಯಾಂಕರ್ ಮೂಲಕ ಹಾಗೂ 40 ಗ್ರಾಮಗಳಿಗೆ ಖಾಸಗಿ ಬೋರ್‌ವೆಲ್‌ಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಲಾಯಿತು.

ನಗರ ಪ್ರದೇಶಗಳಲ್ಲಿ ಸದ್ಯ ಕುಡಿಯುವ ನೀರಿನ ಸಮಸ್ಯೆ ಇಲ್ಲ. ಆದರೆ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಪೂರೈಕೆಯಾಗುವ ಕುಡಿಯುವ ನೀರಿನ ಗುಣಮಟ್ಟವನ್ನು ಕಡ್ಡಾಯವಾಗಿ ಮೂರು ತಿಂಗಳಿಗೊಮ್ಮೆ ಪರೀಕ್ಷಿಸಿ ವರದಿ ಸಲ್ಲಿಸಬೇಕು. ನೀರು ಪೂರೈಕೆಯ ಗುಣಮಟ್ಟದ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಯಾವುದೇ ಆರೋಗ್ಯ ಸಮಸ್ಯೆಗಳು ಉಂಟಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಜಾನುವಾರು ಮೇವಿನ ಲಭ್ಯತೆಯನ್ನು ಪರಿಶೀಲಿಸಿದ ಅವರು, ಮುಂಬರುವ ದಿನಗಳ ಅಗತ್ಯವನ್ನು ಗಮನದಲ್ಲಿಟ್ಟುಕೊಂಡು ಎಲ್ಲ ಸಿದ್ಧತೆಗಳನ್ನು ಮುಂಚಿತವಾಗಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಬೆಂಗಳೂರು ನಗರಕ್ಕೆ ಹೊಂದಿಕೊಂಡಿರುವ ಜಿಲ್ಲೆಯಲ್ಲಿ ಕೃಷಿ ಭೂಮಿ ವರ್ಷದಿಂದ ವರ್ಷಕ್ಕೆ ಕಡಿಮೆಯಾಗುತ್ತಿರುವ ಹಿನ್ನೆಲೆಯಲ್ಲಿ ಕೃಷಿಯಲ್ಲಿ ನವೀನ ತಂತ್ರಜ್ಞಾನ ಬಳಕೆ ಹಾಗೂ ವಿನೂತನ ಕೃಷಿ ಪದ್ಧತಿಗಳನ್ನು ಉತ್ತೇಜಿಸಲು ಕ್ರಮ ಕೈಗೊಳ್ಳಬೇಕು.

ಕಳೆದ ಹತ್ತು ವರ್ಷಗಳ ಕೃಷಿ ಕ್ಷೇತ್ರದ ಬದಲಾವಣೆಗಳ ಕುರಿತು ಸಮಗ್ರ ಅಂಕಿಅಂಶಗಳನ್ನು ಮುಂದಿನ ಸಭೆಗೆ ಸಲ್ಲಿಸುವಂತೆ ಸೂಚಿಸಿದರು.

ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯ 102 ಕೆರೆಗಳು 2022ರಲ್ಲಿ ಭರ್ತಿಯಾಗಿದ್ದರೆ, ಪ್ರಸ್ತುತ ಕೇವಲ ಒಂದು ಕೆರೆ ಮಾತ್ರ ತುಂಬಿದೆ. ಕೆರೆಗಳ ಸಂರಕ್ಷಣೆಗೆ ಆದ್ಯತೆ ನೀಡಬೇಕು. ಕೆರೆಗಳ ಅಂಚಿನಲ್ಲಿ ಗಿಡಗಳನ್ನು ನೆಟ್ಟು, ನೀರು ಹರಿದು ಬರುವ ನಾಲೆಗಳು ಹಾಗೂ ಕಾಲುವೆಗಳನ್ನು ಸಂರಕ್ಷಿಸುವ ಮೂಲಕ ಕೆರೆಗಳ ಒತ್ತುವರಿ ತಡೆಯಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಸರ್ಕಾರಿ ಭೂಮಿ, ಸರ್ಕಾರಿ ಕಟ್ಟಡಗಳು, ವಿದ್ಯಾರ್ಥಿ ನಿಲಯಗಳು, ಶಾಲೆಗಳು, ಅಂಗನವಾಡಿಗಳು ಹಾಗೂ ಆಸ್ಪತ್ರೆಗಳ ಆಸ್ತಿ ದಾಖಲೆಗಳು, ಪಹಣಿ ಮತ್ತು ಇ–ಖಾತೆ ಸರ್ಕಾರದ ಹೆಸರಿನಲ್ಲಿವೆಯೇ ಎಂಬುದನ್ನು ಪರಿಶೀಲಿಸಿ ಮುಂದಿನ ಸಭೆಯೊಳಗೆ ವರದಿ ಸಲ್ಲಿಸುವಂತೆ ಸಂಬಂಧಿತ ಇಲಾಖೆಗೆ ಸೂಚಿಸಿದರು. ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯ ಹಾಗೂ ಅಂಗನವಾಡಿಗಳಿಗೆ ಶಾಶ್ವತ ಕಟ್ಟಡ ನಿರ್ಮಾಣಕ್ಕೆ ಅಗತ್ಯ ಮಾಹಿತಿಯನ್ನು ಸಲ್ಲಿಸಿದರೆ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಲಾಗುವುದು ಎಂದರು.

ಜಿಲ್ಲೆಯಲ್ಲಿ ಘನ ತ್ಯಾಜ್ಯ ನಿರ್ವಹಣೆ ಹಾಗೂ ಕಸ ವಿಲೇವಾರಿ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಕೆರೆ, ಭೂಮಿ ಹಾಗೂ ನೈಸರ್ಗಿಕ ಸಂಪನ್ಮೂಲಗಳ ರಕ್ಷಣೆಗೆ ಅಧಿಕಾರಿಗಳು ಹೆಚ್ಚಿನ ಗಮನ ನೀಡಬೇಕು ಎಂದು ಹೇಳಿದರು.

ಬೆಂಗಳೂರು ದಕ್ಷಿಣ ಜಿಲ್ಲೆಯು ಮುಖ್ಯಮಂತ್ರಿಗಳ ಕ್ಷೇತ್ರವಾಗಿರುವುದರಿಂದ ಅಧಿಕಾರಿಗಳು ಕಚೇರಿ ಕೆಲಸಕ್ಕೆ ಮಾತ್ರ ಸೀಮಿತರಾಗದೆ ಕ್ಷೇತ್ರಕ್ಕೆ ಭೇಟಿ ನೀಡಿ ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಬೇಕು ಎಂದು ಅವರು ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ, ವಿವಿಧ ತಾಲ್ಲೂಕುಗಳ ತಹಶೀಲ್ದಾರರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಂಬೇಡ್ಕರ್ ಪ್ರತಿಮೆ ಅನಾವರಣ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ

ವಿಜಯಪುರ

ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 14 ಅಡಿಗಳ ಎತ್ತರದ ಕಂಚಿನ ಪ್ರತಿಮೆ ಅನಾವರಣ ಕಾರ್ಯಕ್ರಮವನ್ನು ಅಖಿಲ ಭಾರತ ರಾಷ್ಟ್ರೀಯ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಉದ್ಘಾಟನೆ ಮಾಡಿರುವ ಕಾರ್ಯಕ್ರಮಕ್ಕೆ, ವಿಜಯಪುರ ಹೋಬಳಿಯ ನಾಗರೀಕರು, ವಿವಿಧ ಸಂಘ, ಸಂಸ್ಥೆಗಳು, ದಲಿತಪರ, ಕನ್ನಡಪರ, ಮಹಿಳಾ ಸಹಾಯ ಸಂಘಗಳು ಸೇರಿದಂತೆ ಎಲ್ಲರೂ ಭಾಗವಹಿಸುವಂತೆ ವಿಜಯಪುರ ಹೋಬಳಿ ಕಾಂಗ್ರೆಸ್ ಅಧ್ಯಕ್ಷ ಆರ್.ಅಮರನಾಥ್ ಮನವಿ ಮಾಡಿದರು.

ಪಟ್ಟಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಡಾ.ಬಿ.ಆರ್.ಅಂಬೇಡ್ಕರ್ ಅವರು, ರಚಿಸಿಕೊಟ್ಟಿರುವ ವಿಶ್ವದಲ್ಲೆ ವಿಶಿಷ್ಟವಾದ ಸಂವಿಧಾನದಡಿಯಲ್ಲಿ ಬದುಕು ಕಟ್ಟಿಕೊಂಡಿರುವ ನಾವೆಲ್ಲರೂ, ಜ್ಯಾತ್ಯಾತೀತವಾಗಿ ಬದುಕುತ್ತಿದ್ದೇವೆ. ಅಂತಹ ಮಹಾನ್ ಚೇತನದ ಪ್ರತಿಮೆ ಅನಾವರಣಕ್ಕೆ ಜಾತಿ, ಮತ, ಬೇಧ, ರಾಜಕೀಯವಾಗಿಯೂ ಪಕ್ಷಾತೀತವಾಗಿ ಎಲ್ಲರೂ ಭಾಗವಹಿಸಬೇಕಿದೆ. ಇದು ರಾಜಕೀಯ ಪಕ್ಷದ ಕಾರ್ಯಕ್ರಮವಲ್ಲ, ಇದು ಅಂಬೇಡ್ಕರ್ ಅವರ ಕಾರ್ಯಕ್ರಮವಾಗಿರುವುದರಿಂದ ಹೋಬಳಿಯ ಪ್ರತಿಯೊಂದು ಹಳ್ಳಿಯಿಂದಲೂ, ಯುವಜನರು, ಸಂಘಟಿತರಾಗಿ ಈ ಪುಣ್ಯದ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಸಮಾರಂಭದಲ್ಲಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ, ಸೇರಿದಂತೆ ವಿವಿಧ ಗಣ್ಯರು ಭಾಗವಹಿಸಲಿದ್ದಾರೆ ಎಂದರು.

# ಸರ್ಕಾರಿ ಜಾಗದಲ್ಲಿ ಅಕ್ರಮ ಮನೆ ನಿರ್ಮಾಣ ತೆರವಿಗೆ ಗ್ರಾಮಸ್ಥರ ಒತ್ತಾಯ

ಕುಣಿಗಲ್

ತಾಲೂಕಿನ ಕಸಬಾ ಹೋಬಳಿಯ ಬಿಳಿದೇವಾಲಯ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆಂಕೆರೆ ಗ್ರಾಮದಲ್ಲಿ ಸರ್ಕಾರಿ ಜಾಗದಲ್ಲಿ ಅಕ್ರಮವಾಗಿ ಮನೆ ನಿರ್ಮಾಣ ಮಾಡುತ್ತಿರುವುದನ್ನು ಕೂಡಲೇ ತಡೆದು, ಕಾನೂನು ಕ್ರಮ ಕೈಗೊಳ್ಳುವಂತೆ ಗ್ರಾಮಸ್ಥರು ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು.

ಗ್ರಾಮದ ಸರ್ವೆ ನಂ. 7/1ಕ್ಕೆ ಸೇರಿದ ಕಂದಾಯ ಇಲಾಖೆಯ ಸರ್ಕಾರಿ ಜಾಗದಲ್ಲಿ ಯಶೋದಮ್ಮ, ಪತಿ ನರಸಿಂಹಮೂರ್ತಿ ಅವರು ಯಾವುದೇ ಅಧಿಕೃತ ಅನುಮತಿ ಪಡೆಯದೆ ಮನೆ ನಿರ್ಮಾಣ ಕಾಮಗಾರಿ ಕೈಗೊಂಡಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದರು.

ಈ ಜಾಗಕ್ಕೆ ಬಿಳಿದೇವಾಲಯ ಗ್ರಾಮ ಪಂಚಾಯಿತಿಯಿಂದ ಅಕ್ರಮವಾಗಿ ಡಿಮ್ಯಾಂಡ್ ನೋಂದಣಿ ಹಾಗೂ ಇ-ಖಾತೆ ಸೃಷ್ಟಿಸಲಾಗಿದೆ ಎಂದು ಆರೋಪಿಸಿರುವ ಗ್ರಾಮಸ್ಥರು, ಈ ಕುರಿತು ಈಗಾಗಲೇ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ತುಮಕೂರು ಲೋಕಾಯುಕ್ತರಿಗೆ ದೂರು ಸಲ್ಲಿಸಿದ್ದರೂ ಇದುವರೆಗೆ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಕ್ರಮ ನಿರ್ಮಾಣ ನಡೆಯುತ್ತಿರುವ ಬಗ್ಗೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿಲ್ಲ. ಸಂಬಂಧಪಟ್ಟ ಇಲಾಖೆಯ ಅನುಮತಿ ಇಲ್ಲದೆ ತ್ವರಿತವಾಗಿ ಶೆಡ್ ನಿರ್ಮಾಣ ಮಾಡಲಾಗುತ್ತಿದ್ದು, ಅದನ್ನು ಕೂಡಲೇ ಸ್ಥಗಿತಗೊಳಿಸಬೇಕು ಎಂದು ಒತ್ತಾಯಿಸಿದರು. ಅಲ್ಲದೆ, ಸರ್ವೆ ನಂ. 7/1ರ ಸರ್ಕಾರಿ ಜಾಗಕ್ಕೆ ಅಕ್ರಮವಾಗಿ ನೀಡಲಾಗಿರುವ ಇ-ಖಾತೆಯನ್ನು ರದ್ದುಪಡಿಸಿ, ಅಕ್ರಮ ನಿರ್ಮಾಣ ತೆರವುಗೊಳಿಸುವಂತೆ ಗ್ರಾಮಸ್ಥರು ಆಗ್ರಹಿಸಿದರು.

ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳದಿದ್ದರೆ ತಾಲೂಕು ಕಚೇರಿ ಎದುರು ಗ್ರಾಮಸ್ಥರು ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

# ವಂಚನೆ: ದಂಪತಿ ಸೇರಿ ಗ್ಯಾಂಗ್ ಬಂಧನ

ಬೆಂಗಳೂರು

ಸರ್ಕಾರಿ ಉದ್ಯೋಗ ಕೊಡಿಸುವುದಾಗಿ ನಂಬಿಸಿ ಉದ್ಯೋಗಾಕಾಂಕ್ಷಿಗಳಿಂದ ಕೋಟ್ಯಂತರ ರೂಪಾಯಿ ವಂಚಿಸಿದ್ದ ಗ್ಯಾಂಗ್ ಅನ್ನು ದೊಡ್ಡಪೇಟೆ ಪೊಲೀಸರು ಬಂಧಿಸಿದ್ದಾರೆ. ಪ್ರಕರಣ ಕುರಿತು ಮಾಧ್ಯಮದಲ್ಲಿ ವರದಿ ಪ್ರಸಾರವಾದ ಬೆನ್ನಲ್ಲೇ ಪೊಲೀಸರು ಕಾರ್ಯಾಚರಣೆ ನಡೆಸಿ ಪ್ರಮುಖ ಆರೋಪಿಗಳಾದ ಸಚಿನ್ ಮತ್ತು ಸುಜಾತಾ ದಂಪತಿಯನ್ನು ವಶಕ್ಕೆ ಪಡೆದಿದ್ದಾರೆ.

ವಂಚನೆಗೆ ವಿಶ್ವಾಸಾರ್ಹತೆ ಮೂಡಿಸಲು ಆರೋಪಿಗಳು ನಕಲಿ ನೇಮಕಾತಿ ಪತ್ರಗಳು, ಗುರುತಿನ ಚೀಟಿಗಳು ಹಾಗೂ ಇತರ ಸರ್ಕಾರಿ ದಾಖಲೆಗಳನ್ನು ಸೃಷ್ಟಿಸಿ ನೀಡುತ್ತಿದ್ದರು.

# ಪರಿಸರ ಸ್ವಚ್ಛತೆ ಕುರಿತು ಸಾರ್ವಜನಿಕರಲ್ಲಿ ಸ್ವಯಂ ಜಾಗೃತಿ ಅಗತ್ಯ: ವಿ.ನಂದಕುಮಾರ್

ವಿಜಯಪುರ



ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಕುರಿತು ಸಾರ್ವಜನಿಕರಲ್ಲಿ ಸ್ವಯಂ ಜಾಗೃತಿ ಮೂಡದಿದ್ದರೆ ಭವಿಷ್ಯದಲ್ಲಿ ಗಂಭೀರ ಪರಿಸರ ಹಾಗೂ ಆರೋಗ್ಯ ಸಮಸ್ಯೆಗಳು ಎದುರಾಗಲಿವೆ ಎಂದು ಪುರಸಭೆ ಸದಸ್ಯ ವಿ. ನಂದಕುಮಾರ್ ಹೇಳಿದರು.

ಪಟ್ಟಣದ 12ನೇ ವಾರ್ಡಿನಲ್ಲಿ ಸಾರ್ವಜನಿಕರು ಕಸ ಹಾಕುತ್ತಿದ್ದ ಸ್ಥಳವನ್ನು ಸ್ವಚ್ಛಗೊಳಿಸಿ, ರಂಗೋಲಿ ಬಿಡುವ ಮೂಲಕ ಆಯೋಜಿಸಿದ್ದ ಸ್ವಚ್ಛತಾ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ಲಾಸ್ಟಿಕ್ ವಸ್ತುಗಳ ಅತಿಯಾದ ಬಳಕೆ ಹಾಗೂ ಎಲ್ಲೆಂದರಲ್ಲಿ ಕಸ ಎಸೆಯುವ ಪ್ರವೃತ್ತಿಯಿಂದ ಪರಿಸರ ಮಾಲಿನ್ಯ ಹೆಚ್ಚುವುದರ ಜೊತೆಗೆ ಸಾರ್ವಜನಿಕರ ಆರೋಗ್ಯಕ್ಕೂ ಹಾನಿಯಾಗುತ್ತಿದೆ. ಪುರಸಭೆಯ ಕಸ ಸಂಗ್ರಹ ವಾಹನಗಳಿಗೆ ಕಸ ನೀಡುವ ಬದಲು ಕೆಲವರು ರಸ್ತೆ ಬದಿ ಹಾಗೂ ಚರಂಡಿಗಳಿಗೆ ಕಸ ಸುರಿಯುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಈ ಕಸವನ್ನು ತಿನ್ನಲು ಬರುವ ಪ್ರಾಣಿಗಳ ಜೀವಕ್ಕೂ ಅಪಾಯ ಉಂಟಾಗುತ್ತಿದೆ. ಆದ್ದರಿಂದ ಪ್ರತಿಯೊಬ್ಬರೂ ಪರಿಸರ ಸಂರಕ್ಷಣೆಯ ಜವಾಬ್ದಾರಿಯನ್ನು ಅರಿತು ನಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ಪುರಸಭೆ ಮುಖ್ಯಾಧಿಕಾರಿ ವೈ.ಎನ್. ಸತ್ಯನಾರಾಯಣ ಮಾತನಾಡಿ, ಕಸ ವಿಲೇವಾರಿ ಕುರಿತು ಪ್ರತಿನಿತ್ಯ ಕಸ ಸಂಗ್ರಹ ವಾಹನಗಳ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಆದರೂ ಕಸ ಹಾಕದಂತೆ ಗುರುತಿಸಲಾದ ಸ್ಥಳಗಳಲ್ಲಿಯೇ ಕೆಲವರು ಪದೇ ಪದೇ ಕಸ ಸುರಿಯುತ್ತಿರುವುದು ಕಂಡುಬರುತ್ತಿದೆ ಎಂದ

ಅಂತಹವರ ವಿರುದ್ಧ ನಿಗಾ ವಹಿಸಲಾಗುತ್ತಿದ್ದು, ಸಾರ್ವಜನಿಕ ಸ್ಥಳಗಳಲ್ಲಿ ಕಸ ಸುರಿಯುವವರಿಗೆ ದಂಡ ವಿಧಿಸುವುದರ ಜೊತೆಗೆ, ಅಗತ್ಯವಿದ್ದಲ್ಲಿ ಅಂತಹ ಮನೆಗಳಿಗೆ ಕೆಲವು ನಾಗರಿಕ ಸೌಲಭ್ಯಗಳನ್ನು ನಿರ್ಬಂಧಿಸುವ ಕುರಿತು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು. ಸಾರ್ವಜನಿಕರು ಕಸ ನಿರ್ವಹಣೆಯನ್ನು ಹಗುರವಾಗಿ ಪರಿಗಣಿಸದೆ ಪುರಸಭೆಯೊಂದಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಪುರಸಭೆ ಸಿಬ್ಬಂದಿ ಅನುಪಯುಕ್ತ ವಸ್ತುಗಳಿಂದ ಅಲಂಕಾರ ಮಾಡಿ, ರಂಗೋಲಿ ಬಿಡುವ ಮೂಲಕ ಕಸ ಹಾಕದಂತೆ ಜಾಗೃತಿ ಮೂಡಿಸಿದರು. ಬೀದಿ ನಾಟಕದ ಮೂಲಕವೂ ಪರಿಸರ ಸ್ವಚ್ಛತೆ ಮತ್ತು ಕಸ ವಿಲೇವಾರಿಯ ಮಹತ್ವವನ್ನು ಸಾರ್ವಜನಿಕರಿಗೆ ತಿಳಿಸಿದರು.

ಪರಿಸರ ಇಂಜಿನಿಯರ್ ಶೇಖರ್ ರೆಡ್ಡಿ, ಆರೋಗ್ಯ ನಿರೀಕ್ಷಕಿ ಲಾವಣ್ಯ ಹಾಗೂ ಸಿಬ್ಬಂದಿಗಳಾದ ಪೃಥ್ವಿ, ಸಹನ, ಶೈಲಾ ಸೇರಿದಂತೆ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ‘ಕನ್ನಡ ಸಾಹಿತ್ಯಕ್ಕೆ ಡಾ.ಫ.ಗು.ಹಳಕಟ್ಟಿಯವರ ಕೊಡುಗೆ ಅನನ್ಯ’

ದೊಡ್ಡಬಳ್ಳಾಪುರ



ವಚನ ಸಾಹಿತ್ಯದ ಪಿತಾಮಹರೆಂದು ಖ್ಯಾತರಾಗಿರುವ ಡಾ. ಫಕೀರಪ್ಪ ಗುರುಪಾದಪ್ಪ ಹಳಕಟ್ಟಿಯವರು 12ನೇ ಶತಮಾನದ ಬಸವಾದಿ ಶರಣರ ಅಳಿವಿನಂಚಿನಲ್ಲಿದ್ದ ವಚನಗಳನ್ನು ಶ್ರಮಪಟ್ಟು ಸಂಗ್ರಹಿಸಿ, ಸಂಪಾದಿಸಿ ಹಾಗೂ ಪ್ರಕಟಿಸುವ ಮೂಲಕ ಕನ್ನಡ ಸಾಹಿತ್ಯಕ್ಕೆ ಮರುಜೀವ ನೀಡಿದ ಮಹಾನ್ ಸಂಶೋಧಕರಾಗಿದ್ದಾರೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷೆ ಪ್ರಮೀಳಾ ಮಹದೇವ್ ಹೇಳಿದರು.

ತಾಲೂಕು ಕಚೇರಿ ಆವರಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ವತಿಯಿಂದ ಆಯೋಜಿಸಿದ್ದ ಡಾ. ಫ.ಗು. ಹಳಕಟ್ಟಿಯವರ ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ಕನ್ನಡವು ಜಗತ್ತಿನ ಅತ್ಯಂತ ಪ್ರಾಚೀನ, ಶಾಸ್ತ್ರೀಯ ಹಾಗೂ ವೈಜ್ಞಾನಿಕ ಭಾಷೆಗಳಲ್ಲಿ ಒಂದಾಗಿದ್ದು, ಅದರ ಸಾಹಿತ್ಯ ಪರಂಪರೆಯನ್ನು ಶ್ರೀಮಂತಗೊಳಿಸುವಲ್ಲಿ ವಚನ ಸಾಹಿತ್ಯದ ಪಾತ್ರ ಅಪಾರವಾಗಿದೆ ಎಂದು ಹೇಳಿದರು.

ಡಾ. ಹಳಕಟ್ಟಿಯವರು ತಮ್ಮ ಸ್ವಂತ ಮನೆಯನ್ನು ಮಾರಾಟ ಮಾಡಿ ಮುದ್ರಣಾಲಯ ಸ್ಥಾಪಿಸಿ ಶರಣ ಸಾಹಿತ್ಯವನ್ನು ಪ್ರಕಟಿಸುವ ಮೂಲಕ ಕನ್ನಡ ಸಾಹಿತ್ಯದ ಅಮೂಲ್ಯ ಸಂಪತ್ತನ್ನು ಉಳಿಸಿದರು. ಸುಮಾರು 250ಕ್ಕೂ ಹೆಚ್ಚು ವಚನಕಾರರನ್ನು ಬೆಳಕಿಗೆ ತರುವುದರ ಜೊತೆಗೆ ಹರಿಹರನ 42 ರಗಳೆಗಳನ್ನು ಸಂಶೋಧಿಸಿ ಪ್ರಕಟಿಸಿದ ಶ್ರೇಯಸ್ಸು ಅವರದ್ದಾಗಿದೆ. ಕನ್ನಡ ಸಾಹಿತ್ಯವನ್ನು ಸಂಗ್ರಹಿಸಿ, ಸಂರಕ್ಷಿಸಿ ಮುಂದಿನ ಪೀಳಿಗೆಗೆ ತಲುಪಿಸಿದ ಅವರ ಸೇವೆ ಚಿರಸ್ಮರಣೀಯವಾಗಿದೆ ಎಂದು ಹೇಳಿದರು.

ಕನ್ನಡ ಜಾಗೃತಿ ವೇದಿಕೆಯ ಜಿಲ್ಲಾಧ್ಯಕ್ಷ ನಾಗರಾಜ ಮಾತನಾಡಿ, ಬಸವಾದಿ ಶರಣರ ವಚನ ಸಾಹಿತ್ಯ ಅಳಿದು ಹೋಗುವ ಪರಿಸ್ಥಿತಿ ನಿರ್ಮಾಣವಾಗಿದ್ದ ಸಂದರ್ಭದಲ್ಲಿ ಅದನ್ನು ಉಳಿಸಿ ಸಂರಕ್ಷಿಸುವ ಮಹತ್ತರ ಕಾರ್ಯವನ್ನು ಡಾ. ಫ.ಗು. ಹಳಕಟ್ಟಿಯವರು ತಮ್ಮ ಜೀವನದ ಧ್ಯೇಯವಾಗಿಸಿಕೊಂಡಿದ್ದರು ಎಂದು ತಿಳಿಸಿದರು.

ಗ್ರಾಮೀಣ ಪ್ರದೇಶಗಳು, ಮಠಗಳು ಹಾಗೂ ಹಳೆಯ ದಾಖಲೆಗಳಿಂದ ವಚನಗಳನ್ನು ಸಂಗ್ರಹಿಸುವುದು ಸುಲಭದ ಕೆಲಸವಾಗಿರಲಿಲ್ಲ. ಆದರೆ ಅವರು ಅಪಾರ ಪರಿಶ್ರಮದಿಂದ ಸಾವಿರಾರು ವಚನಗಳನ್ನು ಸಂಗ್ರಹಿಸಿ ಪ್ರಕಟಿಸುವ ಮೂಲಕ ಕನ್ನಡ ಸಾಹಿತ್ಯ ಲೋಕಕ್ಕೆ ಅಪ್ರತಿಮ ಕೊಡುಗೆ ನೀಡಿದ್ದಾರೆ. ಅವರ ಸೇವೆಯಿಂದ ಬಸವಣ್ಣ ಹಾಗೂ ಇತರ ಶರಣರ ತತ್ವಗಳು ಜನಸಾಮಾನ್ಯರಿಗೆ ತಲುಪುವಂತಾಯಿತು ಎಂದು ಹೇಳಿದರು.

ಇಂದಿನ ಯುವಜನತೆ ಕನ್ನಡ ಭಾಷೆ, ಸಂಸ್ಕೃತಿ ಮತ್ತು ಸಾಹಿತ್ಯವನ್ನು ಕೇವಲ ಅಧ್ಯಯನದ ವಿಷಯವಾಗಿ ನೋಡದೆ, ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಕನ್ನಡದ ಮಹನೀಯರ ಆದರ್ಶಗಳನ್ನು ಅನುಸರಿಸುವ ಮೂಲಕ ನಾಡಿನ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಶಿರಸ್ತೇದಾರ ನಾಗರತ್ನಮ್ಮ, ಸುರೇಶ್ ಹಾಗೂ ಕನ್ನಡ ಪರ, ರೈತಪರ ಮತ್ತು ದಲಿತಪರ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

# ವಿಜಯ ವೀರ ಆಂಜನೇಯ ಸ್ವಾಮಿಗೆ, ವಿಶೇಷ ಹೂವಿನ ಅಲಂಕಾರ

ವಿಜಯಪುರ

ಪಟ್ಟಣದ ದೇವನಹಳ್ಳಿ ರಸ್ತೆಯಲ್ಲಿರುವ ವಿಜಯ ವೀರ ಅಭಯ ಆಂಜನೇಯಸ್ವಾಮಿ ದೇವಾಲಯದಲ್ಲಿ ಶನಿವಾರ, ದೇವಾಲಯದಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳು ಹಮ್ಮಿಕೊಳ್ಳಲಾಗಿತ್ತು.

ದೇವರಿಗೆ ವಿಶೇಷ ಪೂಜಾ ಮಹೋತ್ಸವದ ಅಂಗವಾಗಿ ವಿಶೇಷ ಹೂವಿನ ಅಲಂಕಾರ ಮಾಡಲಾಗಿತ್ತು. ಬೆಳಿಗ್ಗೆಯಿಂದಲೇ ಸಾವಿರಾರು ಮಂದಿ ಭಕ್ತರು, ದೇವಾಲಯಕ್ಕೆ ತೆರಳಿ, ದರ್ಶನ ಪಡೆದುಕೊಂಡರು, ಧರ್ಮಾಧಿಕಾರಿಗಳ ವತಿಯಿಂದ, ದೇವಾಲಯಕ್ಕೆ ಬಂದಿದ್ದ ಭಕ್ತರಿಗೆ ಪ್ರಸಾದ ವಿನಿಯೋಗ ಮಾಡಿದರು.

ಧರ್ಮಾಧಿಕಾರಿ ಎನ್.ಪ್ರಕಾಶ್ ಮಾತನಾಡಿ, ನಮ್ಮ ಸನಾತನ ಧರ್ಮವನ್ನು ಉಳಿಸುವ ನಿಟ್ಟಿನಲ್ಲಿ, ಯುವಜನರು, ಹೆಚ್ಚು ಧಾರ್ಮಿಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು. ಯುವಕರು ದುಶ್ಚಟಗಳಿಂದ ದೂರವಾಗಿರಲು, ದೇವತಾ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ನೆರವೇರಿಸಲಾಗುತ್ತಿದೆ. ಯುವಕರು ವಿಶೇಷ ಆಸಕ್ತಿಯಿಂದ ಪಾಲ್ಗೊಂಡಿರುವುದು ಸಂತಸ ತಂದಿದೆ. ಬರಗಾಲವನ್ನು ತಪ್ಪಿಸಿ, ದೇಶವು ಸುಭೀಕ್ಷವಾಗಿರುವಂತೆ ದೇವರಿಗೆ ವಿಶೇಷ ಪೂಜೆ ಸಲ್ಲಿಸಲಾಗಿದೆ ಎಂದರು. ಧರ್ಮಾಧಿಕಾರಿ ಎನ್.ಕೇಶವ ಇದ್ದರು.

# ‘ಲಂಚ ಕೇಳಿದರೆ ನೇರವಾಗಿ ದೂರು ನೀಡಿ’

ದೊಡ್ಡಬಳ್ಳಾಪುರ

ತಾಲ್ಲೂಕಿನಲ್ಲಿ ಯಾವುದೇ ಕಾರಣಕ್ಕೂ ಭ್ರಷ್ಟಾಚಾರಕ್ಕೆ ಅವಕಾಶ ನೀಡುವುದಿಲ್ಲ. ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿಗಳು ಸಾರ್ವಜನಿಕರಿಂದ ಲಂಚಕ್ಕೆ ಬೇಡಿಕೆ ಇಟ್ಟರೆ ಕೂಡಲೇ ಶಾಸಕರ ಕಚೇರಿಗೆ ದೂರು ನೀಡಬೇಕು ಅಥವಾ ನೇರವಾಗಿ ನನ್ನನ್ನು ಸಂಪರ್ಕಿಸಬೇಕು ಎಂದು ಶಾಸಕ ಧೀರಜ್ ಮುನಿರಾಜು ಹೇಳಿದರು.

ನಗರದ ತಾಲೂಕು ಪಂಚಾಯಿತಿ ಆವರಣದಲ್ಲಿರುವ ಶಾಸಕರ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣಾ ಪ್ರಚಾರದ ವೇಳೆ ಭ್ರಷ್ಟಾಚಾರ ಮುಕ್ತ ಆಡಳಿತ ನೀಡುವ ಭರವಸೆ ನೀಡಿದ್ದು, ಅದಕ್ಕೆ ತಾವು ಬದ್ಧರಾಗಿದ್ದೇವೆ ಎಂದು ಹೇಳಿದರು.

ತಾಲೂಕಿನ ಜನತೆ ನೀಡಿರುವ ಅಧಿಕಾರವನ್ನು ಎಂದಿಗೂ ದುರುಪಯೋಗಪಡಿಸಿಕೊಂಡಿಲ್ಲ. ಮುಂದೆಯೂ ಪ್ರಾಮಾಣಿಕತೆ ಮತ್ತು ನಿಷ್ಠೆಯಿಂದ ಜನಸೇವೆ ಮುಂದುವರಿಸಲಾಗುವುದು ಎಂದು ಅವರು ತಿಳಿಸಿದರು.



ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಭ್ರಷ್ಟಾಚಾರಕ್ಕೆ ಅವಕಾಶ ನೀಡುವುದಿಲ್ಲ ಎಂಬ ನಿಲುವು ಪ್ರಕಟಿಸಿರುವುದನ್ನು ಸ್ವಾಗತಿಸಿದ ಶಾಸಕ, ತಾಲೂಕಿನಲ್ಲಿ ಅಧಿಕಾರಿಗಳ ವರ್ಗಾವಣೆ ಸೇರಿದಂತೆ ಯಾವುದೇ ವಿಷಯಕ್ಕೆ ಸಂಬಂಧಿಸಿದಂತೆ ತಾವು ಇದುವರೆಗೆ ಯಾರಿಂದಲೂ ಹಣ ಪಡೆದಿಲ್ಲ ಹಾಗೂ ಮುಂದೆಯೂ ಪಡೆಯುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ತಾವು ಯಾವುದೇ ರೀತಿಯ ಹಣ ಪಡೆಯದಿರುವಾಗ ಅಧಿಕಾರಿಗಳು ಸಾರ್ವಜನಿಕರಿಂದ ಲಂಚ ಪಡೆಯಲು ಯಾವುದೇ ಅವಕಾಶ ಅಥವಾ ಸಮರ್ಥನೆ ಇಲ್ಲ ಎಂದು ಹೇಳಿದ ಅವರು, ಯಾವುದೇ ಅಧಿಕಾರಿ ಹಣಕ್ಕೆ ಬೇಡಿಕೆ ಇಟ್ಟರೆ ಸಾರ್ವಜನಿಕರು ಮೌನವಾಗಿರದೆ ಕೂಡಲೇ ಶಾಸಕರ ಕಚೇರಿ ಸಿಬ್ಬಂದಿಗೆ ಮಾಹಿತಿ ನೀಡಬೇಕು ಅಥವಾ ನೇರವಾಗಿ ತಮ್ಮನ್ನು ಸಂಪರ್ಕಿಸಬೇಕು ಎಂದು ಮನವಿ ಮಾಡಿದರು.

ಸಾರ್ವಜನಿಕರು ನೀಡಿರುವ ಅಧಿಕಾರವನ್ನು ಜನಹಿತಕ್ಕಾಗಿ ಬಳಸಿಕೊಳ್ಳಲಾಗುವುದು. ಲಂಚಕ್ಕೆ ಬೇಡಿಕೆ ಇಡುವ ಅಧಿಕಾರಿಗಳ ವಿರುದ್ಧ ಕಾನೂನು ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಧೀರಜ್ ಮುನಿರಾಜು ಎಚ್ಚರಿಕೆ ನೀಡಿದರು.

# ‘ಅರ್ಹರು ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ ಮಾಡಿಸಿಕೊಳ್ಳಿ’

ದೊಡ್ಡಬಳ್ಳಾಪುರ




ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಕಾರ್ಯ ಆರಂಭವಾಗಿದ್ದು, ಅರ್ಹ ಮತದಾರರು ತಮ್ಮ ಹೆಸರನ್ನು ಮತದಾರರ ಪಟ್ಟಿಗೆ ಸೇರ್ಪಡೆ ಮಾಡಿಸಿಕೊಳ್ಳಬೇಕು ಹಾಗೂ ಪಟ್ಟಿಯಲ್ಲಿರುವ ವಿವರಗಳಲ್ಲಿ ತಪ್ಪುಗಳಿದ್ದರೆ ತಿದ್ದುಪಡಿ ಮಾಡಿಸಿಕೊಳ್ಳಬೇಕು ಎಂದು ಕೊನಘಟ್ಟ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ಕಾಂತರಾಜು ಕರೆ ನೀಡಿದರು.

ಕೊನಘಟ್ಟ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ನಡೆದ ಮತದಾರರ ಪಟ್ಟಿ ಪರಿಷ್ಕರಣೆ ಕುರಿತ ಜಾಗೃತಿ ಸಭೆಯಲ್ಲಿ ಮಾತನಾಡಿದ ಅವರು, 18 ವರ್ಷ ಪೂರ್ಣಗೊಂಡಿರುವ ಎಲ್ಲ ಯುವಕ-ಯುವತಿಯರು ಕಡ್ಡಾಯವಾಗಿ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಎಂದು ತಿಳಿಸಿದರು.

ಮತದಾರರ ಹೆಸರು, ವಿಳಾಸ, ವಯಸ್ಸು ಅಥವಾ ಇತರೆ ವಿವರಗಳಲ್ಲಿ ಯಾವುದೇ ದೋಷಗಳಿದ್ದರೆ ಸಂಬಂಧಿತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿ ತಿದ್ದುಪಡಿ ಮಾಡಿಸಿಕೊಳ್ಳಲು ಅವಕಾಶವಿದೆ.

ಮೃತಪಟ್ಟವರು ಹಾಗೂ ಬೇರೆ ಪ್ರದೇಶಗಳಿಗೆ ಶಾಶ್ವತವಾಗಿ ಸ್ಥಳಾಂತರಗೊಂಡವರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ಪಟ್ಟಿಯನ್ನು ನಿಖರ ಹಾಗೂ ದೋಷರಹಿತವಾಗಿಡುವ ಉದ್ದೇಶದಿಂದ ವಿಶೇಷ ಪರಿಷ್ಕರಣೆ ಕಾರ್ಯ ನಡೆಯುತ್ತಿದ್ದು, ಗ್ರಾಮ ಪಂಚಾಯಿತಿ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸ್ಥಳೀಯ ಜನಪ್ರತಿನಿಧಿಗಳು ಮನೆಮನೆಗೆ ಭೇಟಿ ನೀಡಿ ಅರ್ಹ ಮತದಾರರ ಮಾಹಿತಿಯನ್ನು ಸಂಗ್ರಹಿಸಲಿದ್ದಾರೆ. ಸಾರ್ವಜನಿಕರು ಈ ಕಾರ್ಯಕ್ಕೆ ಸಂಪೂರ್ಣ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಮತದಾನವು ಪ್ರತಿಯೊಬ್ಬ ನಾಗರಿಕನ ಮೂಲಭೂತ ಹಕ್ಕು ಹಾಗೂ ಜವಾಬ್ದಾರಿಯಾಗಿದ್ದು, ಯಾವುದೇ ಅರ್ಹ ವ್ಯಕ್ತಿ ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಎಚ್ಚರಿಕೆ ವಹಿಸಬೇಕು ಎಂದು ಪಿಡಿಒ ಕಾಂತರಾಜು ತಿಳಿಸಿದರು.

# ‘ವಿಶ್ವದಲ್ಲೆ ಪ್ರಖ್ಯಾತಿಯಾಗಿರುವ ಬೆಂಗಳೂರು ಕಟ್ಟಿದ ಕೆಂಪೇಗೌಡರು, ಸದಾ ಸ್ಮರಣೀಯರು’

ವಿಜಯಪುರ

ಅಖಿಲ ಕರ್ನಾಟಕ ಮಿತ್ರ ಸಂಘದ ವತಿಯಿಂದ, ಕೊಮ್ಮಸಂದ್ರದ ಸರಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ, ನಾಡಪ್ರಭು ಕೆಂಪೇಗೌಡರ ಜಯಂತಿ ಆಚರಣೆ ಮಾಡಿದರು. ಕೆಂಪೇಗೌಡರ ಭಾವಚಿತ್ರವನ್ನು ಇಟ್ಟು, ಪೂಜೆ ಸಲ್ಲಿಸಿದರು.

ಅಖಿಲ ಕರ್ನಾಟಕ ಮಿತ್ರ ಸಂಘದ ರಾಜ್ಯಾಧ್ಯಕ್ಷ ಚಿ.ಮಾ.ಸುಧಾಕರ್ ಮಾತನಾಡಿ, ವಿಶ್ವದಲ್ಲೆ ಪ್ರಖ್ಯಾತಿಯಾಗಿರುವ ಬೆಂಗಳೂರು ಕಟ್ಟಿದ ಕೆಂಪೇಗೌಡರು, ಸದಾ ಸ್ಮರಣೀಯರು. ಒಂದು ನಗರ, ಒಂದು ಸಂಸ್ಕೃತಿ, ಒಂದು ದೂರದೃಷ್ಟಿಯನ್ನು ಕಟ್ಟಿದ ಮಹಾನ್ ಚೇತನ ಕೆಂಪೇಗೌಡರು.

1510 ರಲ್ಲಿ ಯಲಹಂಕ ನಾಡಪ್ರಭುಗಳ ಮನೆತನದಲ್ಲಿ ಜನಿಸಿದ ಕೆಂಪೇಗೌಡರು, ವಿಜಯನಗರ ಸಾಮ್ರಾಜ್ಯದ ಸಾಮಂತರಾಗಿ ಆಡಳಿತ ನಡೆಸಿದರು. ಆದರೆ ಅವರನ್ನು ಇತಿಹಾಸ ಸದಾ ನೆನಪಿಟ್ಟುಕೊಳ್ಳುವುದು ಬೆಂಗಳೂರು ನಿರ್ಮಾತೃ ಎಂದೇ. 1537 ಬೆಂದಕಾಳೂರು ಎಂಬ ಸಣ್ಣ ಹಳ್ಳಿಯನ್ನು ಗುರುತಿಸಿ, ಅಲ್ಲಿ ಕೋಟೆ, ಪೇಟೆಗಳನ್ನು ಕಟ್ಟಿಸಿದರು. ಇಂದು ವಿಶ್ವದಲ್ಲೇ ಹೆಸರುವಾಸಿಯಾಗಿರುವ ಬೆಂಗಳೂರು ಮಹಾನಗರಕ್ಕೆ ಅಡಿಪಾಯ ಹಾಕಿದವರೇ ಕೆಂಪೇಗೌಡರು. ‘ಗಡಿ ನಾಡಿನಲ್ಲಿ ಕೋಟೆ ಕಟ್ಟು’ ಎಂಬ ತಾಯಿಯ ಮಾತನ್ನು ನನಸು ಮಾಡಿದರು ಯಲಹಂಕ ನಾಡಪ್ರಭುಗಳ ಮನೆತನದಲ್ಲಿ ಜನಿಸಿದ ಕೆಂಪೇಗೌಡರು, ವಿಜಯನಗರ ಸಾಮ್ರಾಜ್ಯದ ಸಾಮಂತರಾಗಿ ಆಡಳಿತ ನಡೆಸಿದರು. ಆದರೆ ಅವರನ್ನು ಇತಿಹಾಸ ಸದಾ ನೆನಪಿಟ್ಟುಕೊಳ್ಳುವುದು ಬೆಂಗಳೂರು ನಿರ್ಮಾತೃ ಎಂದೇ ಎಂದರು. ಮುಖ್ಯಶಿಕ್ಷಕಿ ರಾಜೇಶ್ವರಿ ಮಾತನಾಡಿ, ಕಲ್ಯಾಣಿಗೆ ಕಲ್ಲು ಹಾಕು, ಕೆರೆಗೆ ನೀರು ತುಂಬಿಸು, ಎಂಬ ತತ್ವದಲ್ಲಿ ನಂಬಿಕೆ ಇಟ್ಟವರು. ಧರ್ಮಾಂಬುಧಿ, ಕೆಂಪಾಂಬುಧಿ, ಸಂಪಂಗಿ, ಕಾರಂಜಿ ಕೆರೆ ಸೇರಿದಂತೆ ನೂರಾರು ಕೆರೆಗಳನ್ನು ಕಟ್ಟಿಸಿ, ನೀರಾವರಿಗೆ ಆದ್ಯತೆ ನೀಡಿದರು.

ಇಂದಿಗೂ ಬೆಂಗಳೂರಿನ ಹಲಸೂರು ಕೆರೆ, ಕೆಂಪಾಂಬುದಿ ಕೆರೆ ಅವರ ದೂರದೃಷ್ಟಿಗೆ ಸಾಕ್ಷಿಯಾಗಿದೆ. ಪೇಟೆಗಳನ್ನು ನಿರ್ಮಿಸುವಾಗ ಕುರುಬರ ಪೇಟೆ, ಅಕ್ಕಿಪೇಟೆ, ಬಳೆಪೇಟೆ, ಚಿಕ್ಕಪೇಟೆ, ದೊಡ್ಡಪೇಟೆ ಹೀಗೆ ಎಲ್ಲಾ ಸಮುದಾಯದವರಿಗೂ, ಎಲ್ಲಾ ವೃತ್ತಿಯವರಿಗೂ ಪ್ರತ್ಯೇಕ ಬೀದಿಗಳನ್ನು ನಿರ್ಮಿಸಿ ‘ಸರ್ವ ಜನಾಂಗದ ಶಾಂತಿಯ ತೋಟ’ ಮಾಡಿದರು. ಮೇಲು-ಕೀಳು ಎಂಬ ಭೇದವಿಲ್ಲದೆ ಎಲ್ಲರನ್ನೂ ಒಂದಾಗಿ ಕಂಡವರು ಎಂದರು.

ಅಖಿಲ ಕರ್ನಾಟಕ ಮಿತ್ರ ಸಂಘದ ಕಾರ್ಯದರ್ಶಿ ಆರ್.ಮುನಿರಾಜು, ಶಿಕ್ಷಕರಾದ ರಾಜಶೇಖರಾಚಾರಿ, ಗಿರಿಜಾಂಬ ರುದ್ರೇಶಮೂರ್ತಿ, ಮತ್ತು ಶಾಲೆಯ ವಿದ್ಯಾರ್ಥಿಗಳು ಹಾಜರಿದ್ದರು.

# ರಸ್ತೆ ಬದಿ ಫ್ಲೆಕ್ಸ್ ಬ್ಯಾನರ್ ಹಾವಳಿ: ತೀವ್ರ ತೊಂದರೆ

ವಿಜಯಪುರ

ಹೋಬಳಿ ವ್ಯಾಪ್ತಿಯ ಪ್ರಮುಖ ರಸ್ತೆಗಳಲ್ಲಿ ಅವೈಜ್ಞಾನಿಕವಾಗಿ ಅಳವಡಿಸಲಾಗಿರುವ ಫ್ಲೆಕ್ಸ್ ಬ್ಯಾನರ್‌ಗಳು ವಾಹನ ಸವಾರರು ಹಾಗೂ ಪಾದಚಾರಿಗಳಿಗೆ ತೀವ್ರ ತೊಂದರೆ ಉಂಟುಮಾಡುತ್ತಿದ್ದು, ಸಾರ್ವಜನಿಕರ ಸುರಕ್ಷತೆಗೆ ಅಪಾಯವಾಗಿ ಪರಿಣಮಿಸಿವೆ.

ರಾಜಕೀಯ ಕಾರ್ಯಕ್ರಮಗಳು, ವಾಣಿಜ್ಯ ಜಾಹೀರಾತುಗಳು ಹಾಗೂ ಶುಭಾಶಯ ಕೋರುವ ನೆಪದಲ್ಲಿ ರಸ್ತೆ ಬದಿಗಳು, ತಿರುವುಗಳು ಮತ್ತು ವಿದ್ಯುತ್ ಕಂಬಗಳಿಗೆ ಅಳವಡಿಸಲಾಗಿರುವ ಬೃಹತ್ ಬ್ಯಾನರ್‌ಗಳು ಗಾಳಿಗೆ ಕಿತ್ತುಬಿದ್ದು ವಾಹನಗಳಿಗೆ ಅಪ್ಪಳಿಸುವ ಘಟನೆಗಳು ನಡೆಯುತ್ತಿದ್ದು, ಅಪಘಾತದ ಆತಂಕ ಹೆಚ್ಚಿಸಿದೆ. ಶಾಲಾ ಮಕ್ಕಳು, ಹಿರಿಯ ನಾಗರಿಕರು ಹಾಗೂ ಪಾದಚಾರಿಗಳು ಇದರಿಂದ ಹೆಚ್ಚಿನ ತೊಂದರೆ ಅನುಭವಿಸುತ್ತಿದ್ದಾರೆ.

ಹರಿದು ಬಿದ್ದಿರುವ ಪ್ಲಾಸ್ಟಿಕ್ ಫ್ಲೆಕ್ಸ್‌ಗಳು ರಸ್ತೆ ಮತ್ತು ಚರಂಡಿಗಳಿಗೆ ಸೇರಿ ಮಳೆ ನೀರು ಸರಾಗವಾಗಿ ಹರಿಯಲು ಅಡ್ಡಿಯಾಗುತ್ತಿದ್ದು, ಪರಿಸರ ಮಾಲಿನ್ಯಕ್ಕೂ ಕಾರಣವಾಗುತ್ತಿವೆ.



ಕರ್ನಾಟಕ ಮುಕ್ತ ಸ್ಥಳಗಳ ವಿರೂಪ ತಡೆ ಕಾಯ್ದೆ-1981ರ ಪ್ರಕಾರ, ಅನುಮತಿ ಇಲ್ಲದೆ ಫ್ಲೆಕ್ಸ್ ಹಾಗೂ ಬ್ಯಾನರ್ ಅಳವಡಿಸುವುದು ಶಿಕ್ಷಾರ್ಹ ಅಪರಾಧವಾಗಿದೆ. ಅನುಮತಿ ಪಡೆದು ಬ್ಯಾನರ್ ಅಳವಡಿಸಿದರೂ ಕಾರ್ಯಕ್ರಮ ಮುಗಿದ ಬಳಿಕ ಅವುಗಳನ್ನು ತೆರವುಗೊಳಿಸುವ ನಿಯಮವನ್ನು ಹಲವರು ಪಾಲಿಸುತ್ತಿಲ್ಲ. ಅನಧಿಕೃತ ಫ್ಲೆಕ್ಸ್‌ಗಳನ್ನು ತೆರವುಗೊಳಿಸುವಂತೆ ಹೈಕೋರ್ಟ್ ಹಲವು ಬಾರಿ ನಿರ್ದೇಶನ ನೀಡಿದ್ದರೂ, ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಬ್ಯಾನರ್ ಹಾವಳಿ ಮುಂದುವರಿದಿದೆ.

ಸಾರ್ವಜನಿಕರ ಸುರಕ್ಷತೆಯ ದೃಷ್ಟಿಯಿಂದ ಅನಧಿಕೃತ ಫ್ಲೆಕ್ಸ್ ಹಾಗೂ ಬ್ಯಾನರ್‌ಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಂಡು, ನಿಯಮ ಉಲ್ಲಂಘಿಸುವವರ ವಿರುದ್ಧ ದಂಡಾತ್ಮಕ ಕ್ರಮ ಜರುಗಿಸಬೇಕು. ಗ್ರಾಮ ಪಂಚಾಯಿತಿ ಹಾಗೂ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಈ ಬಗ್ಗೆ ಪರಿಣಾಮಕಾರಿ ಕಾರ್ಯಾಚರಣೆ ನಡೆಸಬೇಕು ಎಂದು ನಾಗರಿಕರು ಆಗ್ರಹಿಸಿದ್ದಾರೆ.

ಪಟ್ಟಣದ ಶಿವಗಣೇಶ ವೃತ್ತದಲ್ಲಿರುವ ದೇವಾಲಯದ ಮುಂಭಾಗ ಶ್ರದ್ಧಾಂಜಲಿ ಫ್ಲೆಕ್ಸ್‌ಗಳನ್ನು ಅಳವಡಿಸುತ್ತಿರುವುದರಿಂದ ದೇವಾಲಯಕ್ಕೆ ಬರುವ ಭಕ್ತರಿಗೆ ತೊಂದರೆಯಾಗುತ್ತಿದೆ. ದೇವಾಲಯದ ಸುತ್ತಮುತ್ತ ಯಾವುದೇ ರೀತಿಯ ಫ್ಲೆಕ್ಸ್ ಅಳವಡಿಸದಂತೆ ಪುರಸಭೆ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಭಟ್ರೇನಹಳ್ಳಿ ನಿವಾಸಿ ವೆಂಕಟೇಶಪ್ಪ ಮಾತನಾಡಿ, “ನಾನು ಬಸ್ಸಿನಲ್ಲಿ ಪ್ರಯಾಣಿಸುತ್ತಿದ್ದಾಗ ವಿದ್ಯುತ್ ಕಂಬಕ್ಕೆ ಕಟ್ಟಿದ್ದ ಬ್ಯಾನರ್ ಗಾಳಿಗೆ ಕಿತ್ತು ಬಂದು ಬಸ್‌ನ ಮುಂಭಾಗದ ಗಾಜಿಗೆ ಅಪ್ಪಳಿಸಿತು. ಚಾಲಕ ಕ್ಷಣಕಾಲ ಆತಂಕಕ್ಕೊಳಗಾದರು. ಎದುರು ಯಾವುದೇ ವಾಹನಗಳು ಇಲ್ಲದ ಕಾರಣ ದೊಡ್ಡ ಅನಾಹುತ ತಪ್ಪಿತು. ಇಂತಹ ಬ್ಯಾನರ್‌ಗಳಿಂದ ಸಾರ್ವಜನಿಕರ ಜೀವಕ್ಕೆ ಅಪಾಯ ಉಂಟಾಗುತ್ತಿದೆ” ಎಂದು ಹೇಳಿದರು.

ಪುರಸಭೆ ಮುಖ್ಯಾಧಿಕಾರಿ ವೈ.ಎನ್. ಸತ್ಯನಾರಾಯಣ ಮಾತನಾಡಿ, “ಅನುಮತಿ ಪಡೆದು ಅಳವಡಿಸಿರುವ ಫ್ಲೆಕ್ಸ್ ಹಾಗೂ ಬ್ಯಾನರ್‌ಗಳನ್ನು 45 ಗಂಟೆಗಳೊಳಗೆ ತೆರವುಗೊಳಿಸುವಂತೆ ಸೂಚಿಸಲಾಗಿದೆ.

ನಿಗದಿತ ಅವಧಿಯಲ್ಲಿ ತೆರವುಗೊಳಿಸದಿದ್ದರೆ ಸಂಬಂಧಪಟ್ಟವರಿಗೆ ದಂಡ ವಿಧಿಸಿ, ಪುರಸಭೆಯೇ ಅವುಗಳನ್ನು ತೆರವುಗೊಳಿಸುತ್ತದೆ. ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಕ್ರಮ ಕೈಗೊಳ್ಳಲಾಗುವುದು” ಎಂದು ತಿಳಿಸಿದರು.

09/07/2026

# ಭಾರತ ಸಾರಥಿ

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಕೊಲೆ ಯತ್ನ: ನಾಲ್ವರು ಆರೋಪಿಗಳ ಬಂಧನ

ಬಂಗಾರಪೇಟೆ

ನಗರದ ಹೊರವಲಯದ ಆರ್.ಆರ್. ಕಲ್ಯಾಣ ಮಂಟಪದ ಸಮೀಪದ ಇಂಡಿಯನ್ ಆಯಿಲ್ ಪೆಟ್ರೋಲ್ ಬಂಕ್ ಬಳಿ ಯುವಕನ ಮೇಲೆ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಕೊಲೆ ಯತ್ನ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ತಲೆಮರೆಸಿಕೊಂಡಿದ್ದ ನಾಲ್ವರು ಆರೋಪಿಗಳನ್ನು ಬಂಗಾರಪೇಟೆ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಇತ್ತೀಚೆಗೆ ನಡೆದ ಘಟನೆಯಲ್ಲಿ ನಗರದ ಇಂದಿರಾನಗರ ನಿವಾಸಿ ಗೋಕುಲ್ (25) ಅವರು ಬೈಕ್‌ಗೆ ಪೆಟ್ರೋಲ್ ಹಾಕಿಸಿಕೊಳ್ಳಲು ತೆರಳಿದ್ದ ವೇಳೆ ತ್ರಿಬಲ್ ರೈಡ್‌ನಲ್ಲಿ ಬಂದಿದ್ದ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಪರಾರಿಯಾಗಿದ್ದರು. ಗಾಯಗೊಂಡ ಗೋಕುಲ್ ನೀಡಿದ ದೂರಿನ ಮೇರೆಗೆ ಬಂಗಾರಪೇಟೆ ಪೊಲೀಸ್ ಠಾಣೆಯಲ್ಲಿ ಕೊಲೆ ಯತ್ನ ಪ್ರಕರಣ ದಾಖಲಾಗಿತ್ತು.

ಪ್ರಕರಣದ ಗಂಭೀರತೆಯನ್ನು ಪರಿಗಣಿಸಿದ ಕೆಜಿಎಫ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ಅವರ ನಿರ್ದೇಶನ ಹಾಗೂ ಡಿವೈಎಸ್ಪಿ ಲಕ್ಷ್ಮಯ್ಯ ಅವರ ಮಾರ್ಗದರ್ಶನದಲ್ಲಿ ಬಂಗಾರಪೇಟೆ ಪೊಲೀಸ್ ವೃತ್ತ ನಿರೀಕ್ಷಕ ರವಿಕುಮಾರ್ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ ರಚಿಸಲಾಗಿತ್ತು. ತ್ವರಿತ ಕಾರ್ಯಾಚರಣೆ ನಡೆಸಿದ ತಂಡ ತಲೆಮರೆಸಿಕೊಂಡಿದ್ದ ನಾಲ್ವರು ಆರೋಪಿಗಳನ್ನು ಬಂಧಿಸಿದೆ.

ಬಂಧಿತರಲ್ಲಿ ಪ್ರಮುಖ ಆರೋಪಿ ರೌಡಿ ಶೀಟರ್ ಅಬಿ ಅಲಿಯಾಸ್ ಅಬಿಸಿರಿಲ್ ಸೇರಿದ್ದು, ಈತನ ವಿರುದ್ಧ ಕೊಲೆ ಹಾಗೂ ಕೊಲೆ ಯತ್ನ ಸೇರಿದಂತೆ ಹಲವು ಗಂಭೀರ ಅಪರಾಧ ಪ್ರಕರಣಗಳು ದಾಖಲಾಗಿವೆ. ಉಳಿದ ಆರೋಪಿಗಳಾದ ಶರಣ್, ಲಿತಿಕ್ ಹಾಗೂ ಶಶಿಧರ್ ಅವರು ಕೆಜಿಎಫ್ ನಗರದ ನಿವಾಸಿಗಳಾಗಿದ್ದು, 18ರಿಂದ 19 ವರ್ಷದೊಳಗಿನವರಾಗಿದ್ದಾರೆ.

ಬಂಧಿತ ಆರೋಪಿಗಳನ್ನು ನ್ಯಾಯಾಲಯದ ಅನುಮತಿ ಪಡೆದು ಪೊಲೀಸ್ ಕಸ್ಟಡಿಗೆ ಪಡೆದುಕೊಳ್ಳಲಾಗಿದ್ದು, ದಾಳಿಯ ಹಿಂದಿನ ಉದ್ದೇಶ, ವೈಯಕ್ತಿಕ ವೈಷಮ್ಯ ಹಾಗೂ ಇತರರ ಪಾತ್ರದ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

ಈ ಕಾರ್ಯಾಚರಣೆಯಲ್ಲಿ ಕ್ರೈಂ ವಿಭಾಗದ ಸಿಬ್ಬಂದಿಗಳಾದ ವಿಜಿ, ಶ್ರೀನಿವಾಸ್, ತಾಜ್ ಪಾಷಾ, ಮುರುಳಿ, ಸುನಿಲ್ ಸೇರಿದಂತೆ ಹಲವು ಸಿಬ್ಬಂದಿ ಪ್ರಮುಖ ಪಾತ್ರವಹಿಸಿದ್ದಾರೆ.

ಪ್ರಕರಣವನ್ನು ಅಲ್ಪಾವಧಿಯಲ್ಲೇ ಭೇದಿಸಿ ಆರೋಪಿಗಳನ್ನು ಬಂಧಿಸಿದ ಬಂಗಾರಪೇಟೆ ಪೊಲೀಸ್ ತಂಡದ ಕಾರ್ಯಕ್ಷಮತೆಯನ್ನು ಕೆಜಿಎಫ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ಶ್ಲಾಘಿಸಿ, ತಂಡದ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಅಭಿನಂದಿಸಿದ್ದಾರೆ. ಪೊಲೀಸರ ತ್ವರಿತ ಕಾರ್ಯಾಚರಣೆಗೆ ಸಾರ್ವಜನಿಕ ವಲಯದಲ್ಲಿಯೂ ಮೆಚ್ಚುಗೆ ವ್ಯಕ್ತವಾಗಿದೆ.

## 'ಎಸ್‌ಐಆರ್ ಗೊಂದಲ ನಿವಾರಣೆಗೆ ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಹೆಲ್ಪ್‌ಲೈನ್ ಆರಂಭಿಸಿ'

ತಿಪಟೂರು

ರಾಜ್ಯದಲ್ಲಿ ಜೂನ್ 30ರಿಂದ ಆರಂಭವಾಗಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಕುರಿತು ಸಾರ್ವಜನಿಕರಲ್ಲಿ ಉಂಟಾಗಿರುವ ಗೊಂದಲ ನಿವಾರಣೆಗೆ ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ವಿಶೇಷ ಹೆಲ್ಪ್‌ಲೈನ್ ಕೇಂದ್ರಗಳನ್ನು ಆರಂಭಿಸಬೇಕು ಎಂದು ಜನಸ್ಪಂದನ ಟ್ರಸ್ಟ್ ಅಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡ ಸಿ.ಬಿ. ಶಶಿಧರ್ (ಟೂಡಾ) ಆಗ್ರಹಿಸಿದರು.

ನಗರದ ಕೌಸ್ತುಭ ಹೋಟೆಲ್ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್‌ಐಆರ್ ಪ್ರಕ್ರಿಯೆ ಆರಂಭವಾಗಿ ಮೂರು ದಿನಗಳಾದರೂ ಬೂತ್ ಮಟ್ಟದ ಅಧಿಕಾರಿಗಳಿಗೆ ಸಮರ್ಪಕ ಮಾಹಿತಿ ಹಾಗೂ ತರಬೇತಿ ದೊರೆಯದ ಕಾರಣ ಸಾರ್ವಜನಿಕರಿಗೆ ಸರಿಯಾದ ಮಾಹಿತಿ ಸಿಗುತ್ತಿಲ್ಲ. ಇದರಿಂದ ಮತದಾರರಲ್ಲಿ ಗೊಂದಲ ಮತ್ತು ಆತಂಕ ಹೆಚ್ಚುತ್ತಿದೆ ಎಂದು ಆರೋಪಿಸಿದರು.

ಈ ಹಿಂದೆ ಎಸ್‌ಐಆರ್ ಪ್ರಕ್ರಿಯೆ ಜಾರಿಯಾದ ಕೆಲವು ರಾಜ್ಯಗಳಲ್ಲಿ ಲಕ್ಷಾಂತರ ಮತದಾರರ ಹೆಸರುಗಳು ಮತದಾರರ ಪಟ್ಟಿಯಿಂದ ಕೈಬಿಡಲ್ಪಟ್ಟಿರುವ ವರದಿಗಳು ಬಂದಿವೆ. ಕರ್ನಾಟಕದಲ್ಲಿ ಅಂತಹ ಪರಿಸ್ಥಿತಿ ಮರುಕಳಿಸದಂತೆ ಚುನಾವಣಾ ಆಯೋಗ ಹಾಗೂ ರಾಜ್ಯ ಸರ್ಕಾರ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಜನರ ಅನುಮಾನಗಳಿಗೆ ತಕ್ಷಣ ಸ್ಪಂದಿಸುವ ಉದ್ದೇಶದಿಂದ ಪ್ರತಿಯೊಂದು ವಿಧಾನಸಭಾ ಕ್ಷೇತ್ರ, ಗ್ರಾಮ ಪಂಚಾಯಿತಿ, ಹೋಬಳಿ ಹಾಗೂ ವಾರ್ಡ್ ಮಟ್ಟದಲ್ಲಿ ವಿಶೇಷ ಹೆಲ್ಪ್‌ಲೈನ್ ಕೇಂದ್ರಗಳನ್ನು ಆರಂಭಿಸಬೇಕು. ಬಿಎಲ್‌ಒಗಳು ಮಾನವೀಯತೆ ಹಾಗೂ ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವಂತೆ ಅಗತ್ಯ ತರಬೇತಿ ಮತ್ತು ಮಾರ್ಗದರ್ಶನ ನೀಡಬೇಕು ಎಂದು ಹೇಳಿದರು.

ಎಸ್‌ಐಆರ್ ಪ್ರಕ್ರಿಯೆಗೆ ಅಗತ್ಯವಿರುವ ವಾಸಸ್ಥಳ ದೃಢೀಕರಣ ಪತ್ರ ಸೇರಿದಂತೆ ವಿವಿಧ ದಾಖಲೆಗಳನ್ನು ಸಾರ್ವಜನಿಕರಿಗೆ ತ್ವರಿತವಾಗಿ ಒದಗಿಸಲು ತಾಲೂಕು ಕಚೇರಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪ್ರತ್ಯೇಕ ಕೌಂಟರ್‌ಗಳನ್ನು ತೆರೆಯಬೇಕು. ಇದರಿಂದ ಸಾರ್ವಜನಿಕರ ಅನಗತ್ಯ ಓಡಾಟ ಮತ್ತು ತೊಂದರೆ ತಪ್ಪಲಿದೆ ಎಂದು ಅಭಿಪ್ರಾಯಪಟ್ಟರು.

ಸರ್ಕಾರ ಹಾಗೂ ತಾಲೂಕು ಆಡಳಿತ ಎಸ್‌ಐಆರ್ ಕುರಿತು ಇನ್ನಷ್ಟು ವ್ಯಾಪಕ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಮತದಾರರ ಪಟ್ಟಿಯ ಪರಿಷ್ಕರಣೆಯಲ್ಲಿ ತೊಡಗಿರುವ ಬಿಎಗಳು ಸೇರಿದಂತೆ ಸಂಬಂಧಿತ ಅಧಿಕಾರಿಗಳಿಗೆ ಸಮಗ್ರ ಮಾಹಿತಿ ಮತ್ತು ತರಬೇತಿ ನೀಡಿ ಮಾಹಿತಿ ಕೊರತೆಯನ್ನು ನಿವಾರಿಸಬೇಕು ಎಂದು ಒತ್ತಾಯಿಸಿದರು.

ಜೊತೆಗೆ, ವಿದ್ಯಾವಂತ ಯುವಕ–ಯುವತಿಯರನ್ನು ಎಸ್‌ಐಆರ್ ಪ್ರಕ್ರಿಯೆಯಲ್ಲಿ ತಾತ್ಕಾಲಿಕವಾಗಿ ನಿಯೋಜಿಸಿ ಸಾರ್ವಜನಿಕರಿಗೆ ಮಾಹಿತಿ ನೀಡುವ ವ್ಯವಸ್ಥೆ ಕಲ್ಪಿಸಬೇಕು ಎಂದು ಅವರು ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಸಂವಿಧಾನ ಸಂರಕ್ಷಣಾ ಪಡೆ ಅಧ್ಯಕ್ಷ ಲೋಕೇಶ್, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಉಮೇಶ್, ಮಾಜಿ ಸದಸ್ಯ ಬಸವರಾಜು, ಮಾಜಿ ಯೂತ್ ಕಾಂಗ್ರೆಸ್ ಅಧ್ಯಕ್ಷ ಶರತ್, ಸೌಹಾರ್ದದ ಅಲ್ಲಭಕಾಶ್ ಹಾಗೂ ತಾಸಿಂ ಷರೀಫ್ ಉಪಸ್ಥಿತರಿದ್ದರು.

# ಕನಿಷ್ಠ ವೇತನ ಅಧಿಸೂಚನೆ ಮರುಪರಿಶೀಲಿಸದಂತೆ ಮನವಿ

ಬೆಂಗಳೂರು

ರಾಜ್ಯದಲ್ಲಿ ಜಾರಿಗೊಂಡಿರುವ ಕನಿಷ್ಠ ವೇತನದ ಅಂತಿಮ ಅಧಿಸೂಚನೆಯನ್ನು ಮರುಪರಿಶೀಲಿಸಬಾರದು ಅಥವಾ ಹಿಂಪಡೆಯಬಾರದು ಎಂದು ಟ್ರೇಡ್ ಯೂನಿಯನ್‌ಗಳ ಜಂಟಿ ಸಮಿತಿ (ಜೆಸಿಟಿಯು) ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದೆ.

ಸಿಐಟಿಯು ರಾಜ್ಯ ಪ್ರಧಾನ ಕಾರ್ಯದರ್ಶಿ ಎಸ್. ವರಲಕ್ಷ್ಮಿ ನೇತೃತ್ವದ ನಿಯೋಗವು ಮುಖ್ಯಮಂತ್ರಿ ಅವರನ್ನು ಅವರ ಗೃಹ ಕಚೇರಿ 'ಕೃಷ್ಣಾ'ದಲ್ಲಿ ಭೇಟಿ ಮಾಡಿ ಈ ಕುರಿತು ಚರ್ಚೆ ನಡೆಸಿ ಮನವಿ ಪತ್ರ ನೀಡಿತು.

ಇತ್ತೀಚಿನ ಸಚಿವ ಸಂಪುಟ ಸಭೆಯಲ್ಲಿ ಕನಿಷ್ಠ ವೇತನ ಪರಿಷ್ಕರಣೆಯನ್ನು ಮರುಪರಿಶೀಲಿಸುವ ಕುರಿತು ಚರ್ಚೆಯಾಗಿರುವುದು ಕಾರ್ಮಿಕರಲ್ಲಿ ಆತಂಕ ಮೂಡಿಸಿದೆ ಎಂದು ಸಮಿತಿ ಹೇಳಿದೆ. ಅಂತಿಮ ಅಧಿಸೂಚನೆಯನ್ನು ಮರುಪರಿಶೀಲಿಸುವ ಅಥವಾ ಹಿಂಪಡೆಯುವ ಯಾವುದೇ ಕ್ರಮ ಕೈಗೊಳ್ಳದೆ, ಸರ್ಕಾರ ಕಾರ್ಮಿಕರ ಪರವಾಗಿ ನಿಲ್ಲಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

> ಜೆಸಿಟಿಯು ಪ್ರಕಾರ, ರಾಜ್ಯದಲ್ಲಿ 2017-18ರಿಂದ ಬಾಕಿ ಉಳಿದಿದ್ದ ಕನಿಷ್ಠ ವೇತನ ಪರಿಷ್ಕರಣೆಯನ್ನು ಸುಮಾರು ಎಂಟು ವರ್ಷಗಳ ಬಳಿಕ 39 ನಿಗದಿತ ಉದ್ಯೋಗಗಳಿಗೆ ಜಾರಿಗೊಳಿಸಲಾಗಿದೆ. ಈ ವಿಳಂಬವು ಕನಿಷ್ಠ ವೇತನ ಕಾಯ್ದೆ ಹಾಗೂ ಸುಪ್ರೀಂ ಕೋರ್ಟ್ ನಿರ್ದೇಶನಗಳ ಉಲ್ಲಂಘನೆಯಾಗಿದ್ದು, ಉದ್ಯೋಗದಾತರು ಹೇಳುತ್ತಿರುವಂತೆ ವೇತನದಲ್ಲಿ ಶೇ.60ರಷ್ಟು ಏರಿಕೆಯಾಗಿಲ್ಲ, ವಾಸ್ತವವಾಗಿ ಶೇ.40ರಷ್ಟು ಮಾತ್ರ ಹೆಚ್ಚಳವಾಗಿದೆ

ಜೆಸಿಟಿಯು ಪ್ರಕಾರ, ರಾಜ್ಯದಲ್ಲಿ 2017–18ರಿಂದ ಬಾಕಿ ಉಳಿದಿದ್ದ ಕನಿಷ್ಠ ವೇತನ ಪರಿಷ್ಕರಣೆಯನ್ನು ಸುಮಾರು ಎಂಟು ವರ್ಷಗಳ ಬಳಿಕ 39 ನಿಗದಿತ ಉದ್ಯೋಗಗಳಿಗೆ ಜಾರಿಗೊಳಿಸಲಾಗಿದೆ. ಈ ವಿಳಂಬವು ಕನಿಷ್ಠ ವೇತನ ಕಾಯ್ದೆ ಹಾಗೂ ಸುಪ್ರೀಂ ಕೋರ್ಟ್ ನಿರ್ದೇಶನಗಳ ಉಲ್ಲಂಘನೆಯಾಗಿದ್ದು, ಉದ್ಯೋಗದಾತರು ಹೇಳುತ್ತಿರುವಂತೆ ವೇತನದಲ್ಲಿ ಶೇ.60ರಷ್ಟು ಏರಿಕೆಯಾಗಿಲ್ಲ, ವಾಸ್ತವವಾಗಿ ಶೇ.40ರಷ್ಟು ಮಾತ್ರ ಹೆಚ್ಚಳವಾಗಿದೆ ಎಂದು ಸಮಿತಿ ಸ್ಪಷ್ಟಪಡಿಸಿದೆ.

ವೇತನ ಪರಿಷ್ಕರಣೆಯನ್ನು ವೈಜ್ಞಾನಿಕ ಹಾಗೂ ಕಾನೂನುಬದ್ಧ ಪ್ರಕ್ರಿಯೆಯ ಮೂಲಕ ಜಾರಿಗೊಳಿಸಲಾಗಿದೆ ಎಂದು ಸಮಿತಿ ತಿಳಿಸಿದೆ.

ಏಪ್ರಿಲ್ 2025ರಲ್ಲಿ ಕರಡು ಅಧಿಸೂಚನೆ ಹೊರಡಿಸಿ ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿತ್ತು. 15ನೇ ಭಾರತೀಯ ಕಾರ್ಮಿಕ ಸಮ್ಮೇಳನದ ಮಾನದಂಡಗಳು ಹಾಗೂ ನ್ಯಾಯಾಲಯಗಳ ನಿರ್ದೇಶನಗಳನ್ನು ಆಧರಿಸಿ ವೇತನ ನಿಗದಿಪಡಿಸಲಾಗಿದ್ದು, ವೇತನ ಸಂಹಿತೆ–2019ರ ಸೆಕ್ಷನ್ 69ರ ಅನ್ವಯ ಇದನ್ನು ಕಾನೂನುಬದ್ಧವಾಗಿ ಜಾರಿಗೊಳಿಸಲಾಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಈ ಪರಿಷ್ಕರಣೆಯಿಂದ ಕೆಪಿಟಿಸಿಎಲ್ ಸೇರಿದಂತೆ ಹಲವು ಸರ್ಕಾರಿ ಸಂಸ್ಥೆಗಳು, ಮಂಡಳಿಗಳು ಹಾಗೂ ಖಾಸಗಿ ಉದ್ಯೋಗದಾತರು ಹೊಸ ವೇತನ ದರಗಳನ್ನು ಈಗಾಗಲೇ ಜಾರಿಗೊಳಿಸಿದ್ದಾರೆ.

ಇದರ ಪರಿಣಾಮ ರಾಜ್ಯದ ಒಂದು ಕೋಟಿಗೂ ಹೆಚ್ಚು ಕಾರ್ಮಿಕ ಕುಟುಂಬಗಳ ಆದಾಯ ಹೆಚ್ಚಲಿದ್ದು, ಜನರ ಖರೀದಿ ಸಾಮರ್ಥ್ಯ ಹಾಗೂ ಆರ್ಥಿಕ ಚಟುವಟಿಕೆಗೂ ಉತ್ತೇಜನ ದೊರೆಯಲಿದೆ ಎಂದು ಜೆಸಿಟಿಯು ಅಭಿಪ್ರಾಯಪಟ್ಟಿದೆ.

ಸುಮಾರು 3.8 ಲಕ್ಷ ಗುತ್ತಿಗೆ ಮತ್ತು ಹೊರಗುತ್ತಿಗೆ ನೌಕರರಿಗೆ ವಾರ್ಷಿಕ ಸುಮಾರು ರೂ.3,200 ಕೋಟಿ ಹೆಚ್ಚುವರಿ ವೆಚ್ಚವಾಗಲಿದ್ದು, ಇದು ರಾಜ್ಯದ ಒಟ್ಟಾರೆ ಬಜೆಟ್‌ಗೆ ಹೋಲಿಸಿದರೆ ಅಲ್ಪ ಪ್ರಮಾಣವಾಗಿದೆ ಎಂದು ಸಮಿತಿ ತಿಳಿಸಿದೆ.

ಉದ್ಯೋಗದಾತರ ಒತ್ತಡಕ್ಕೆ ಸರ್ಕಾರ ಮಣಿಯಬಾರದು ಹಾಗೂ ಕನಿಷ್ಠ ವೇತನ ಪರಿಷ್ಕರಣೆಯನ್ನು ಮರುಪರಿಶೀಲಿಸುವ ಯಾವುದೇ ಕ್ರಮ ಕೈಗೊಳ್ಳಬಾರದು ಎಂದು ಐಎನ್‌ಟಿಯುಸಿ, ಎಐಟಿಯುಸಿ, ಸಿಐಟಿಯು, ಎಚ್‌ಎಂಎಸ್ ಸೇರಿದಂತೆ ಪ್ರಮುಖ ಕಾರ್ಮಿಕ ಸಂಘಟನೆಗಳು ಜಂಟಿಯಾಗಿ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿವೆ.

## 'ಪ್ರಕೃತಿ ಸಂರಕ್ಷಿಸುವುದು ನಮ್ಮೆಲ್ಲರ ಜವಾಬ್ದಾರಿ'



ಪಾವಗಡ

ಗಿಡ, ನೆಲ, ಜಲ, ಪರಿಸರ ಹಾಗೂ ಜೀವಜಗತ್ತಿನ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಪರಿಸರ ಮಾಲಿನ್ಯ ತಡೆಗಟ್ಟುವ ಮೂಲಕ ಪ್ರಕೃತಿಯ ಸಮತೋಲನ ಕಾಪಾಡಬೇಕು ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲ್ಲೂಕು ಯೋಜನಾಧಿಕಾರಿ ಹೆಚ್. ಮಹೇಶ್ ಹೇಳಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ಪಳವಳ್ಳಿ ವಲಯದ ಶ್ರೀ ಶಕ್ತಿ ಸಂಘಗಳ ಸಹಯೋಗದಲ್ಲಿ ಸೂಲನಾಯಕನಹಳ್ಳಿ ಗ್ರಾಮದ ನಲ್ಲಾರಿ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಆಯೋಜಿಸಿದ್ದ ಸಾಮಾಜಿಕ ಅರಣ್ಯೀಕರಣ ಕಾರ್ಯಕ್ರಮದಲ್ಲಿ ಗಿಡ ನೆಟ್ಟು ಅವರು ಮಾತನಾಡಿದರು.

ಪ್ರಪಂಚದಾದ್ಯಂತ ಪರಿಸರದಲ್ಲಿ ಅಸಮತೋಲನ ಉಂಟಾಗುತ್ತಿದ್ದು, ಪ್ರತಿಯೊಬ್ಬರೂ ತಮ್ಮ ಮನೆ, ಹೊಲಗದ್ದೆ, ರಸ್ತೆ ಬದಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಸಸಿಗಳನ್ನು ನೆಟ್ಟು ಬೆಳೆಸುವ ಮೂಲಕ ಹಸಿರು ಪರಿಸರ ನಿರ್ಮಾಣಕ್ಕೆ ಕೈಜೋಡಿಸಬೇಕು. ಇದರಿಂದ ವಾಯು ಮಾಲಿನ್ಯ ಕಡಿಮೆಯಾಗುವುದರ ಜೊತೆಗೆ ಪರಿಸರದ ಮೇಲಿನ ಅಪಾಯಗಳನ್ನು ತಗ್ಗಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕುಟುಂಬದ ನಿರ್ವಹಣೆಗೆ ಮಹಿಳೆಯರು ನೀಡುವ ಆದ್ಯತೆಯಂತೆಯೇ ಪ್ರಕೃತಿ ಸಂರಕ್ಷಣೆಯಲ್ಲಿಯೂ ಸಕ್ರಿಯವಾಗಿ ಭಾಗವಹಿಸಿದರೆ ಮಾತ್ರ ಪರಿಸರವನ್ನು ಮುಂದಿನ ಪೀಳಿಗೆಗೆ ಉಳಿಸಲು ಸಾಧ್ಯ ಎಂದು ಅವರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ಶ್ರೀ ಶ್ರೀ ಹೃದಯಾನಂದ ಸ್ವಾಮೀಜಿ, ದೇವರು ಒಬ್ಬನೇ, ಭಕ್ತಿಯ ಮಾರ್ಗಗಳು ಹಲವು. ಆದರೆ ಪರಿಸರವೇ ನಮ್ಮ ನಿಜವಾದ ದೇವರು. ಸಸಿ, ಗಿಡ ಮತ್ತು ಮರಗಳು ಜೀವಜಗತ್ತಿನ ಆಧಾರವಾಗಿದ್ದು, ಹಸಿರು ಪರಿಸರವೇ ಎಲ್ಲ ಜೀವಿಗಳ ಬದುಕಿಗೆ ಮೂಲವಾಗಿದೆ ಎಂದು ಹೇಳಿದರು.

ತಾಲೂಕಿನಲ್ಲಿ ಕೈಗಾರಿಕೆಗಳು ಹಾಗೂ ಸೌರ ವಿದ್ಯುತ್ ಯೋಜನೆಗಳು ಅಭಿವೃದ್ಧಿಗೆ ಪೂರಕವಾಗಿದ್ದರೂ, ಅವುಗಳೊಂದಿಗೆ ಪರಿಸರ ಸಂರಕ್ಷಣೆಯ ಜವಾಬ್ದಾರಿಯನ್ನೂ ಪ್ರತಿಯೊಬ್ಬರೂ ಹೊತ್ತುಕೊಳ್ಳಬೇಕು. ಸೌರ ವಿದ್ಯುತ್ ಯೋಜನೆಗಳಿಂದ ಪ್ರಯೋಜನ ಪಡೆದ ರೈತರು ತಮ್ಮ ಜಮೀನು ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ಸಸಿಗಳನ್ನು ನೆಟ್ಟು ಬೆಳೆಸುವ ಮೂಲಕ ಪರಿಸರ ರಕ್ಷಣೆಗೆ ಆದ್ಯತೆ ನೀಡಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕೃಷಿ ಮೇಲ್ವಿಚಾರಕ ವಸಂತ್, ವಲಯ ಮೇಲ್ವಿಚಾರಕ ವೆಂಕಟರತ್ನ, ಸೇವಾ ಪ್ರತಿನಿಧಿ ಮಮತಾ, ಶ್ರೀ ಶಕ್ತಿ ಸಂಘದ ಮಹಿಳಾ ಸದಸ್ಯರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

## ಉಚಿತ ನೋಟ್‌ಬುಕ್ ಹಾಗೂ ಲೇಖನ ಸಾಮಗ್ರಿಗಳ ವಿತರಣೆ

ತಿಪಟೂರು

ಇತ್ತೀಚಿನ ದಿನಗಳಲ್ಲಿ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕಡಿಮೆಯಾಗುತ್ತಿದ್ದು, ಕೆಲವು ಶಾಲೆಗಳು ಮುಚ್ಚುವ ಪರಿಸ್ಥಿತಿ ನಿರ್ಮಾಣವಾಗಿದೆ. ಸರ್ಕಾರಿ ಶಾಲೆಗಳ ಉಳಿವು ಹಾಗೂ ಅಭಿವೃದ್ಧಿಗೆ ಪೋಷಕರು ಮತ್ತು ಶಿಕ್ಷಕರು ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಷಡಕ್ಷರ ಮಠದ ಶ್ರೀ ರುದ್ರಮುನಿ ಸ್ವಾಮೀಜಿ ಹೇಳಿದರು.

ತಾಲೂಕಿನ ಕೋಟೆನಾಯಕನಹಳ್ಳಿಯ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜಯಕರ್ನಾಟಕ ಜನಪರ ವೇದಿಕೆ ವತಿಯಿಂದ ನಿಧನರಾದ ತುಮಕೂರಿನ ಹಿರಿಯ ಪತ್ರಕರ್ತ ದಿ. ಎಂ. ಈಶ್ವರ್ ಅವರ ಸ್ಮರಣಾರ್ಥ ಆಯೋಜಿಸಿದ್ದ ಉಚಿತ ನೋಟ್‌ಬುಕ್ ಹಾಗೂ ಲೇಖನ ಸಾಮಗ್ರಿಗಳ ವಿತರಣಾ ಕಾರ್ಯಕ್ರಮದಲ್ಲಿ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಬಿ.ಟಿ. ಕುಮಾರ್ ನೇತೃತ್ವದಲ್ಲಿ ಜಯಕರ್ನಾಟಕ ಜನಪರ ವೇದಿಕೆ ನೂರಾರು ಆರೋಗ್ಯ ಶಿಬಿರಗಳು, ಸಾವಿರಾರು ವಿದ್ಯಾರ್ಥಿಗಳಿಗೆ ಪ್ರತಿ ವರ್ಷ ಉಚಿತ ನೋಟ್‌ಬುಕ್ ವಿತರಣೆ ಸೇರಿದಂತೆ ಶಿಕ್ಷಣ, ಕ್ರೀಡೆ, ಸಾಮಾಜಿಕ ಹಾಗೂ ಧಾರ್ಮಿಕ ಕ್ಷೇತ್ರಗಳಲ್ಲಿ ನಿರಂತರ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ. ಹಿರಿಯ ಪತ್ರಕರ್ತ ದಿ. ಎಂ. ಈಶ್ವರ್ ಅವರ ನಿಧನದ ಬಳಿಕ ಅವರ ಕುಟುಂಬ ಕಣ್ಣುಗಳನ್ನು ದಾನ ಮಾಡುವ ಮೂಲಕ ಸಮಾಜಮುಖಿ ಕಾರ್ಯಕ್ಕೆ ಮುಂದಾಗಿರುವುದು ಅವರ ಕರ್ತವ್ಯನಿಷ್ಠೆ ಮತ್ತು ಮಾನವೀಯತೆಯ ಪ್ರತೀಕವಾಗಿದೆ ಎಂದು ಹೇಳಿದರು.

ತಾಲೂಕು ಆರೋಗ್ಯಾಧಿಕಾರಿ ಡಾ. ಚೆನ್ನಕೇಶವ ಮಾತನಾಡಿ, ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳೇ ಉತ್ತಮ ಶಿಕ್ಷಣದ ಮೂಲಕ ದೇಶಕ್ಕೆ ಕೀರ್ತಿ ತರುತ್ತಿದ್ದಾರೆ. ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಕಡೆ ಹೆಚ್ಚಿನ ಆಸಕ್ತಿ ತೋರಬೇಕು. ಪತ್ರಕರ್ತರು ನಿರಂತರ ಒತ್ತಡದಲ್ಲಿ ಕಾರ್ಯನಿರ್ವಹಿಸುವುದರಿಂದ ಆರೋಗ್ಯದ ಕಡೆ ವಿಶೇಷ ಗಮನ ಹರಿಸಿ, ನಿಯಮಿತ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಹಾಗೂ ಕುಟುಂಬಕ್ಕೂ ಸಮಯ ನೀಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಆಯೋಜಕ ಹಾಗೂ ಜಯಕರ್ನಾಟಕ ಜನಪರ ವೇದಿಕೆ ತಾಲೂಕು ಅಧ್ಯಕ್ಷ ಬಿ.ಟಿ. ಕುಮಾರ್, ಜಿಲ್ಲಾ ಉಪಾಧ್ಯಕ್ಷ ಬಿ.ಬಿ. ಬಸವರಾಜು, ಭಗತ್ ಸಿಂಗ್ ಕ್ರಾಂತಿ ಸೇನೆ ಸಂಘಟನೆಯ ಮದನ್, ಎಸ್‌ಡಿಎಂಸಿ ಪದಾಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಪೋಷಕರು ಉಪಸ್ಥಿತರಿದ್ದರು.

## ವಿಶೇಷ ಚೇತನರಿಂದ ಎಸ್‌ಐಆರ್ ಕುರಿತು ಜಾಗೃತಿ ಜಾಥಾ



ತಿಪಟೂರು

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ತಿಪಟೂರು ತಾಲ್ಲೂಕು ಸ್ವೀಪ್ ಸಮಿತಿ ಹಾಗೂ ತಾಲ್ಲೂಕು ಪಂಚಾಯಿತಿ ವತಿಯಿಂದ ವಿಶೇಷ ಚೇತನರ ತ್ರಿಚಕ್ರ ವಾಹನಗಳ ಜಾಗೃತಿ ಜಾಥಾ ನಗರದಲ್ಲಿ ನಡೆಯಿತು.

ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹೆಚ್. ಎಂ. ಸುದರ್ಶನ್, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಯಾವುದೇ ಅರ್ಹ ಮತದಾರರು ಹೊರಗುಳಿಯಬಾರದು ಎಂದು ಹೇಳಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು ಪ್ರತಿಯೊಬ್ಬ ಅರ್ಹ ಮತದಾರರು ಈ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು. ದೇಶದ ಕಟ್ಟಕಡೆಯ ಅರ್ಹ ಮತದಾರನಿಗೂ ಈ ಕುರಿತು ಮಾಹಿತಿ ತಲುಪಿಸುವ ಉದ್ದೇಶದಿಂದ ವಿಶೇಷ ಚೇತನರು ಜಾಗೃತಿ ಜಾಥಾ ನಡೆಸುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಜಾಥಾದಲ್ಲಿ ವಿಶೇಷ ಚೇತನರು ತ್ರಿಚಕ್ರ ವಾಹನಗಳ ಮೂಲಕ ತಿಪಟೂರು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ಮತದಾರರ ಪಟ್ಟಿಯ ಪರಿಷ್ಕರಣೆ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಪಂಚಾಯಿತಿ ನೋಡಲ್ ಅಧಿಕಾರಿ ಹುಲಿರಾಜು, ವಿಶೇಷ ಚೇತನರ ಸಂಘದ ಮುಖಂಡ ಇನಾಯತ್, ಗ್ರಾಮ ಪಂಚಾಯಿತಿಗಳ ಎಂಆರ್‌ಡಬ್ಲ್ಯು, ಯುಆರ್‌ಇ, ವಿಆರ್‌ಡಬ್ಲ್ಯು ಸಿಬ್ಬಂದಿ, ವಿವಿಧ ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## 10ರಂದು ಸಚಿವ ಸಂಪುಟ ವಿಸ್ತರಣೆ ಸಾಧ್ಯತೆ

ತುಮಕೂರು

ಲೋಕಸಭೆಯ ವಿರೋಧ ಪಕ್ಷ ನಾಯಕ ರಾಹುಲ್ ಗಾಂಧಿ, ಜುಲೈ 6ರಂದು ಐರ್ಲ್ಯಾಂಡ್ ಪ್ರವಾಸದಿಂದ ಮರಳುವ ಸಾಧ್ಯತೆ ಇದೆ. ಜುಲೈ 7 ಅಥವಾ 8ರಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು ದೆಹಲಿಗೆ ತೆರಳುವ ಸಾಧ್ಯತೆಯಿದ್ದು, ಸಂಪುಟ ವಿಸ್ತರಣೆ ಬಗ್ಗೆ ಚರ್ಚೆ ನಡೆಸಲಿದ್ದಾರೆ ಎಂದು ಹೇಳಲಾಗಿದೆ.

ಅದಕ್ಕಾಗಿ ಎಲ್ಲಾ ಸಚಿವರು, ಶಾಸಕರು ತಮ ಕ್ಷೇತ್ರಗಳಲ್ಲೇ ಇರಬೇಕು ಎಂದು ಸೂಚನೆ ನೀಡಲಾಗಿದೆ. ಎಸ್‌ಐಆರ್ ಕಾರಣಕ್ಕಾಗಿ ವಿಧಾನಮಂಡಲದ ಅಧಿವೇಶನವನ್ನು ಮುಂದೂಡಲಾಗಿದೆ. ಚುನಾವಣಾ ಆಯೋಗ ಆಗಸ್ಟ್ 5ರಂದು ಮತದಾರರ ಕರಡು ಪಟ್ಟಿಯನ್ನು ಪ್ರಕಟಿಸಲಿದೆ. ಅನಂತರ ಮಳೆಗಾಲದ ವಿಧಾನಮಂಡಲ ಅಧಿವೇಶನ ಸಮಾವೇಶಗೊಳ್ಳುವ ಸಾಧ್ಯತೆ ಇದೆ.

ಅಧಿವೇಶನಕ್ಕೂ ಮುನ್ನವೇ ಪರಿಪೂರ್ಣ ಸಂಪುಟ ರಚನೆಯಾಗಬೇಕಿದೆ. ಆಗಸ್ಟ್ 15ಕ್ಕೆ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಎಲ್ಲಾ ಜಿಲ್ಲೆಗಳಲ್ಲಿಯೂ ಉಸ್ತುವಾರಿ ಸಚಿವರು ಧ್ವಜಾರೋಹಣ ನೆರವೇರಿಸಬೇಕಿದೆ. ಅದಕ್ಕೂ ಮುನ್ನವೇ ಸಂಪುಟ ಪುನರ್ ರಚನೆಯಾಗುವ ಅನಿವಾರ್ಯತೆ ಇದೆ.

ಸಂಪುಟ ವಿಸ್ತರಣೆಯಾಗಲಿದೆ ಎಂಬ ಸುಳಿವು ದೊರೆಯುತ್ತಿದ್ದಂತೆ ಆಕಾಂಕ್ಷಿಗಳು ಲಾಬಿ ತೀವ್ರಗೊಳಿಸಿದ್ದಾರೆ. ನಿನ್ನೆ ಸಚಿವ ಸ್ಥಾನದ ಆಕಾಂಕ್ಷಿಗಳಾಗಿರುವ ಪಿ.ಎಂ. ಅಶೋಕ್, ಎ.ಎಸ್. ಪೊನ್ನಣ್ಣ, ಕೆ.ಎನ್.ರಾಜಣ್ಣ, ಎಂ.ಆರ್. ಸೀತಾರಾಮ್ ಮತ್ತಿತರರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ತಮಗೆ ಸಂಪುಟದಲ್ಲಿ ಸ್ಥಾನ ದೊರಕಿಸಿಕೊಡುವಂತೆ ಒತ್ತಡ ಹೇರಿದ್ದಾರೆ.

ಒಂದೆಡೆ ಮುಖಂಡರು ಪೂರ್ಣ ಪ್ರಮಾಣದ ಸಂಪುಟ ವಿಸ್ತರಣೆಗೆ ತಯಾರಿ ಮಾಡಿಕೊಳ್ಳುತ್ತಿದ್ದರೆ, ಮತ್ತೊಂದು ಕಡೆ ಆಕಾಂಕ್ಷಿಗಳು ಹಿರಿಯ ನಾಯಕರ ಬೆನ್ನಿಗೆ ಬಿದ್ದು ಅವಕಾಶಕ್ಕಾಗಿ ಒತ್ತಡ ಹೇರುತ್ತಿದ್ದಾರೆ.

# ಹೇಮಾವತಿ ನೀರು ಉಳಿಸಿಕೊಳ್ಳಲು ಹೋರಾಟ ಅನಿವಾರ್ಯ



ತುಮಕೂರು

ನಮ್ಮ ಜಿಲ್ಲೆಗೆ ಹಂಚಿಕೆ ಆಗಿರುವ ಹೇಮಾವತಿ ನೀರನ್ನು ಉಳಿಸಿಕೊಳ್ಳಲು, ಜಿಲ್ಲೆಯ ಜನರ ಪಾಲಿಕೆ ಮಾರಕವಾಗುವ ಹೇಮಾವತಿ ಎಕ್ಸ್‌ಪ್ರೆಸ್ ಕೆನಾಲ್ ಯೋಜನೆ ವಿರುದ್ಧ ಒಗ್ಗಟ್ಟಿನ ಹೋರಾಟ ಮಾಡಬೇಕು. ಕೆಲವು ರಾಜಕಾರಣಿಗಳು ತಮ್ಮ ಲಾಭಕ್ಕಾಗಿ ಇಲಾಖೆ ಅಧಿಕಾರಿಗಳ ಮೇಲೆ ಒತ್ತರಡ ಹಾಕಿ ಜಿಲ್ಲೆಯ ನೀರಾವರಿ ಯೋಜನೆಗಳನ್ನು ವಿರೂಪಗೊಳಿಸಲು ಪ್ರಯತ್ನಿಸಿದ್ದಾರೆ ಎಂದು ಮಾಜಿ ಸಚಿವ ಸೊಗಡು ಶಿವಣ್ಣ ಆರೋಪಿಸಿದರು.

ಶನಿವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಎಕ್ಸ್‌ಪ್ರೆಸ್ ಕೆನಾಲ್ ಯೋಜನೆ ಸಾಕಾರಗೊಳ್ಳಲು ಅವಕಾಶ ಮಾಡಿಕೊಟ್ಟರೆ ಮುಂದೆ ನಮ್ಮ ಪಾಲಿನ ನೀರನ್ನು ಕಳೆದುಕೊಂಡು ಹಾಹಾಕಾರ ಪರಿಸ್ಥಿತಿ ಎದುರಿಸಬೇಕಾಗುತ್ತದೆ. ಈಗಿನಿಂದಲೇ ಎಚ್ಚೆತ್ತುಕೊಂಡು ಹೋರಾಟದ ಮೂಲಕ ನೀರು ಉಳಿಸಿಕೊಳ್ಳಬೇಕು ಎಂದರು.

ಹೇಮಾವತಿ ಯೋಜನೆಯ ಭಾಗವಾದ ಹೇಮಾವತಿ ನಾಲಾ ವಲಯ, ತುಮಕೂರು ವ್ಯಾಪ್ತಿಯಲ್ಲಿ ತುಮಕೂರು ಶಾಖಾ ನಾಲೆ ಹಾಗೂ ನಾಗಮಂಗಲ ಶಾಖಾ ನಾಲೆ ಮತ್ತು ಬಾಗೂರು ನವಿಲೆ ಸುರಂಗ ನಿರ್ಗಮನ ಏತ ನೀರಾವರಿ ಯೋಜನೆಗಳ ಕಾರ್ಯ ವ್ಯಾಪ್ತಿಯನ್ನು ಒಳಗೊಂಡಿದ್ದು, ತುಮಕೂರು ಜಿಲ್ಲೆ ಹಾಗೂ ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕಿನ ಒಟ್ಟಾರೆ 2,89,230 ಎಕರೆ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲು ಮತ್ತು ತುಮಕೂರು, ಮಂಡ್ಯ, ರಾಮನಗರ, ಹಾಸನ, ಚಿಕ್ಕಮಗಳೂರು ಹಾಗೂ ಚಿತ್ರದುರ್ಗ ಜಿಲ್ಲೆಯ ಕೆಲವು ತಾಲ್ಲೂಕಗಳ ಕುಡಿಯುವ ನೀರಿನ ಬೇಡಿಕೆಗಳನ್ನು ಪೂರೈಸುವುದು ಒಳಗೊಂಡಂತೆ 25.31 ಟಿಎಂಸಿ ನೀರಿನ ಹಂಚಿಕೆ ಆಗಿರುತ್ತದೆ. ಇದರಲ್ಲಿ ನೀರಾವರಿಗೆ 18.70 ಟಿಎಂಸಿ ಹಾಗೂ ಕುಡಿಯುವ ನೀರಿನ ಯೋಜನೆಗಳಿಗೆ 6.61 ಟಿಎಂಸಿ ನೀರನ್ನು ಹಂಚಿಕೆ ಮಾಡಲಾಗಿದೆ ಎಂದರು.

ಹೇಮಾವತಿ ಜಲಾಶಯದ ಮುಖ್ಯ ಕಾರಣಕರ್ತರು ಮಾಜಿ ಪ್ರಧಾನಿ ಎಚ್. ಡಿ. ದೇವೇಗೌಡರು ಮತ್ತು ಡಾ.ಕೆ.ಎಲ್. ರಾವ್ ಅವರು. ತುಮಕೂರು ಜಿಲ್ಲೆಗೆ ಹೇಮಾವತಿ ನೀರು ತರಲು ಅನೇಕ ಮಹನೀಯರು ಹೋರಾಟ ನಡೆಸಿ ಶ್ರಮಪಟ್ಟಿದ್ದಾರೆ. ಮಾಜಿ ಸಚಿವ ದಿವಂಗತ ವೈ.ಕೆ .ರಾಮಯ್ಯನವರು ಹೇಮಾವತಿ ನೀರಿನಲ್ಲಿ ನಮ್ಮ ಪಾಲು ಇದೆ, ಹೇಮಾವತಿ ನೀರನ್ನು ತುಮಕೂರು ಜಿಲ್ಲೆಗೆ ತರಲೇಬೇಕೆಂದು ಹೋರಾಟವನ್ನು ಆರಂಭಿಸಿದರು. ಈ ಹಂತದಲ್ಲಿ ತಾವೂ ಹೋರಾಟದಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದಾಗಿ ಸೊಗಡು ಶಿವಣ್ಣ ಹೇಳಿದರು.

ನಗರದ ಬಟವಾಡಿಯಲ್ಲಿ ತಾವು ಉಗ್ರ ಹೋರಾಟ ಆರಂಭಿಸಿದ್ದನ್ನು ಸ್ಮರಿಸಿಕೊಂಡ ಸೊಗಡು ಶಿವಣ್ಣನವರು, ಈ ಹೋರಾಟದಲ್ಲಿ ಎಲ್ಲ ರೈತರನ್ನು ಗಣನೆಗೆ ತೆಗೆದುಕೊಂಡು ವೈ.ಕೆ. ರಾಮಯ್ಯನವರು ಹೋರಾಟ ಮುಂದುವರೆಸಿದರು.

ಆಗ ಹೇಮಾವತಿ ನೀರು ತುಮಕೂರು ಜಿಲ್ಲೆಗೆ ದಕ್ಕಿತು. ಈ ಹಂತದಲ್ಲಿ ವೈ.ಕೆ ರಾಮಯ್ಯನವರ ಜೊತೆಗೆ ಹಾಗಲವಾಡಿ ಕಮ್ಯುನಿಸ್ಟ್ ನಾಯಕ ದಿವಂಗತ ಚೆನ್ನಪ್ಪನವರೂ ಇದ್ದರು ಎಂಬುದನ್ನು ಮರೆಯುವಂತಿಲ್ಲ. ಇದನ್ನೆಲ್ಲಾ ನೋಡಿದರೆ ವೈ.ಕೆ.ರಾಮಯ್ಯನವರು ಹೇಮಾವತಿಯನ್ನು ತುಮಕೂರು ಜಿಲ್ಲೆಗೆ ಕರೆತಂದ ಆಧುನಿಕ ಭಗೀರಥ ಎಂದರೆ ತಪ್ಪಾಗಲಾರದು ಎಂದು ಹೇಳಿದರು.

ನೀರಾವರಿ ತಜ್ಞ ಸಂಪಿಗೆ ಜಗದೀಶ್ ಮಾತನಾಡಿ, ತುಮಕೂರು ಜಿಲ್ಲೆಯ ಜನರಿಗೆ ಹೇಮಾವತಿ ನೀರು ಜೀವನಾಡಿ, ನಮಗೆ ಹಂಚಿಕೆಯಾಗಿರುವ ನೀರನ್ನು ಉಳಿಸಿಕೊಂಡು ಸದ್ಬಳಕೆ ಮಾಡಿಕೊಳ್ಳಲು ಹೋರಾಟವೇ ಮುಂದಿನ ದಾರಿ. ಇದಕ್ಕಾಗಿ ಎಲ್ಲರೂ ಪಕ್ಷ ಬೇಧ ಮರೆತು ಹೋರಾಟ ನಡೆಸಬೇಕು. ನಮ್ಮ ನೀರು, ನಮ್ಮ ಹಕ್ಕು ಪ್ರತಿಪಾದಿಸಬೇಕು ಎಂದು ಮನವಿ ಮಾಡಿದರು.

ಈ ಯೋಜನೆಯು ಜಿಲ್ಲೆಯಲ್ಲಿ ಅಂತರ್ಜಲ ಮಟ್ಟವನ್ನು ಹೆಚ್ಚಿಸಲು ಮತ್ತು ಕುಡಿಯುವ ನೀರನ್ನು ಪೂರೈಸಲು ಪ್ರಮುಖ ಕೊಡುಗೆ ನೀಡುತ್ತದೆ. ಮೂಲ ಯೋಜನೆ ಪ್ರಕಾರ ಹೇಮಾವತಿ ಜಲಾಶಯ ಯೋಜನೆ ಸಂಪೂರ್ಣ ನೀರಾವರಿ ಯೋಜನೆಯಾಗಿದ್ದು, ಅದನ್ನು ಸಾಕಾರಗೊಳಿಸುವಲ್ಲಿ ಇಚ್ಛಾಶಕ್ತಿ ಕಮಡುಬಂದಿಲ್ಲ ಎಂದು ವಿಷಾದಿಸಿದರು.

ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಯೋಜನೆ ಸಾಕಾರಗೊಂಡರೆ ಅದು ತುಮಕೂರು ಜಿಲ್ಲೆಯ ಜನರ ಪಾಲಿಗೆ ಮರಣಶಾಸನವಾಗಲಿದೆ. ಜಿಲ್ಲೆಯಲ್ಲಿ ಕಾಲುವೆಗಳು ಆಗುತ್ತಿದ್ದವೇ ಹೊರತು ಇದೂವರೆಗೆ ಅಚ್ಚುಕಟ್ಟು ಘೋಷಣೆ ಮಾಡಿಲ್ಲ. ಹೀಗಾಗಿ ಜಿಲ್ಲೆಯ ನೀರಿನ ಪ್ರಮಾಣ ಕಳೆದುಕೊಳ್ಳಬೇಕಾಯಿತು. ಈಗ ಉಳಿದಿರುವುದು ಒಂದೇ ಮಾರ್ಗ: ಅದು ಜಿಲ್ಲೆಗೆ ಹಂಚಿಕೆ ಆಗಿರುವ ನೀರನ್ನು ಉಳಿಸಿಕೊಳ್ಳುವುದು. ಅದಕ್ಕಾಗಿ ಹೋರಾಟವೇ ಉಳಿದಿರುವ ಏಕೈಕ ಮಾರ್ಗ ಎಂದು ಸಂಪಿಗೆ ಜಗದೀಶ್ ಹೇಳಿದರು.

ಎಪಿಎಂಸಿ ಮಾಜಿ ಅಧ್ಯಕ್ಷ ಪಂಚಾಕ್ಷರಯ್ಯ, ತುಮಕೂರು ಮಹಾನಗರ ಪಾಲಿಕೆ ಮಾಜಿ ಸದಸ್ಯ ಕೆ.ಪಿ. ಮಹೇಶ್, ಕನ್ನಡ ಸೇನೆ ಜಿಲ್ಲಾಧ್ಯಕ್ಷ ಧನಿಯಾಕುಮಾರ್, ರೈತ ಸಂಘದ ಜಿಲ್ಲಾದ್ಯಕ್ಷ ಹೆಚ್.ಡಿ. ರಾಮಲಿಂಗಯ್ಯ, ಮುಖಂಡರಾದ ಡಾ.ಆರ್. ಮಂಜುನಾಥ್, ಗೋವಿಂದರಾಜು, ಎ.ಆರ್. ಶ್ರೀಕಾಂತ್, ತರಕಾರಿ ಮಹೇಶ್, ಆಟೋ ನವೀನ್, ಕೆ. ಹರೀಶ್, ಎನ್. ಗಣೇಶ್, ಮದನ್‌ಸಿಂಗ್, ವಿನಯ್ ಅದ್ವೈತ ಮೊದಲಾದವರು ಉಪಸ್ಥಿತರಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy